ದೆಹಲಿ ವಾರ್ತೆ

ಅಕ್ಟೋಬರ್ 1, 2026, ಗುರುವಾರ



**ಶ್ರೀ ಡಿ. ಕೆ. ಶಿವಕುಮಾರ್**
ಮಾನ್ಯ ಮುಖ್ಯಮಂತ್ರಿಗಳು

# ಬಿಡಿಎಯಿಂದ ಹೊಸ ಯುಗಕ್ಕೆ ನಾಂದಿ

## ನಾಗರಿಕ ಕೇಂದ್ರಿತ ಆಡಳಿತ

**ನಾಗರಿಕ ಕೇಂದ್ರಿತ ಆಡಳಿತ ಪ್ರಕ್ರಿಯೆಯಲ್ಲಿ ಪಾರದರ್ಶಕತೆ.**
**ಕಾರ್ಯದಲ್ಲಿ ಹೊಣೆಗಾರಿಕೆ.**

**100ನೇ ಓಪನ್ ಹೌಸ್ ಸಭೆ | 1 ಅಕ್ಟೋಬರ್ 2026**

## ಬಿಡಿಎ ಮುಕ್ತ ಸಾರ್ವಜನಿಕ ಸಭೆ

ಒಂದು ವರ್ಷದ ಹಿಂದೆ, ಮಾನ್ಯ ಮುಖ್ಯಮಂತ್ರಿ ಶ್ರೀ ಡಿ. ಕೆ. ಶಿವಕುಮಾರ್ ಅವರ ನಿರ್ದೇಶನದಲ್ಲಿ ಹಾಗೂ ಬಿಡಿಎ ಅಧ್ಯಕ್ಷರು ಮತ್ತು ಶಾಂತಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಎನ್. ಎ. ಹ್ಯಾರಿಸ್ ಅವರ ದೂರದೃಷ್ಟಿ ಮತ್ತು ನಾಯಕತ್ವದಲ್ಲಿ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಕೇಂದ್ರವಾಗಿಟ್ಟುಕೊಂಡು ಸಾರ್ವಜನಿಕ ಕುಂದುಕೊರತೆ ಪರಿಹಾರ ವ್ಯವಸ್ಥೆಯನ್ನು ಬಲಪಡಿಸಲು ಬಿಡಿಎ ಮುಕ್ತ ಸಾರ್ವಜನಿಕ ಸಭೆಗಳನ್ನು ಆರಂಭಿಸಿತು.

ಇಂದು, ಸಾರ್ವಜನಿಕ ಕುಂದುಕೊರತೆಗಳ ಬಗ್ಗೆ ಮುಕ್ತ ಸಾರ್ವಜನಿಕ ಸಭೆಗಳನ್ನು ನೇರಪ್ರಸಾರ ಮಾಡುವ ದೇಶದ ಏಕೈಕ ಸಂಸ್ಥೆ ಬಿಡಿಎ. ಇದರಿಂದ ನಾಗರಿಕರು ಕುಂದುಕೊರತೆ ಪರಿಹಾರ ಪ್ರಕ್ರಿಯೆಯನ್ನು ನೇರವಾಗಿ ವೀಕ್ಷಿಸಬಹುದು.

ಮುಕ್ತ ಸಾರ್ವಜನಿಕ ಸಭೆಗಳ ಯೂಟ್ಯೂಬ್ ನೇರಪ್ರಸಾರವು ಪರಿಹಾರ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಸಾರ್ವಜನಿಕರ ಪರಿಶೀಲನೆಗೆ ಅವಕಾಶ ಕಲ್ಪಿಸಿದೆ.

ಬಿಡಿಎ ತನ್ನ 100ನೇ ಮುಕ್ತ ಸಾರ್ವಜನಿಕ ಸಭೆಯ ಮೈಲಿಗಲ್ಲು ತಲುಪುತ್ತಿರುವ ಸಂದರ್ಭದಲ್ಲಿ, ಮಾನ್ಯ ಮುಖ್ಯಮಂತ್ರಿಗಳ ದೂರದೃಷ್ಟಿಯ ನಾಯಕತ್ವವನ್ನು ಕೃತಜ್ಞತೆಯಿಂದ ಸ್ಮರಿಸಿ, ಮಾನ್ಯ ಉಪ ಮುಖ್ಯಮಂತ್ರಿಗಳ ನಿರಂತರ ಮಾರ್ಗದರ್ಶನ ಮತ್ತು ಬೆಂಬಲಕ್ಕೆ ಧನ್ಯವಾದ ಸಲ್ಲಿಸುತ್ತೇವೆ.



## ಬಿಡಿಎ ಖಾತರಿ ಹೇಗೆ ಕಾರ್ಯನಿರ್ವಹಿಸುತ್ತದೆ?

### 1 ಸಲ್ಲಿಸಿ

ಬಿಡಿಎಗೆ ಸಂಬಂಧಿಸಿದ ಕುಂದುಕೊರತೆಯನ್ನು ಅಂತರ್ಜಾಲ, ನೇರವಾಗಿ, ಇ-ಮೇಲ್ (bda.helpline2025@gmail.com), ವಾಟ್ಸ್ಆ್ಯಪ್ (94831 66622), ಸಹಾಯವಾಣಿ (94831 66622), ಕುಂದುಕೊರತೆ ಜಾಲತಾಣ (https://grievance.bdakarnataka.in), ಅಥವಾ ಅಧಿಕೃತ ಸಾಮಾಜಿಕ ಜಾಲತಾಣಗಳ ಮೂಲಕ ಸಲ್ಲಿಸಬಹುದು. ಭೌತಿಕ ಅರ್ಜಿಗಳನ್ನು ಏಕೀಕೃತ ಟಪಾಲ್ ವ್ಯವಸ್ಥೆ ಮೂಲಕ ಡಿಜಿಟಲೀಕರಿಸಿ ಇ-ಕಚೇರಿಗೆ ಜೋಡಿಸಲಾಗುತ್ತದೆ.

### 2 ನೋಂದಣಿ ಮತ್ತು ಗುರುತು ಸಂಖ್ಯೆ

ದಾಖಲೆಗಳನ್ನು ಪರಿಶೀಲಿಸಿ, ಸ್ಕ್ಯಾನ್ ಮಾಡಿ ದಾಖಲಿಸಲಾಗುತ್ತದೆ. ಪ್ರತಿಯೊಂದು ನೊಂದಾಯಿತ ಕುಂದುಕೊರತೆಗೆ ಅದರ ಸ್ಥಿತಿ ತಿಳಿಯಲು ವಿಶಿಷ್ಟ ಕುಂದುಕೊರತೆ ಗುರುತು ಸಂಖ್ಯೆ ನೀಡಲಾಗುತ್ತದೆ

### 3 ವರ್ಗೀಕರಣ ಮತ್ತು ರವಾನೆ

ಕುಂದುಕೊರತೆಯನ್ನು ಸಂಬಂಧಿತ ಪೂರ್ವ, ಪಶ್ಚಿಮ, ಉತ್ತರ ಅಥವಾ ದಕ್ಷಿಣ ವಲಯಕ್ಕೆ ಕಳುಹಿಸಿ ತುರ್ತು, ಸಾಮಾನ್ಯ ಅಥವಾ ಓಪನ್ ಹೌಸ್ ಎಂದು ವರ್ಗೀಕರಿಸಲಾಗುತ್ತದೆ. ಬೇರೆ ಪ್ರಾಧಿಕಾರಕ್ಕೆ ಸಂಬಂಧಿಸಿದ್ದರೆ ಸೂಕ್ತ ಮಾರ್ಗದರ್ಶನ ನೀಡಲಾಗುತ್ತದೆ.

### 4 ಅಧಿಕಾರಿಗೆ ಜವಾಬ್ದಾರಿ ವಹಿಸುವಿಕೆ

ಕುಂದುಕೊರತೆಯನ್ನು ಸಂಬಂಧಿತ ಇಂಜಿನಿಯರಿಂಗ್, ನಗರ ಯೋಜನೆ, ಭೂಸ್ವಾಧೀನ, ಕಂದಾಯ, ಕಾನೂನು, ನಿವೇಶನ ಹಂಚಿಕೆ ಅಥವಾ ಎಸ್ಟೇಟ್ ವಿಭಾಗದ ಅಧಿಕಾರಿಗೆ ಜವಾಬ್ದಾರಿ ವಹಿಸಲಾಗುತ್ತದೆ.

### 5 ಪರಿಶೀಲನೆ ಮತ್ತು ಕ್ರಮ

ಅಧಿಕಾರಿಯು ದಾಖಲೆ ಪರಿಶೀಲನೆ, ಸ್ಥಳ ಪರಿಶೀಲನೆ ಹಾಗೂ ಇತರ ವಿಭಾಗಗಳ ಸಮನ್ವಯದ ಮೂಲಕ ವಾಸ್ತವಾಂಶ ಖಚಿತಪಡಿಸಿಕೊಂಡು ಕ್ರಮ ಕೈಗೊಳ್ಳುತ್ತಾರೆ.

### 6 ಮುಕ್ತಾಯ ಅಥವಾ ಮುಂದಿನ ಕ್ರಮ

ಕ್ರಮದ ಬಳಿಕ ನಾಗರಿಕರನ್ನು ಸಂಪರ್ಕಿಸಲಾಗುತ್ತದೆ. ಪರಿಹಾರ ತೃಪ್ತಿಕರವಾದರೆ ಪ್ರಕರಣ ಮುಕ್ತಾಯಗೊಳ್ಳುತ್ತದೆ. ಇಲ್ಲವಾದರೆ ಮುಂದಿನ ಕ್ರಮಕ್ಕೆ ತೆಗೆದುಕೊಳ್ಳಲಾಗುತ್ತದೆ.

"ಪ್ರತಿಯೊಂದು ಕುಂದುಕೊರತೆಗೂ ಕಿವಿಗೊಡುವ, ಪ್ರತಿಯೊಂದು ಕ್ರಮಕ್ಕೂ ಹೊಣೆಗಾರಿಕೆ ಇರುವ ಮತ್ತು ಸಾರ್ವಜನಿಕ ಸೇವೆಯ ಕೇಂದ್ರದಲ್ಲಿ ಪಾರದರ್ಶಕತೆಯನ್ನು ಉಳಿಸುವ ನಾಗರಿಕ ಕೇಂದ್ರಿತ ಆಡಳಿತದ ಮಹತ್ವದ ಮೈಲಿಗಲ್ಲು ಬಿಡಿಎ ಓಪನ್ ಹೌಸ್ ಸಭೆಗಳು."



**ಡಾ. ಜಿ. ಪರಮೇಶ್ವರ**
ಮಾನ್ಯ ಉಪಮುಖ್ಯಮಂತ್ರಿಗಳು

## ಸಾರ್ವಜನಿಕರ ಮುಂದೆಯೇ ಪ್ರಕ್ರಿಯೆ

ನಾಗರಿಕರು ಮತ್ತು ಸಂಬಂಧಿತ ಅಧಿಕಾರಿಗಳು ತಮ್ಮ ಪ್ರಕರಣಗಳನ್ನು ಬಿಡಿಎ ಅಧ್ಯಕ್ಷರು ಮತ್ತು ಆಯುಕ್ತರ ಮುಂದೆ ಮಂಡಿಸುತ್ತಾರೆ. ಸಭೆಯನ್ನು ಯೂಟ್ಯೂಬ್ ನಲ್ಲಿ ನೇರಪ್ರಸಾರ ಮಾಡಲಾಗುತ್ತದೆ; ಎಲ್ಲಾ ನಾಗರಿಕರಿಗೆ ಆನ್ಲೈನ್ ಮೂಲಕವೂ ಭಾಗವಹಿಸಲು ಅವಕಾಶವಿದೆ. ಇದರಿಂದ ಚರ್ಚೆ, ನೀಡಿದ ಭರವಸೆ ಮತ್ತು ಕೈಗೊಂಡ ಕ್ರಮಗಳ ಸಾರ್ವಜನಿಕ ದಾಖಲೆ ರೂಪುಗೊಳ್ಳುತ್ತದೆ.

## ಬಿಡಿಎ ಖಾತರಿ

100 ದಿನಗಳೊಳಗೆ ಪರಿಹಾರ – ಅಥವಾ ಲಿಖಿತ ಹಿಂಬರಹ. ಕುಂದುಕೊರತೆ ಪರಿಹಾರಕ್ಕೆ ಬಿಡಿಎ ಕ್ರಮ ಕೈಗೊಳ್ಳುತ್ತದೆ. ಪರಿಹಾರ ಸಾಧ್ಯವಾಗದಿದ್ದರೆ ನಾಗರಿಕರಿಗೆ ಲಿಖಿತ ಹಿಂಬರಹ ನೀಡಲಾಗುತ್ತದೆ; ಅಗತ್ಯವಿದ್ದಲ್ಲಿ ಮೇಲ್ಮಟ್ಟದ ಪ್ರಾಧಿಕಾರವನ್ನು ಸಂಪರ್ಕಿಸಲು ಇದು ನೆರವಾಗುತ್ತದೆ

ನಾಗರಿಕರು, ಜವಾಬ್ದಾರಿಯುತ ಅಧಿಕಾರಿಗಳು ಮತ್ತು ಬಿಡಿಎ ನಾಯಕತ್ವವನ್ನು ಒಂದೇ ಪಾರದರ್ಶಕ ವೇದಿಕೆಗೆ ಬಿಡಿಎ ಖಾತರಿ ತರುತ್ತದೆ.

ಇದರಿಂದ ಕುಂದುಕೊರತೆ ಪರಿಹಾರ ಇನ್ನಷ್ಟು ಸುಲಭ, ಪಾರದರ್ಶಕ ಮತ್ತು ಹೊಣೆಗಾರಿಕೆಯುತವಾಗುತ್ತದೆ.

"ಐತಿಹಾಸಿಕ 100ನೇ ಓಪನ್ ಹೌಸ್ ಸಭೆಯ ಈ ಸಂದರ್ಭದಲ್ಲಿ, ಪಾರದರ್ಶಕತೆ, ತ್ವರಿತ ಪರಿಹಾರ ಮತ್ತು ನಾಗರಿಕ ಕೇಂದ್ರಿತ ಅಭಿವೃದ್ಧಿಗೆ ಬಿಡಿಎ ತನ್ನ ಬದ್ಧತೆಯನ್ನು ಮತ್ತಷ್ಟು ದೃಢಪಡಿಸುತ್ತದೆ – ಉತ್ತಮ ಬೆಂಗಳೂರಿಗಾಗಿ."



**ಶ್ರೀ ಎನ್. ಎ. ಹ್ಯಾರಿಸ್**
ಮಾನ್ಯ ಅಧ್ಯಕ್ಷರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಹಾಗೂ ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ

948 316 6622
bda.helpline2025@gmail.com
@BDAOfficialGok

## ನಿತ್ಯ ಪಂಚಾಂಗ 1.10.2026 ಗುರುವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ–ಭಾದ್ರಪದ ಮಾಸ**

ಭಾದ್ರಪದ ಬಹುಳ, ಪಂಚಮಿ, ಕೃತ್ತಿಕ ನಕ್ಷತ್ರ, ವಿಶ್ವಕರ್ಮ ಪೂಜೆ, ಕೊಪ್ಪಳ|ಉಪ್ಪಳ ಹನುಮಂತಾವದೂತ ಆರಾಧನೆ, ಅಂತರರಾಷ್ಟ್ರೀಯ ಹಿರಿಯರ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ನವದೆಹಲಿಯಲ್ಲಿ ಅದ್ಧೂರಿಯಾಗಿ ಜರುಗಿದ ಕಲ್ಯಾಣ ಕರ್ನಾಟಕ ಉತ್ಸವ–2026

## ನವದೆಹಲಿಯಲ್ಲಿರುವ ಕಲ್ಯಾಣ ಕರ್ನಾಟಕದ ಕನ್ನಡಿಗರ ಸಾಂಸ್ಕೃತಿಕ ಸಮ್ಮಿಲನಕ್ಕೆ ವೇದಿಕೆಯಾದ ಉತ್ಸವ




**ನವದೆಹಲಿ, ಸೆ.30:** ಕಲ್ಯಾಣ ಕರ್ನಾಟಕದ ಶ್ರೀಮಂತ ಇತಿಹಾಸ, ಪರಂಪರೆ, ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ವೈವಿಧ್ಯವನ್ನು ರಾಷ್ಟ್ರ ರಾಜಧಾನಿಯಲ್ಲಿ ಪರಿಚಯಿಸುವ ಉದ್ದೇಶದಿಂದ ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್ (ರಿ.), ನವದೆಹಲಿ, ದೆಹಲಿ ಕರ್ನಾಟಕ ಸಂಘದ ಸಹಯೋಗದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ–2026ವನ್ನು ಸೆಪ್ಟೆಂಬರ್ 27ರಂದು ದೆಹಲಿ ಆರ್ ಕೆ ಪುರಂನಲ್ಲಿ ಇರುವ ದೆಹಲಿ ಕರ್ನಾಟಕ ಸಂಘದ ಸಭಾಂಗಣದಲ್ಲಿ, ಅದ್ಧೂರಿಯಾಗಿ ಆಯೋಜಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಕರ್ನಾಟಕ ಬ್ಯಾಂಕ್ ಲಿಮಿಟೆಡ್‌ನ ಜನರಲ್ ಮ್ಯಾನೇಜರ್ ಬಸವರಾಜ ದೇಸಳ್ಳಿ ಭಾಗವಹಿಸಿ ಮಾತನಾಡಿ, ಕಲ್ಯಾಣ ಕರ್ನಾಟಕ ಪ್ರದೇಶದ ಶ್ರೀಮಂತ ಇತಿಹಾಸ, ವೈವಿಧ್ಯಮಯ ಸಂಸ್ಕೃತಿ, ಜನಪದ ಪರಂಪರೆ ಮತ್ತು ಕಲಾ ವೈಭವದ ಕುರಿತು ವಿವರಿಸಿದರು. ಈ ಪ್ರದೇಶದ ಸಾಂಸ್ಕೃತಿಕ ಕೊಡುಗೆ ಕರ್ನಾಟಕದ ಒಟ್ಟಾರೆ ಸಾಂಸ್ಕೃತಿಕ ಪರಂಪರೆಯಲ್ಲಿ ಮಹತ್ವದ ಸ್ಥಾನ ಹೊಂದಿದೆ ಎಂದು ಅವರು ಹೇಳಿದರು.




ಗೌರವ ಅತಿಥಿಯಾಗಿ ಎನ್‌ಸಿಐಎಸ್‌ಎಂನ ಬೋರ್ಡ್ ಆಫ್ ಆಯುರ್ವೇದ ಅಧ್ಯಕ್ಷ ಡಾ. ಅಲ್ಲಮಪ್ರಭು ಗುಡ್ಡ ಮಾತನಾಡಿ, ಒಂದುಕಾಲದಲ್ಲಿ ದೇಶದ ಅತ್ಯಂತ ಹಿಂದುಳಿದ ಪ್ರದೇಶಗಳಲ್ಲಿ ಒಂದೆಂದು ಪರಿಗಣಿಸಲ್ಪಟ್ಟಿದ್ದ ಕಲ್ಯಾಣ ಕರ್ನಾಟಕ ಇಂದು ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಪ್ರಗತಿ ಸಾಧಿಸುತ್ತಿದ್ದು, ಕ್ರಮೇಣ ಶೈಕ್ಷಣಿಕ ಕೇಂದ್ರವಾಗಿ ರೂಪುಗೊಳ್ಳುತ್ತಿರುವುದನ್ನು ವಿವರಿಸಿದರು. ಶಿಕ್ಷಣ, ಆರೋಗ್ಯ, ಉದ್ಯೋಗ ಮತ್ತು ಸಾಮಾಜಿಕ ಅಭಿವೃದ್ಧಿಯಲ್ಲಿ ಈ ಪ್ರದೇಶದಲ್ಲಿ ಉಂಟಾಗುತ್ತಿರುವ ಬದಲಾವಣೆಗಳ ಕುರಿತು ಅವರು ಮಾತನಾಡಿದರು.

ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್‌ನ ಅಧ್ಯಕ್ಷರು ಮಾತನಾಡಿ, ಹಿಂದಿನ ಹೈದರಾಬಾದ್ ಕರ್ನಾಟಕ ಪ್ರದೇಶದ ಐತಿಹಾಸಿಕ ಹಿನ್ನೆಲೆ, ಅದರ ಸಾಮಾಜಿಕ–ಸಾಂಸ್ಕೃತಿಕ ಬೆಳವಣಿಗೆ ಹಾಗೂ ನಂತರ 'ಕಲ್ಯಾಣ ಕರ್ನಾಟಕ' ಎಂದು ಮರುನಾಮಕರಣಗೊಂಡ ಹಿನ್ನೆಲೆಯನ್ನು ವಿವರಿಸಿದರು. ಕಲ್ಯಾಣ ಕರ್ನಾಟಕದ ಪರಂಪರೆ ಮತ್ತು ಸಂಸ್ಕೃತಿಯನ್ನು ದೇಶದ ವಿವಿಧ ಭಾಗಗಳಲ್ಲಿ ಪರಿಚಯಿಸುವುದು ಹಾಗೂ ದೆಹಲಿ–ಎನ್‌ಸಿಆರ್‌ನಲ್ಲಿರುವ ಕಲ್ಯಾಣ ಕರ್ನಾಟಕದ ಕನ್ನಡಿಗರನ್ನು ಒಂದೇ ವೇದಿಕೆಯಡಿ ಒಗ್ಗೂಡಿಸುವುದು ಟ್ರಸ್ಟ್‌ನ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ ಎಂದು ಹೇಳಿದರು.

ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಆರ್.ರೇಣುಕುಮಾರ್ ಮಾತನಾಡಿ, ದೆಹಲಿ–ಎನ್‌ಸಿಆರ್‌ನಲ್ಲಿ ನೆಲೆಸಿರುವ ಕಲ್ಯಾಣ ಕರ್ನಾಟಕದ ಕನ್ನಡಿಗರಿಗೆ ದೆಹಲಿ ಕರ್ನಾಟಕ ಸಂಘದಿಂದ ಅಗತ್ಯ ಸಹಕಾರ ಮತ್ತು ಬೆಂಬಲವನ್ನು ನೀಡುವುದಾಗಿ ಭರವಸೆ ನೀಡಿದರು. ದೆಹಲಿಯ ಕನ್ನಡಿಗರಿಗಾಗಿ ಕಲ್ಯಾಣ ಕರ್ನಾಟಕದ ಜನರು ನೀಡುತ್ತಿರುವ ಸಹಕಾರಕ್ಕೆ ಪ್ರತಿಯಾಗಿ ಸಂಘವೂ ಸದಾ ಅವರೊಂದಿಗೆ ನಿಲ್ಲಲಿದೆ ಎಂದು ಹೇಳಿದರು.




### ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿ–2026 ಪ್ರದಾನ

ಕಾರ್ಯಕ್ರಮದ ಅಂಗವಾಗಿ ಕಲ್ಯಾಣ ಕರ್ನಾಟಕದ ಶಿಕ್ಷಣ, ಸಮಾಜ ಮತ್ತು ಸಾರ್ವಜನಿಕ ಕ್ಷೇತ್ರಗಳಿಗೆ ಸಲ್ಲಿಸಿದ ಸೇವೆಯನ್ನು ಗುರುತಿಸಿ ಕಲ್ಯಾಣ ಕರ್ನಾಟಕ ರತ್ನ ಪ್ರಶಸ್ತಿ–2026 ಅನ್ನು ಮಾತೋಶ್ರೀ ಡಾ. ದಾಕ್ಷಾಯಿಣಿ ಎಸ್.ಅಪ್ಪಾ, ಅಧ್ಯಕ್ಷರು, ವಿದ್ಯಾವರ್ಧಕ ಸಂಘ, ಕಲಬುರಗಿ ಹಾಗೂ

ಡಾ. ಗುರುಲಿಂಗಪ್ಪ ಎಂ. ಪಾಟೀಲ್, ವಿಶ್ರಾಂತ ಸಹ –ಕುಲಪತಿ, ದೆಹಲಿ–ಎನ್‌ಸಿಆರ್ ಅವರಿಗೆ ಪ್ರದಾನ ಮಾಡಿ ಗೌರವಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಮೆರುಗು ಉತ್ಸವದ ಪ್ರಮುಖ ಆಕರ್ಷಣೆ ಯಾಗಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ದೆಹಲಿ–ಎನ್‌ಸಿಆರ್‌ನ ಸ್ಥಳೀಯ ಕನ್ನಡ ಕಲಾವಿದರು ವಿವಿಧ ಜಾನಪದ, ಶಾಸ್ತ್ರೀಯ ಮತ್ತು ಭಕ್ತಿ ಪ್ರಧಾನ ನೃತ್ಯ ಹಾಗೂ ಸಂಗೀತ ಕಾರ್ಯಕ್ರಮಗಳನ್ನು ಪ್ರದರ್ಶಿಸುವ ಮೂಲಕ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರರಾದರು.

ಖ್ಯಾತ ಹಾಸ್ಯ ಕಲಾವಿದ ಡಾ. ಬೆಣ್ಣೆ ಬಸವರಾಜ್ ಅವರ ಸ್ಟ್ಯಾಂಡ್–ಅಪ್ ಕಾಮಿಡಿ ಕಾರ್ಯಕ್ರಮ ಪ್ರೇಕ್ಷಕರನ್ನು ನಗೆಗಡಲಿನಲ್ಲಿ ತೇಲಿಸಿತು. ಕನ್ನಡ ಸರಿಗಮಪ ಫೈನಲಿಸ್ಟ್ ಗಾಯಕಿ ಕು. ಭೂಮಿಕಾ ಗಡಾದ್ ತಮ್ಮ ಅದ್ಭುತ ಗಾಯನದ ಮೂಲಕ ಪ್ರೇಕ್ಷಕರನ್ನು ರಂಜಿಸಿ, ಹಲವರನ್ನು ಹೆಜ್ಜೆ ಹಾಕುವಂತೆ ಮಾಡಿದರು.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕದ ಜನಪದ ಸೊಗಡು, ಭಕ್ತಿ ಪರಂಪರೆ ಮತ್ತು ಕನ್ನಡ ಸಂಸ್ಕೃತಿಯ ವೈವಿಧ್ಯಮಯ ಮುಖಗಳು ಅನಾವರಣಗೊಂಡವು.

ಕಾರ್ಯಕ್ರಮದ ಆರಂಭದಲ್ಲಿ ಕಲ್ಯಾಣ ಕನ್ನಡಿಗರ ಸಾಂಸ್ಕೃತಿಕ ಟ್ರಸ್ಟ್‌ನ ಕಾರ್ಯದರ್ಶಿ ರಾಜಕುಮಾರ್ ನೀಲೂರ್ ಅವರು ಅತಿಥಿಗಳನ್ನು ಸ್ವಾಗತಿಸಿದರು. ಶ್ರೀ ಕಾಶಿನಾಥ್ ಬಿರಾದಾರ್ ಹಾಗೂ ಪ್ರಭಾಕರ್ ಮಡಿತೊಟ್ಟ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ದೆಹಲಿ ಕರ್ನಾಟಕ ಸಂಘದ ಕಾರ್ಯದರ್ಶಿ ರಾಧಾಕೃಷ್ಣ ಅವರು ವಂದನಾರ್ಪಣೆ ಸಲ್ಲಿಸಿದರು.

ಕಲ್ಯಾಣ ಕರ್ನಾಟಕದ ಇತಿಹಾಸ, ಪರಂಪರೆ, ಸಂಸ್ಕೃತಿ ಮತ್ತು ಸಾಧನೆಗಳನ್ನು ದೆಹಲಿ–ಎನ್‌ಸಿಆರ್‌ನ ಇಂದಿನ ಪೀಳಿಗೆಗೆ ಪರಿಚಯಿಸುವುದರೊಂದಿಗೆ, ವಿವಿಧ ಭಾಗಗಳಲ್ಲಿ ನೆಲೆಸಿರುವ ಕನ್ನಡಿಗರ ನಡುವೆ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವಲ್ಲಿ ಕಲ್ಯಾಣ ಕರ್ನಾಟಕ ಉತ್ಸವ–2026 ಮಹತ್ವದ ವೇದಿಕೆಯಾಯಿತು.




# ಕೀಳುಮಟ್ಟದ ರಾಜಕಾರಣ ನಮಗೆ ಬೇಕಿಲ್ಲ: ವಿಜಯೇಂದ್ರ ತಿರುಗೇಟು

**ಬಿ.ಕೆ. ಹರಿಪ್ರಸಾದ್ ಬ್ಯಾನರ್ ಹರಿದುಹಾಕಿದ ಪ್ರಕರಣಕ್ಕೆ ಪ್ರತಿಕ್ರಿಯೆ**



ಬೆಂಗಳೂರು, ಸೆ.30: ಬಿ.ಕೆ. ಹರಿಪ್ರಸಾದ್ ಅವರ ಬ್ಯಾನರ್ ಹರಿದು ಹಾಕುವ ಕೀಳುಮಟ್ಟದ ರಾಜಕಾರಣದ ಅವಶ್ಯಕತೆ ನಮಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ವಾಾಧ್ಯವುಂಗಳೊಂದಿಗೆ ಮಾತನಾಡಿದ ಅವರು, ಹರಿಪ್ರಸಾದ್ ಅವರೇ ಕಾರ್ಯಕರ್ತರ ಮೂಲಕ ಬ್ಯಾನರ್ ಹರಿದು ಮಾಧ್ಯಮಗಳಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ. ನಮಗೆ ಅಂಥ ರಾಜಕಾರಣದ ಅವಶ್ಯಕತೆ ಇಲ್ಲ ಎಂದರು. ನಾನು ಎಲ್‌ಕೆಜಿಯಲ್ಲಿ ಇರಬಹುದು; ಮೊದಲ ಬಾರಿಗೆ ಶಾಸಕ ಇರಬಹುದು. ಬಿ.ಕೆ.ಹರಿಪ್ರಸಾದ್ ಅವರು ಡಾಕ್ಟರ್ ಆದರೂ ಇದುವರೆಗೆ ಯಾವುದೇ ಚುನಾವಣೆಯಲ್ಲಿ ಗೆದ್ದಿಲ್ಲ ಎಂದರು.

**ಹೋರಾಟದ ಕಿಚ್ಚು ಹಚ್ಚಿದ ಶಿಕಾರಿಪುರ ಕ್ಷೇತ್ರ..**

ಬಿಜೆಪಿಯಿಂದ ಇತ್ತೀಚೆಗೆ ಬಳ್ಳಾರಿ ಚಲೋ ಬೃಹತ್ ಪಾದಯಾತ್ರೆ ಮಾಡಿದ್ದೆವು. ನಮ್ಮ ಹೋರಾಟದ ಯಶಸ್ಸಿನಿಂದ ಪ್ರೇರಣೆ ಪಡೆದ ಕೆಪಿಸಿಸಿ ಅಧ್ಯಕ್ಷರು ಸ್ವತಃ ನನ್ನ ಕ್ಷೇತ್ರದಲ್ಲಿ, ಯಡಿಯೂರಪ್ಪ ಅವರಿಗೆ ರಾಜಕೀಯ ಜನ್ಮ ಕೊಟ್ಟಂಥ ನಮ್ಮ ಹೆಮ್ಮೆಯ ಶಿಕಾರಿಪುರ ಕ್ಷೇತ್ರದಲ್ಲಿ ಪಾದಯಾತ್ರೆ ಮಾಡುತ್ತಿದ್ದಾರೆ. ಹೋರಾಟದ ಕಿಚ್ಚನ್ನು ಹಚ್ಚಿನ ಕೀರ್ತಿ ನಮ್ಮ ಶಿಕಾರಿಪುರ ಕ್ಷೇತ್ರಕ್ಕೆ ಸೇರುತ್ತದೆ ಎಂದು ತಿಳಿಸಿದರು. ಅವರಿಗೆ ಒಳ್ಳೆಯದಾಗಲಿ ಎಂದು ಹೇಳಿದರು.

ತಾವು ಲಂಚ ಪಡೆದವರು ಎಂಬ ಆರೋಪಕ್ಕೆ ಉತ್ತರ ನೀಡಿದ ವಿಜಯೇಂದ್ರ ಅವರು, ಹರಿಪ್ರಸಾದ್ ಅವರು ನಾಲಿಗೆ ಬಿಗಿಹಿಡಿದು ಮಾತನಾಡಲಿ; ಈಗಾಗಲೇ ಇವೆಲ್ಲವೂ ಕೋರ್ಟಿನಲ್ಲಿ ಇತ್ಯರ್ಥ ಆಗಿದೆ. ಯಡಿಯೂರಪ್ಪ, ಅವರ ಕುಟುಂಬ ನಿರಪರಾಧಿಗಳೆಂದು ಯುಪಿಎ ಸರಕಾರ ಇದ್ದಾಗ ತನಿಖೆ ನಡೆದು ಗೊತ್ತಾಗಿದೆ ಎಂದರು.

**ಹತಾಶರಾಗಿರುವ ಬಿ.ಕೆ. ಹರಿಪ್ರಸಾದ್**

ಬಿ.ಕೆ.ಹರಿಪ್ರಸಾದ್ ಹತಾಶರಾಗಿದ್ದಾರೆ. ಒಂದು ಕಡೆ ಮುಖ್ಯಮಂತ್ರಿಯವರು 100 ದಿನಗಳ ಕಾರ್ಯಕ್ರಮಕ್ಕೆ ಕೆಪಿಸಿಸಿ ಅಧ್ಯಕ್ಷರನ್ನು ಕರೆಯದೇ ಬಹಿಷ್ಕರಿಸಿದ್ದಾರೆ. ಹಾಗಾಗಿ ಹತಾಶರಾಗಿ ಪರ್ಯಾಯ ಪಾದಯಾತ್ರೆ ಮಾಡುತ್ತಿದ್ದಾರೆ. ಅನುಕಂಪ ಗಿಟ್ಟಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ. ಅವರಿಗೆ ಒಳ್ಳೆಯದಾಗಲಿ ಎಂದು ನುಡಿದರು.

# ಬಿಜೆಪಿ ಅವಧಿಯ ಭೂಸುಧಾರಣೆ ರದ್ದುಪಡಿಸಲು ರಾಹುಲ್‌ಗಾಂಧಿ ಮಧ್ಯಪ್ರವೇಶಿಸಲಿ: ಬಿ.ಆರ್.ಪಾಟೀಲ್ ಆಗ್ರಹ



**ಬೆಂಗಳೂರು, ಸೆ.30:** ಕಾಂಗ್ರೆಸ್‌ನ ಸ್ವಂತ ಶಾಸಕ ರೊಬ್ಬರು ತಮ್ಮದೇ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತ ಪಡಿಸಿರುವ ವ್ಎಂತ್ೊಂದ್ು ಬೆಳವಣಿಗೆಯಲ್ಲಿ, ಆಳಂದ ಕ್ಷೇತ್ರದ ಕಾಂಗ್ರೆಸ್ ಶಾಸಕ ಹಾಗೂ ಕರ್ನಾಟಕ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಅವರು ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಪತ್ರ ಬರೆದಿದ್ದಾರೆ. 2020ರಲ್ಲಿ ಬಿಜೆಪಿ ಸರ್ಕಾರ ಜಾರಿಗೆ ತಂದ ಭೂ ಸುಧಾರಣೆಗಳ ತಿದ್ದುಪಡಿಯನ್ನು ರದ್ದುಪಡಿಸುವ ನಿಟ್ಟಿನಲ್ಲಿ ತಮ್ಮದೇ ಸರ್ಕಾರ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸೆಪ್ಟೆಂಬರ್ 29ರಂದು ಬರೆದ ಪತ್ರದಲ್ಲಿ ಪಾಟೀಲ್ ಅವರು ರಾಹುಲ್ ಗಾಂಧಿ ಮಧ್ಯಪ್ರವೇಶಿಸಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅವಧಿಯಲ್ಲಿ ಮಾಡಲಾದ ತಿದ್ದುಪಡಿಗಳನ್ನು ರದ್ದುಪಡಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಈ ತಿದ್ದುಪಡಿಗಳ ಮೂಲಕ ಕರ್ನಾಟಕ ಭೂ ಸುಧಾರಣಾ ಕಾಯ್ದೆಯ 79ಎ, 79ಬಿ ಮತ್ತು 79ಸಿ ಸೆಕ್ಷನ್‌ಗಳನ್ನು ರದ್ದುಪಡಿಸ ಲಾಗಿತ್ತು. ಇದರಿಂದ ನಿಗದಿತ ಆದಾಯ ಮಿತಿಗಿಂತ ಹೆಚ್ಚಿನ ಆದಾಯ ಹೊಂದಿರುವವರು ಹಾಗೂ ಕೃಷಿಕರಲ್ಲದವರು ರಾಜ್ಯದಲ್ಲಿ ಕೃಷಿ ಭೂಮಿ ಖರೀದಿಸುವುದರ ಮೇಲಿದ್ದ ನಿರ್ಬಂಧಗಳು ತೆಗೆದುಹಾಕಲ್ಪಟ್ಟವು. ಪಾಟೀಲ್ ಅವರು ಈ ತಿದ್ದುಪಡಿಗಳನ್ನು ರೈತ ವಿರೋಧಿ ಎಂದು ಬಣ್ಣಿಸಿದ್ದಾರೆ. ಅಲ್ಲದೆ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಾಡಲಾದ ಈ ಬದಲಾವಣೆಗಳನ್ನು ರದ್ದುಪಡಿಸುವುದು 2023ರ ವಿಧಾನಸಭಾ ಚುನಾವಣೆಯ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಗಳಲ್ಲಿ ಒಂದಾಗಿತ್ತು ಎಂದು ಅವರು ಗಮನ ಸೆಳೆದಿದ್ದಾರೆ.

ಪಾಟೀಲ್ ಅವರ ಪ್ರಕಾರ, ಕೃಷಿ ಭೂಮಿ ಖರೀದಿಯ ಮೇಲಿದ್ದ ನಿರ್ಬಂಧಗಳನ್ನು ಸಡಿಲಿಸಿದ ನಂತರ ಸುಮಾರು 19.92 ಲಕ್ಷ ಎಕರೆ ಕೃಷಿ ಭೂಮಿ ಕೈಬದಲಾಗಿದೆ. ಈ ಭೂಮಿಯ ಗಮನಾರ್ಹ ಭಾಗವು ಈಗ ಕೃಷಿ ಉದ್ದೇಶಕ್ಕೆ ಬಳಸಲಾಗುತ್ತಿಲ್ಲ ಎಂದು ಅವರು ವಾದಿಸಿದ್ದಾರೆ. ಇದರಿಂದ ಭವಿಷ್ಯದಲ್ಲಿ ಕೃಷಿ ಭೂಮಿ ಮತ್ತು ಆಹಾರ ಭದ್ರತೆಯ ಮೇಲೆ ಉಂಟಾಗಬಹುದಾದ ಪರಿಣಾಮಗಳ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ರೈತರು ತಾವು ಮಾರಾಟ ಮಾಡುವ ಭೂಮಿಗೆ ಉತ್ತಮ ಬೆಲೆ ಪಡೆಯಬಹುದು. ಆದರೆ ನಂತರ ಅವರು ಭೂಮಿಯಿಲ್ಲದವರಾಗುತ್ತಾರೆ. ಈಗ ಹೆಚ್ಚಿನ ಭೂಮಿ ಖರೀದಿಸುವವರು ಸ್ಥಳೀಯರಲ್ಲ ಎಂದು ಪಾಟೀಲ್ ತಿಳಿಸಿದ್ದಾರೆ.

ರೈತ ಮುಖಂಡ ಹಾಗೂ ರೈತ ಸಂಘದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಕೂಡ ಇದೇ ರೀತಿಯ ಆತಂಕ ವ್ಯಕ್ತಪಡಿಸಿದ್ದಾರೆ.

ಶ್ರೀಮಂತ ಖರೀದಿದಾರರು ಅನೇಕ ಬಾರಿ ಭೂಮಿಯನ್ನು ಕೃಷಿಗೆ ಬಳಸದೆ, ಮನರಂಜನಾ ಉದ್ದೇಶಗಳಿಗಾಗಿ ಫಾರ್ಮ್‌ಹೌಸ್‌ಗಳಾಗಿ ಪರಿವರ್ತಿಸುತ್ತಾರೆ ಎಂದು ಹೇಳಿದ್ದಾರೆ. 2023ರ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದರೆ, ಬಿಜೆಪಿ ಸರ್ಕಾರ ಜಾರಿಗೆ ತಂದ ರೈತ ವಿರೋಧಿ ಭೂ ಸುಧಾರಣೆಗಳನ್ನು ರದ್ದುಪಡಿಸುವುದಾಗಿ ಭರವಸೆ ನೀಡಿತ್ತು. ಆದರೆ, ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಮೂರು ವರ್ಷಕ್ಕೂ ಹೆಚ್ಚು ಕಾಲ ಕಳೆದ ನಂತರ, ಪಾಟೀಲ್ ಅವರು ಇದೀಗ ಪಕ್ಷದ ಹಿರಿಯ ರಾಷ್ಟ್ರೀಯ ನಾಯಕರಿಗೆ ಪತ್ರ ಬರೆದು ಈ ವಿಷಯದಲ್ಲಿ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದ್ದಾರೆ.

# ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗೆ ಜಪಾನಿನ ಮಿಟ್ಸುಬಿಶಿ ಕಾರ್ಪೊರೇಷನ್‌ನ ಸಹಯೋಗ: ಎಸ್.ಈ.ಸುಧೀಂದ್ರ ಚಿಂತನೆ

**ಬೆಂಗಳೂರು, ಸೆ.30:** ಜಪಾನ್ ದೇಶದ ಮಿಟ್ಸ್‌ಬಿಶಿ ಕಾರ್ಪೊರೇಷನ್‌ನ ನಿರ್ದೇಶಕರಾದ ಕೆಂಟಾರೋ ತನಕ, ಅವರ ನಾಯಕತ್ವದಲ್ಲಿ, ಮನು ಹರಿ ಜನರಲ್ ಮ್ಯಾನೇಜರ್, ನ್ಯಾಹೊ ಇನ್ನ ಡೆಪ್ಯೂಟಿ ಜನರಲ್ ಮ್ಯಾನೇಜರ್ ಮಿಟ್ಸ್‌ಬಿಶಿ, ಭಾರತ ದೇಶದ ಪ್ರತಿನಿಧಿಗಳೊಂದಿಗೆ ಬುಧವಾರ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಎಸ್.ಈ.ಸುಧೀಂದ್ರ ಅವರನ್ನು ಮಂಡಳಿಯ ಆಡಳಿತ ಕಚೇರಿಯಲ್ಲಿ ಭೇಟಿಯಾಗಿ ಕರ್ನಾಟಕ ರಾಜ್ಯದಲ್ಲಿನ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿ, ಮೂಲಸೌಕರ್ಯಗಳು, ಪೂರಕ ವಾತಾವರಣ ಸೃಜನೆ ಸಂಬಂಧ ವಿಚಾರ ವಿನಿಮಯ ನಡೆಸಿದರು. ಇತ್ತೀಚೆಗೆ ಜಪಾನ್ ದೇಶದ ಮಾಜಿ ವಿದೇಶಾಂಗ, ರಕ್ಷಣೆ, ಡಿಜಿಟಲ್ ಸಚಿವರು ಹಾಗೂ ಮುಂದಿನ ಪ್ರಧಾನ ಮಂತ್ರಿ ಅಭ್ಯರ್ಥಿಯಾದ ತಾರೋ ಕೋನೋ ಅವರನ್ನು ಮಂಡಳಿಯ ಅಧ್ಯಕ್ಷರಾದ ಎಸ್.ಈ. ಸುಧೀಂದ್ರಅವರು ಭೇಟಿಯಾಗಿರುವುದನ್ನು ಈ ಪ್ರತಿನಿಧಿಗಳ ಗಮನಕ್ಕೆ ತಂದಾಗ ಅಧ್ಯಕ್ಷರ ಉತ್ಸಾಹಿ ಕಾರ್ಯಕ್ಷಮತೆಯನ್ನು ಕೆಂಟಾರೋ ತನಕ ಪ್ರಶಂಸಿದರು.



ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಜೈವಿಕ ಇಂಧನ ಕಾರ್ಯಯೋಜನೆಗಳು ಹಾಗೂ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ನೂತನ ಜೈವಿಕ ಇಂಧನ ನೀತಿ ಪ್ರಕ್ರಿಯೆ, ರಾಜ್ಯದಲ್ಲಿ ಬಯೋಮಾಸ್ ಆಧಾರಿತ ಕಂಪ್ರೆಸ್ಡ್ ಬಯೋಗ್ಯಾಸ್, ಬಯೋಡೀಸೆಲ್, ಬಯೋಪಿಲೇಟ್ಸ್, ಬಯೋಬ್ರಿಕೆಟ್ಸ್ ವಿಭಾಗಗಳಲ್ಲಿ ಬಂಡವಾಳ ಹೂಡಿಕೆದಾರರನ್ನು ಆಕರ್ಷಿಸಿ, ಉತ್ಪಾದನಾ ಘಟಕಗಳನ್ನು ಸ್ಥಾಪಿಸಿ ಉದ್ದೇಶಿತ ಶೇ.5 ರ ಸಿಬಿಜಿ– ಸಿ ಎನ್ ಜಿ ಮಿಶ್ರಣದ 2028–29ರಲ್ಲಿ ಗುರಿ ಸಾಧನೆಗೆ ಕೈಗೊಂಡಿರುವ ಕಾರ್ಯ ಯೋಜನೆಗಳ ಕುರಿತು ವಿವರಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ಜೈವಿಕ ಇಂಧನ ಕ್ಷೇತ್ರವನ್ನು ಗ್ರಾಮೀಣಾ ಉದ್ಯೋಗ ಸೃಜನೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯ ಯೋಜನೆ ರೂಪಿಸುವ ಪ್ರಕ್ರಿಯೆಯಲ್ಲಿ ಕಾರ್ಯಶೀಲರಾಗಿರುವುದನ್ನು ಪ್ರತಿನಿಧಿಗಳ ಗಮನಕ್ಕೆ ತಂದರು. ಕರ್ನಾಟಕ ರಾಜ್ಯವು ಜೈವಿಕ ಇಂಧನ ಹಾಗೂ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಅಪಾರ ಸಾಮರ್ಥ್ಯವನ್ನು ಹೊಂದಿದ್ದು, ರಾಜ್ಯದಲ್ಲಿ ಲಭ್ಯವಿರುವ ಕೃಷಿ ತ್ಯಾಜ್ಯ, ಜೈವಿಕ ತ್ಯಾಜ್ಯ, ಮರಗಳಿಂದ ದೊರೆಯುವ ಅಖಾದ್ಯ ತೈಲಬೀಜಗಳು ಹಾಗೂ ಇತರ ಜೈವಿಕ ಸಂಪನ್ಮೂಲಗಳನ್ನು ವೈಜ್ಞಾನಿಕವಾಗಿ ಹಾಗೂ ವಾಣಿಜ್ಯಕವಾಗಿ ಬಳಸಿಕೊಳ್ಳುವ ಮೂಲಕ ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸುವ ಉದ್ದೇಶ ಹೊಂದಿದೆ ಎಂದು ತಿಳಿಸಿದರು. ಈ ಕ್ಷೇತ್ರದಲ್ಲಿ ಸೂಕ್ತ ತಂತ್ರಜ್ಞಾನ, ಬಂಡವಾಳ, ಮಾರುಕಟ್ಟೆ ಸಂಪರ್ಕ ಹಾಗೂ ಸುಸ್ಥಿರ ಪೂರೈಕೆ ಸರಪಳಿ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಮೂಲಕ ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಮತ್ತು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಕ್ರಮವಹಿಸುತ್ತಿವೆ ಎಂದು ತಿಳಿಸಿದರು. ಜೈವಿಕ ಇಂಧನ ಉತ್ಪಾದನಾ ಘಟಕಗಳ ಸ್ಥಾಪನೆಗೆ ಅಗತ್ಯವಿರುವ ಕಚ್ಚಾವಸ್ತುಗಳ ನಿರಂತರ ಲಭ್ಯತೆ, ಸಂಗ್ರಹಣೆ ಮತ್ತು ಸಾಗಣೆ, ತಂತ್ರಜ್ಞಾನ, ಹೂಡಿಕೆ, ಮಾರುಕಟ್ಟೆ, ವಿತರಣಾ ವ್ಯವಸ್ಥೆ ಹಾಗೂ ಕೌಶಲ್ಯಾಭಿವೃದ್ಧಿ ಮುಂತಾದ ಅಂಶಗಳಿಗೆ ಆದ್ಯತೆ ನೀಡಲಾಗುತ್ತಿರುವುದನ್ನು ಪರಿಗಣಿಸಿ ಮಿಟ್ಸ್‌ಬಿಶಿ ಕಂಪನಿಯು ಬಂಡವಾಳ ಹೂಡಿಕೆಗೆ ಸಿದ್ದವಾಗಿದ್ದು ರಾಜ್ಯದಲ್ಲಿ ಜೈವಿಕ ಇಂಧನ ಕೈಗಾರಿಕೆಗಳಿಗೆ ಭೂಮಿ ಹಾಗೂ ಕಚ್ಚಾವಸ್ತುಗಳ ಪೂರೈಕೆಯ ನಿರೀಕ್ಷೆ ವ್ಯಕ್ತಪಡಿಸಿದರು. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯು ಜೈವಿಕ ಇಂಧನ ಕ್ಷೇತ್ರದಲ್ಲಿ ತಂತ್ರಜ್ಞಾನ ವರ್ಗಾವಣೆ, ಸಂಶೋಧನೆ ಮತ್ತು ಅಭಿವೃದ್ಧಿ, ಹೂಡಿಕೆ, ಉತ್ಪಾದನೆ ಹಾಗೂ ಮಾರುಕಟ್ಟೆ ಸಂಪರ್ಕ ಸೇರಿದಂತೆ ವಿವಿಧ ಹಂತಗಳಲ್ಲಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳೊಂದಿಗೆ ಸಹಕಾರವನ್ನು ವಿಸ್ತರಿಸಲು ಉದ್ದೇಶಿಸಿದೆ ಎಂದು ಎಸ್. ಈ. ಸುಧೀಂದ್ರ ತಿಳಿಸಿದರು. ಕರ್ನಾಟಕ ಮತ್ತು ಜಪಾನ್ ನಡುವಿನ ಸಹಕಾರವು ಮುಂದಿನ ದಿನಗಳಲ್ಲಿ ಜೈವಿಕ ಇಂಧನ ಕ್ಷೇತ್ರದಲ್ಲಿ ಹೊಸ ತಂತ್ರಜ್ಞಾನಗಳು, ಹೂಡಿಕೆ ಅವಕಾಶಗಳು ಮತ್ತು ಸುಸ್ಥಿರ ಇಂಧನ ಪರಿಹಾರಗಳ ಅಭಿವೃದ್ಧಿಗೆ ವೇದಿಕೆಯಾಗಲಿದೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

ಈ ವಿಚಾರ ವಿನಿಮಯ ಚರ್ಚೆಯಲ್ಲಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾದ ಶಿವಶಂಕರ್ ಎಲ್, ಆಹಾರ, ನಾಗರಿಕ ಪೂರೈಕೆ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಪ್ರದೀಪ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೋಹಿತ್ ಬಿ.ಆರ್, ಯೋಜನಾ ಸಲಹೆಗಾರ ಡಾ.ದಯಾನಂದ ಜಿ.ಎನ್, ಸಲಹೆಗಾರರಾದ ಪ್ರಸಾದ್ ರೆಬ್ಬಪ್ರಗಡ, ಡಾ.ಜ್ಯೋತಿ ಹದ್ಲಿ, ನಿರ್ದೇಶಕರು, ಕೆ.ಆರ್ ರಘುನಾಥ್, ವ್ಯವಸ್ಥಾಪಕ ನಿರ್ದೇಶಕರು ಕೆಐಎಸ್ ಗ್ರೂಪ್ ಭಾಗಿಯಾಗಿದ್ದರು.

# ಹಾಸನಕ್ಕೆ ಶೀಘ್ರ ವಿಮಾನಸೇವೆ ಆರಂಭ: ಸಚಿವ ಕೆ.ಎಂ. ಶಿವಲಿಂಗೇಗೌಡ ಆಶಯ

**ಹಾಸನ, ಸೆ.30:** ಜಿಲ್ಲೆಯಲ್ಲಿ ಆದಷ್ಟು ಶೀಘ್ರವಾಗಿ ವಿಮಾನ ಸೇವೆ ಆರಂಭಗೊಳ್ಳಬೇಕು ಎಂಬುದು ಆಶಯವಾಗಿದೆ. ವಿಮಾನ ನಿಲ್ದಾಣ ಯೋಜನೆಗೆ ಕೇಂದ್ರ ಸರ್ಕಾರದಿಂದ ಪರಿಸರ ಅನುಮತಿ ಪಡೆಯುವ ನಿಟ್ಟಿನಲ್ಲಿ ಸಮರ್ಪಕ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಅಬಕಾರಿ ಸಚಿವ ಹಾಗೂ ಹಾಸನ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದ್ದಾರೆ.

ವಿಕಾಸಸೌಧದಲ್ಲಿ ಬುಧವಾರ ನಡೆದ ಹಾಸನ ನಗರದ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣದ ಕಾಮಗಾರಿ ಕುರಿತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಮಾಲೋಚನೆ ನಡೆಸಿದ ಕೆ.ಎಂ. ಶಿವಲಿಂಗೇಗೌಡ ಅವರು ಯೋಜನೆ ವಿಳಂಬವಾಗುತ್ತಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಯಾವುದೇ ಯೋಜನೆ ಕಾರ್ಯರೂಪಕ್ಕೆ ಬರುವ ಮೊದಲು ಅಡಚಣೆಗಳನ್ನು ಪೂರ್ವಭಾವಿಯಾಗಿ ಪರಿಹರಿಸಿಕೊಳ್ಳಬೇಕು. ಯೋಜನೆಗೆ ಕೈಹಾಕಿದ ಮೇಲೆ ಅಡಚಣೆಗಳ ನಿವಾರಣೆಗೆ ಪ್ರಯತ್ನಿಸಿದರೆ ಕಗ್ಗಂಟಾಗುತ್ತದೆ. ಪರಿಸರ ಅನುಮತಿ ಪಡೆಯುವ ನಿಟ್ಟಿನಲ್ಲಿ ಪ್ರಯತ್ನ ನಡೆಸಲಾಗುವುದು ಎಂದಿದ್ದಾರೆ.

# ಪರಿಷತ್ ಚುನಾವಣೆ ಮಾದರಿ ನೀತಿಸಂಹಿತೆ: ತುರ್ತು, ಅಭಿವೃದ್ಧಿ, ಸೇವಾ ಕಾರ್ಯಗಳಿಗೆ ಅಡ್ಡಿಯಾಗದಿರಲಿ

**ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಚುನಾವಣಾ ಆಯುಕ್ತರಿಗೆ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನಾ ವಿಭಾಗದ ಅಧ್ಯಕ್ಷ ರಮೇಶ್‌ಬಾಬು ಮನವಿ**



**ಬೆಂಗಳೂರು, ಸೆ.30:** ವಿಧಾನಪರಿಷತ್ತಿನ 4 ಕ್ಷೇತ್ರಗಳಿಗೆ ಅ.23ರಂದು ನಡೆಯಲಿರುವ ದ್ವೈವಾರ್ಷಿಕ ಚುನಾವಣೆ ನಡೆಯಲಿದ್ದು, ಮಾದರಿ ನೀತಿಸಂಹಿತೆ ಸಮರ್ಪಕ ಜಾರಿ, ಬರಪರಿಹಾರ, ಕುಡಿಯುವ ನೀರಿನ ಪೂರೈಕೆ, ಪ್ರಜಾಸೇವಾ ಕಾರ್ಯಕ್ರಮ, ತುರ್ತು ಹಾಗೂ ಇತರ ಅಗತ್ಯ ಅಭಿವೃದ್ಧಿ ಮತ್ತು ಸಾರ್ವಜನಿಕ ಸೇವಾ ಕಾಮಗಾರಿಗಳಿಗೆ ಅನಗತ್ಯವಾಗಿ ಅಡ್ಡಿಯಾಗದಂತೆ ಸೂಕ್ತ ನಿರ್ದೇಶನ ನೀಡುವಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ವಿಧಾನ ಪರಿಷತ್ ಮಾಜಿ ಸದಸ್ಯ ಹಾಗೂ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನಾ ವಿಭಾಗದ ಅಧ್ಯಕ್ಷ ರಮೇಶ್‌ಬಾಬು ಮನವಿ ಮಾಡಿದ್ದಾರೆ.

ಕೇಂದ್ರ ಚುನಾವಣಾ ಆಯೋಗವು ಹೊರಡಿಸಿರುವ ಸೂಚನೆಗಳ ಅನುಸಾರ, ಚುನಾವಣೆಗೆ ಒಳಪಡುವ ಸಂಬಂಧಿತ ಕ್ಷೇತ್ರಗಳು/ಜಿಲ್ಲೆಗಳಲ್ಲಿ ಮಾದರಿ ನೀತಿ ಸಂಹಿತೆ ಅನ್ವಯವಾಗುತ್ತದೆ. ಆದರೆ ಕೆಲವು ಜಿಲ್ಲೆಗಳಲ್ಲಿ ಕೆಲವು ಅಧಿಕಾರಿಗಳು ಮಾದರಿ ನೀತಿ ಸಂಹಿತೆಯನ್ನು ಅತಿಯಾದ ವ್ಯಾಪ್ತಿಯಲ್ಲಿ ಅರ್ಥೈಸಿಕೊಂಡು, ಸರ್ಕಾರದ ಬಹುತೇಕ ಎಲ್ಲಾ ಸಾಮಾನ್ಯ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಸೇವಾ ಚಟುವಟಿಕೆಗಳನ್ನೂ ನಿಷೇಧಿತವೆಂದು ಪರಿಗಣಿಸುತ್ತಿರುವುದು ವರದಿಯಾಗಿದೆ. ತುರ್ತು ಕಾಮಗಾರಿಗಳು ಹಾಗೂ ಅಗತ್ಯ ಸಾರ್ವಜನಿಕ ಸೇವಾ ಚಟುವಟಿಕೆಗಳು ವಿಳಂಬವಾಗುತ್ತಿವೆ ಅಥವಾ ಸ್ಥಗಿತಗೊಳ್ಳುತ್ತಿವೆ. ಪ್ರಸ್ತುತ ವಿಶೇಷವಾಗಿ ಬರ ಪರಿಸ್ಥಿತಿ ಹಾಗೂ ಕುಡಿಯುವ ನೀರಿನ ತೀವ್ರ ಅಗತ್ಯವಿರುವ ಸಂದರ್ಭದಲ್ಲಿ ಕೆಲವು ತುರ್ತು ಮತ್ತು ಅಗತ್ಯ ಚಟುವಟಿಕೆಗಳನ್ನು ಕೇವಲ ಮಾದರಿ ನೀತಿಸಂಹಿತೆ ಜಾರಿಯಲ್ಲಿದೆ ಎಂಬ ಕಾರಣಕ್ಕೆ ಅನಗತ್ಯವಾಗಿ ವಿಳಂಬಗೊಳಿಸಬಾರದು ಅಥವಾ ಸ್ಥಗಿತಗೊಳಿಸಬಾರದು ಮನವಿ ಮಾಡಿದ್ದಾರೆ.

ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು ಜಿಲ್ಲಾ ಚುನಾವಣಾಧಿಕಾರಿಗಳು/ ಉಪ ಆಯುಕ್ತರು ಮತ್ತು ಇತರೆ ಸಂಬಂಧಿತ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನಗಳನ್ನು ನೀಡಿ, ಮಾದರಿ ನೀತಿ ಸಂಹಿತೆಯ ಹೆಸರಿನಲ್ಲಿ ಅಗತ್ಯ ಅಭಿವೃದ್ಧಿ ಮತ್ತು ಸಾರ್ವಜನಿಕ ಸೇವಾ ಚಟುವಟಿಕೆಗಳನ್ನು ಅನಗತ್ಯವಾಗಿ ಸ್ಥಗಿತಗೊಳಿಸದಂತೆ ನೋಡಿಕೊಳ್ಳಬೇಕು. ಜೊತೆಗೆ, ರಾಜ್ಯದ ಸಾಮಾನ್ಯ ಆಡಳಿತ, ಬರ ಪರಿಹಾರ, ಕುಡಿಯುವ ನೀರಿನ ಪೂರೈಕೆ, ಪ್ರಜಾಸೇವಾ ಕಾರ್ಯಕ್ರಮ ಹಾಗೂ ಜನರಿಗೆ ಅಗತ್ಯವಿರುವ ಇತರೆ ಅತ್ಯಾವಶ್ಯಕ ಸಾರ್ವಜನಿಕ ಸೇವೆಗಳು ಅನಗತ್ಯವಾಗಿ ವ್ಯತ್ಯಯಗೊಳ್ಳದಂತೆ ಸೂಕ್ತ ಸ್ಪಷ್ಟೀಕರಣ ಮತ್ತು ನಿರ್ದೇಶನಗಳನ್ನು ತಕ್ಷಣ ನೀಡುವಂತೆ ಕೋರಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 96 | ನವದೆಹಲಿ | ಬೆಲೆ ₹10 | ಅಕ್ಟೋಬರ್ 1, 2026, ಗುರುವಾರ

## ಒಳಪುಟಗಳಲ್ಲಿ

ಓಲಾ, ಉಬರ್, ರ್‍ಯಾಪಿಡೊಗೆ ದೆಹಲಿ ಹೈಕೋರ್ಟ್ ನೋಟಿಸ್ - ಪು.5

ಕಲಬುರಗಿ ಯುವಜನರಿಗೆ ಕ್ರಿಕೆಟ್‌ನ ವಿವಿಧ ತಾಂತ್ರಿಕ ಕೌಶಲ್ಯಗಳ ತರಬೇತಿ - ಪು.6

ಎಂಆರ್‌ಪಿಎಲ್‌ನ ಸಿಎಚ್‌ಟಿ ಘಟಕದಲ್ಲಿ ಅಗ್ನಿ ಅವಘಡ - ಪು.7

# ಪ್ರಜಾಪ್ರಭುತ್ವ ಉಳಿಸಿ: ಅ.2ರಿಂದ ಇಂಡಿಯಾ ಕೂಟದಿಂದ ಪಾದಯಾತ್ರೆ



**ನವದೆಹಲಿ, ಸೆ.30: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ತನ್ನ ಪ್ರತಿಭಟನೆಯನ್ನು ತೀವ್ರಗೊಳಿಸಲು 'ಇಂಡಿಯಾ' ಒಕ್ಕೂಟ ನಿರ್ಧರಿಸಿದೆ.**

ಬುಧವಾರ ನಡೆದ ಮೈತ್ರಿಕೂಟದ ಸಭೆಯ ನಂತರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಜಾಪ್ರಭುತ್ವವನ್ನು ರಕ್ಷಿಸಲು ವಿರೋಧ ಪಕ್ಷಗಳು ಜಂಟಿಯಾಗಿ ದೇಶಾದ್ಯಂತ ಚಳವಳಿಯನ್ನು ಪ್ರಾರಂಭಿಸಲಿವೆ ಎಂದು ಚಳವಳಿಯ ಮುಂದಿನ ಹಂತವನ್ನು ಘೋಷಿಸಿದರು.

ಖರ್ಗೆ ಅವರ ಪ್ರಕಾರ, ಅಕ್ಟೋಬರ್ 2 ರಿಂದ ಅಕ್ಟೋಬರ್ 8 ರವರೆಗೆ ಜಿಲ್ಲಾಮಟ್ಟದಲ್ಲಿ 'ಪ್ರಜಾಪ್ರಭುತ್ವ ಉಳಿಸಿ' ಪಾದಯಾತ್ರೆಗಳನ್ನು ನಡೆಸಲಾಗುವುದು. ಅಕ್ಟೋಬರ್ 6 ರಂದು ವಿರೋಧ ಪಕ್ಷದ ಸಂಸದರು ಚುನಾವಣಾ ಆಯೋಗಕ್ಕೆ ಮೆರವಣಿಗೆ ನಡೆಸಲಿದ್ದಾರೆ. ಅಕ್ಟೋಬರ್ ಎರಡನೇ ವಾರದಲ್ಲಿ 'ಇಂಡಿಯಾ' ಒಕ್ಕೂಟದ ನಾಯಕರು ರಾಷ್ಟ್ರಪತಿಗಳ ಭೇಟಿಗೆ ಸಮಯ ಕೋರಲಿದ್ದಾರೆ. ಅಲ್ಲದೆ, ನವೆಂಬರ್ 1 ರಂದು ದೆಹಲಿಯಲ್ಲಿ ನಡೆಯಲಿರುವ ಬೃಹತ್ ರ್‍ಯಾಲಿ ಸೇರಿದಂತೆ ಐದು ಪ್ರಮುಖ ರ್‍ಯಾಲಿಗಳನ್ನು ಮೈತ್ರಿಕೂಟ ಆಯೋಜಿಸಲಿದ್ದು, ಅಲ್ಲಿ 'ಮತ ಕಳವು' ಆರೋಪಕ್ಕೆ ಸಂಬಂಧಿಸಿದ ವಿಷಯಗಳನ್ನು ಎತ್ತಿ ತೋರಿಸಲಾಗುವುದು ಎಂದು ಅವರು ಹೇಳಿದರು. ಮತದಾರರ ಪಟ್ಟಿ ಪರಿಷ್ಕರಣೆಗೆ

### ಮೈತ್ರಿಕೂಟ ಸಭೆ ನಂತರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಘೋಷಣೆ

ಸಂಬಂಧಿಸಿದ ಎಲ್ಲಾ ಪ್ರಕರಣಗಳನ್ನು ಸುಪ್ರೀಂ ಕೋರ್ಟ್ ಶೀಘ್ರವಾಗಿ ವಿಲೇವಾರಿ ಮಾಡಬೇಕೆಂದು ಮೈತ್ರಿಕೂಟ ಒತ್ತಾಯಿಸಿದೆ.

'ಮತ ಕಳವು' ವಿಷಯದ ಕುರಿತು ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದಿದ್ದು, ಎಲ್ಲಾ ಮೈತ್ರಿಕೂಟದ ಪಕ್ಷಗಳ ನಾಯಕರು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದ್ದಾರೆ ಎಂದು ಖರ್ಗೆ ಹೇಳಿದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮಾತನಾಡಿ, ಈ ವಿಷಯದ ಬಗ್ಗೆ ವಿರೋಧ ಪಕ್ಷಗಳು ಸುಮ್ಮನೆ ಕುಳಿತುಕೊಳ್ಳುವುದಿಲ್ಲ ಎಂದರು. ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವವರ ವಿರುದ್ಧ ಕ್ರಮ ಕೈಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು 'ಇಂಡಿಯಾ' ಒಕ್ಕೂಟದ ಎಲ್ಲಾ ನಾಯಕರು ವೈಯಕ್ತಿಕವಾಗಿ ಬದ್ಧರಾಗಿದ್ದಾರೆ ಎಂದು ಅವರು ಹೇಳಿದರು.

ಭಾರತೀಯ ಪ್ರಜಾಪ್ರಭುತ್ವವು ದೇಶದ ಯಾವುದೇ ವ್ಯಕ್ತಿಗಿಂತ ದೊಡ್ಡದಾಗಿದೆ ಎಂದು ರಾಹುಲ್ ಹೇಳಿದರು. ಚುನಾವಣೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂಬ ವಿಷಯವನ್ನು ಸಾರ್ವಜನಿಕರ ಗಮನಕ್ಕೆ ತರುವಲ್ಲಿ ವಿರೋಧ ಪಕ್ಷಗಳು ಯಶಸ್ವಿಯಾಗಿದ್ದು, ಈ ವಿಷಯದ ಬಗ್ಗೆ ಯುವಜನರಲ್ಲಿ ಪ್ರತಿರೋಧದ ಭಾವನೆ ಬೆಳೆಯುತ್ತಿದೆ ಎಂದು ಅವರು ಪ್ರತಿಪಾದಿಸಿದರು.

ವಿರೋಧ ಪಕ್ಷದ ನಾಯಕರನ್ನು ಸಂವಿಧಾನದ ಸಾಮೂಹಿಕ ರಕ್ಷಕರು ಎಂದು ಬಣ್ಣಿಸಿದ ರಾಹುಲ್, ಮುಂಬರುವ ತಿಂಗಳುಗಳಲ್ಲಿ ದೇಶವು ಗಮನಾರ್ಹ ಬದಲಾವಣೆಗಳಿಗೆ ಸಾಕ್ಷಿಯಾಗಲಿದೆ ಎಂದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳು ಮತ್ತೊಮ್ಮೆ ಒಗ್ಗೂಡಿ ಪ್ರತಿಭಟನೆಗೆ ಮುಂದಾಗಿರುವುದು ಇಲ್ಲಿ ಸ್ಮರಿಸಬಹುದು.

## ಕೇಂದ್ರ ಸಚಿವ ಸೋಮಣ್ಣ ಭೇಟಿ ಮಾಡಿದ ಡಿಸಿಎಂ ಪರಮೇಶ್ವರ್

**ಬೆಂಗಳೂರು, ಸೆ.30:** ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಭೇಟಿ ಮಾಡಿ, ತುಮಕೂರು ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ. ಜಿ. ಪರಮೇಶ್ವರ್, ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಹಾಗೂ ಪ್ರಸ್ತಾವಿತ ವಿವಿಧ ಅಭಿವೃದ್ಧಿ ಯೋಜನೆಗಳು, ಕಾಮಗಾರಿಗಳ ಪ್ರಗತಿ ಹಾಗೂ ಮುಂದಿನ ಹಂತದ ಕ್ರಮಗಳ ಕುರಿತು ಸಮಾಲೋಚನೆ ನಡೆಸಲಾಗಿದ್ದು, ಈ ಭೇಟಿ ಫಲಪ್ರದವಾಗಿದ್ದು, ಜಿಲ್ಲೆಯ ಪ್ರಗತಿಗೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

## ಫಾರ್ಮ್–6 ನಿಯಮ ಹಿಂಪಡೆದ ಆಯೋಗ

**ನವದೆಹಲಿ, ಸೆ. 30:** ಎಸ್‌ಐಆರ್ ಪ್ರಕ್ರಿಯೆಯಲ್ಲಿ ಹೊಸ ಮತದಾರರ ನೋಂದಣಿ ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗ ಹೇರಿದ್ದ ನಿಯಮಗಳಿಂದ ಅರ್ಹ ನಾಗರಿಕರನ್ನು ಮತದಾನದ ಹಕ್ಕಿನಿಂದ ವಂಚಿಸಲಾಗುತ್ತಿದೆ ಎಂಬ ತೀವ್ರ ಆಕ್ಷೇಪ ಕೇಳಿಬಂದಿತ್ತು. ಈ ಬೆನ್ನಲ್ಲೇ, ಆಯೋಗವು ತನ್ನ ನಿಯಮದಿಂದ ಭಾಗಶಃ ಹಿಂದೆ ಸರಿದಿದೆ. ಫಾರ್ಮ್–6 ಅರ್ಜಿಯೊಂದಿಗೆ ಕಡ್ಡಾಯಗೊಳಿದ್ದ ಹೆಚ್ಚುವರಿ ಘೋಷಣಾಪತ್ರ (ಡಿಕ್ಲರೇಷನ್) ನಿಯಮವನ್ನು ಹಿಂಪಡೆದಿದೆ. ಪೋಷಕರು ಮತ್ತು ವಂಶಾವಳಿಯ ವಿವರಗಳನ್ನು ಕೇಳುವ ಕಾಲಮ್‌ಗಳನ್ನು ಸದ್ದಿಲ್ಲದೆ ತೆಗೆದುಹಾಕಿದೆ.

ಆಯೋಗದ ಈ ಅನಗತ್ಯ ಮತ್ತು ಕಾನೂನುಬಾಹಿರ ತಾಂತ್ರಿಕ ನಿರ್ಬಂಧಗಳ ವಿರುದ್ಧ ಸ್ವತಃ ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರೇ ಆಂತರಿಕವಾಗಿ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಇಂತಹ ಏಕಪಕ್ಷೀಯ ಹಾಗೂ ಕೇಂದ್ರೀಕೃತ ನಿರ್ಧಾರಗಳು ಚುನಾವಣಾ ಆಯೋಗದಂತಹ ಸ್ವಾಯತ್ತ ಸಂಸ್ಥೆಯ ವಿಶ್ವಾಸಾರ್ಹತೆಗೇ ಧಕ್ಕೆ ತರುತ್ತವೆ ಎಂದು ತಜ್ಞರೂ ಕಳವಳ ವ್ಯಕ್ತಪಡಿಸಿದ್ದರು. ಕಾನೂನಿನ ಸ್ಪಷ್ಟ ಚೌಕಟ್ಟನ್ನು ಮೀರಿ ತಂತ್ರಾಂಶದ ನೆಪದಲ್ಲಿ ಈ ನಿಯಮವನ್ನು ಜಾರಿಗೆ ತಂದಿರುವುದು ಸಾಂಸ್ಥಿಕ ಅಧಿಕಾರ ಹರಣ ಎಂದೂ ಸಾರ್ವಜನಿಕ ವಲಯದಲ್ಲಿ ಭಾರೀ ಆಕ್ರೋಶ ವ್ಯಕ್ತವಾಗಿತ್ತು.

ಇದೀಗ, ಈ ನಿಯಮವನ್ನು ಆಯೋಗ ಹಿಂಪಡೆದುಕೊಂಡಿದೆ. ಆದರೆ, ಪೂರ್ಣ ಪ್ರಮಾಣದಲ್ಲಿ ಹಿಂಪಡೆಯಲಾಗಿಲ್ಲ. ಪ್ರಸ್ತುತ ಎಸ್‌ಐಆರ್ ನಡೆಯದೇ ಇರುವ ರಾಜ್ಯಗಳಿಗೆ ಮಾತ್ರ ಈ ಸಡಿಲಿಕೆ ಅನ್ವಯವಾಗಲಿದ್ದು, ಎಸ್‌ಐಆರ್ ಪ್ರಕ್ರಿಯೆ ಚಾಲ್ತಿಯಲ್ಲಿರುವ ರಾಜ್ಯಗಳಲ್ಲಿ ಇಂದಿಗೂ ಈ ಹೆಚ್ಚುವರಿ ಕಾಗದಪತ್ರಗಳ ಕಡ್ಡಾಯ ನಿಯಮ ಜಾರಿಯಲ್ಲೇ ಇದೆ. ಪರಿಣಾಮವಾಗಿ, ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿರುವ ರಾಜ್ಯಗಳ ಅರ್ಹ ನಾಗರಿಕರು ಇಂದಿಗೂ ಅದೇ ತಾಂತ್ರಿಕ ಕಿರುಕುಳ ಅನುಭವಿಸುತ್ತಿದ್ದಾರೆ. ತಮ್ಮ ಮತದಾನದ ಹಕ್ಕಿನಿಂದ ವಂಚಿತರಾಗುವ ಆತಂಕ ಎದುರಿಸುತ್ತಿದ್ದಾರೆ.

# ಚಾಮರಾಜನಗರ ಜಿಲ್ಲೆ ಸಮಗ್ರ ಅಭಿವೃದ್ಧಿಗೆ ಸಂಕಲ್ಪ



**ಚಾಮರಾಜನಗರ, ಸೆ.30:** ಚಾಮರಾಜನಗರ ಜಿಲ್ಲೆಯ ಜನರಿಗೆ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಶಕ್ತಿ ತುಂಬುವ ಮೂಲಕ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಸಂಕಲ್ಪ ತೊಟ್ಟಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಕೊಳ್ಳೇಗಾಲ–ಹನೂರು ಕ್ಷೇತ್ರಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಇಡೀ ಸರ್ಕಾರ ಚಾಮರಾಜನಗರ ಜನತೆಯ ಜೊತೆಗಿದೆ. ಈ ಹಿಂದೆ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆಸಿ, ಈ ಜಿಲ್ಲೆಗೆ 3 ಸಾವಿರ ಕೋಟಿ ರೂ.ಗಳ ಕಾಮಗಾರಿಯನ್ನು ನೀಡಿ, ಜಿಲ್ಲೆಯ ಜನರನ್ನು ಅಭಿವೃದ್ಧಿಯ ಪಥಕ್ಕೆ ಕರೆದೊಯ್ಯಲಾಗಿತ್ತು. ಜನರಿಂದ ಅಧಿಕಾರಕ್ಕೆ ಬಂದ ನಮ್ಮ ಗ್ಯಾರಂಟಿ ಸರ್ಕಾರ, ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಶಂಕುಸ್ಥಾಪನೆ ನೆರವೇರಿಸಿದೆ. ನಮ್ಮ ಮಂತ್ರಿಗಳು, ಸಂಸದರು, ಶಾಸಕರು ಸೇರಿದಂತೆ ಇಡೀ ಸರ್ಕಾರ ನಿಮ್ಮೊಂದಿಗಿದೆ. ಟೀಕೆ ಎದುರಿಸಿ ಗೆದ್ದರೆ ನಾಯಕನಾಗುತ್ತಾನೆ. ಸೋತರೆ ಮಾರ್ಗದರ್ಶಕನಾಗುತ್ತಾನೆ. ಈ ಭಾಗದ ಎಲ್ಲಾ ಜನಪ್ರತಿನಿಧಿಗಳು ಕ್ಷೇತ್ರದ ಹಾಗೂ ಜನರ ಅಭಿವೃದ್ಧಿಗೆ ಪಣತೊಟ್ಟಿದ್ದಾರೆ. ನಿಮಗೆ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಶಕ್ತಿ ತುಂಬಲು ಸೇವೆ ಮಾಡುತ್ತಿದ್ದಾರೆ ಎಂದರು. ಬಹುದಿನಗಳ ಬೇಡಿಕೆಯಾಗಿದ್ದ ಅಂಬೇಡ್ಕರ್ ಭವನ ಉದ್ಘಾಟಿಸಲಾಗಿದೆ. ಮಾಜಿ ಸಚಿವರಾದ ಕೆ.ವೆಂಕಟೇಶ್ ಹಾಗೂ ಮಹದೇವಪ್ಪನವರು, ಸಿದ್ದರಾಮಯ್ಯ ನೇತೃತ್ವದಲ್ಲಿ ಕ್ಷೇತ್ರಕ್ಕೆ ಉತ್ತಮ ಸೇವೆ ಸಲ್ಲಿಸಿದ್ದಾರೆ" ಎಂದರು.

### ಅಭಿವೃದ್ಧಿ ಕಾಮಗಾರಿಗಳಿಗೆ ಸಿಎಂ ಡಿ.ಕೆ. ಶಿವಕುಮಾರ್ ಶಂಕುಸ್ಥಾಪನೆ

**ಕರ್ನಾಟಕ ಹೊಸರೂಪಕ್ಕೆ ಹೆಜ್ಜೆ ಇಟ್ಟಿದೆ:** ಕೆಲವು ಪಕ್ಷದವರು ಅಧಿಕಾರಕ್ಕೆ ಬರುವ ಕನಸು ಕಾಣುತ್ತಿದ್ದರೆ, ಅದು ಹಗಲುಕನಸು. ಈ ರಾಜ್ಯ ಹೊಸರೂಪಕ್ಕೆ ಹೆಜ್ಜೆ ಇಟ್ಟಿದೆ. ಇಂದು ಸುವರ್ಣಾವತಿ ನೀರಾವರಿ ಯೋಜನೆ ವ್ಯಾಪ್ತಿಯಲ್ಲಿ ಸರಣಿ ಕೆರೆಗಳ ಸಮಗ್ರ ಅಭಿವೃದ್ಧಿಗೆ 120 ಕೋಟಿ ಕಾಮಗಾರಿಗೆ ಕಾರ್ಯಾದೇಶ ನೀಡಲಾಗಿದೆ. ಹನೂರಿನಲ್ಲಿ ಅಂತರ್ಜಲ ಅಭಿವೃದ್ಧಿಗೆ ಸೂಕ್ತ ಅನುದಾನ ನೀಡಲಾಗಿದೆ. ಚಾಮರಾಜನಗರದ ಬಳಿ ಕಾಲುವೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಗುಂಡ್ಲುಪೇಟೆ ತಾಲ್ಲೂಕಿಗೆ 450 ಕೋಟಿ ವೆಚ್ಚದಲ್ಲಿ ನೀರಾವರಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. 1000 ಕೋಟಿ ರೂ.ಗಳ ನೀರಾವರಿ ಕಾಮಗಾರಿಗಳನ್ನು ನೀಡಲಾಗಿದ್ದು, ನನ್ನ ಅವಧಿಯಲ್ಲಿ ಇಷ್ಟು ದೊಡ್ಡ ಅಭಿವೃದ್ಧಿಯನ್ನು ಜಿಲ್ಲೆ ಕಾಣುತ್ತಿದೆ. ಅಲ್ಪಸಂಖ್ಯಾತರು ಹಾಗೂ ಬುಡಕಟ್ಟು ಜನಾಂಗದವರ ಆಹಾರ ಕಿಟ್‌ಗಳ ಬೇಡಿಕೆಗಳನ್ನು ಪರಿಗಣಿಸಲು ನನ್ನ ಸರ್ಕಾರ ಬದ್ಧವಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

### ಆರ್ಥಿಕ ಇಲಾಖೆ ಪತ್ರ ಬರೆಯಲು ಬಿಜೆಪಿ ಸರ್ಕಾರದ ಅನಾಹುತಗಳೇ ಕಾರಣ

ಯಡಿಯೂರಪ್ಪನವರು ಬಜೆಟ್ ಮೀರಿ ಯೋಜನೆಗಳ ಕಾಮಗಾರಿ ಪ್ರಾರಂಭಿಸಿದ್ದರು. ಬಿಜೆಪಿ ಸರ್ಕಾರಗಳ ಇಂತಹ ಅನಾಹುತಗಳಿಂದಾಗಿಯೇ ಆರ್ಥಿಕ ಇಲಾಖೆಯವರು ನಮಗೆ ಪತ್ರ ಬರೆದಿದ್ದಾರೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಗುತ್ತಿಗೆದಾರರ ಪತ್ರದ ಬಗ್ಗೆ ಚಾಮರಾಜನಗರ ಜಿಲ್ಲೆಯ ಹನೂರಿನ ಕೆಎಚ್ಬಿ ಹೆಲಿಪ್ಯಾಡ್ ಬಳಿ ಮಾಧ್ಯಮಗಳ ಜತೆ ಬುಧವಾರ ಪ್ರತಿಕ್ರಿಯೆ ನೀಡಿ, 30 ಸಾವಿರ ಕೋಟಿಗೂ ಅಧಿಕ ಹಣ ಬಿಡುಗಡೆಯಾಗಿಲ್ಲ ಎಂಬ ಗುತ್ತಿಗೆದಾರರ ಪತ್ರದ ಬಗ್ಗೆ ಕೇಳಿದಾಗ, ಯಡಿಯೂರಪ್ಪ ಅವರ ಸರ್ಕಾರದ ಅವಧಿಯಲ್ಲಿ ಕೊಟ್ಟ ಕೆಲಸಗಳು ಮುಗಿಯುತ್ತಿದ್ದು, ಬಿಲ್ ನೀಡಬೇಕಾಗಿದೆ. ಗುತ್ತಿಗೆದಾರರು ಉಳಿಯಬೇಕು. ಹೀಗಾಗಿ ಸಧ್ಯದಲ್ಲೇ ಆಲೋಚನೆ ಮಾಡುತ್ತೇನೆ ಎಂದರು. ಈಗಲೂ ಪರ್ಸೆಂಟೇಜ್ ಕಮಿಷನ್ ನೀಡಬೇಕು ಎಂಬ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಆರೋಪಕ್ಕೆ ಪ್ರತಿಕ್ರಿಯಿಸಿ, ಅವರು ಅಫಿಡವಿಟ್ ಸಲ್ಲಿಸಲಿ. ಈ ಬಗ್ಗೆ ತನಿಖೆ ಮಾಡಿಸಲಾಗುವುದು ಎಂದರು.

### 2028ಕ್ಕೂ ಗ್ಯಾರಂಟಿಗಳು ಮುಂದುವರಿಯಲಿವೆ

ಮುಂದಿನ ದಿನಗಳಲ್ಲಿಯೂ ನಿಮ್ಮ ಶಕ್ತಿ ಸ್ಫೂರ್ತಿ ಹಾಗೂ ನಮ್ಮ ಅಭಿವೃದ್ಧಿಯಿಂದ 2028ಕ್ಕೂ ನಿಮ್ಮ ಸರ್ಕಾರವೇ ಅಧಿಕಾರಕ್ಕೆ ಬರಲಿದೆ. ಎಲ್ಲ ಗ್ಯಾರಂಟಿಗಳು ಮುಂದುವರಿಯಲಿವೆ. ನಿಮ್ಮ ಬದುಕಿನಲ್ಲಿ ಬದಲಾವಣೆ ತರುವ ಶಪಥ ನಾವು ಮಾಡಿದ್ದೇವೆ. ಅಭಿವೃದ್ಧಿ ಎಂದರೆ ಕಟ್ಟಡ ಮಾತ್ರವಲ್ಲ, ಜನರ ಕನಸುಗಳನ್ನು ರೂಪಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

### ಪ್ರಧಾನಿ ಮೋದಿ - ಅಧ್ಯಕ್ಷ ಟ್ರಂಪ್ ಮಾತುಕತೆ:

## ಭಾರತ–ಅಮೆರಿಕ ದ್ವಿಪಕ್ಷೀಯ ಸಹಕಾರದ ಪ್ರಗತಿ ಪರಿಶೀಲನೆ





**ನವದೆಹಲಿ, ಸೆ.30:** ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜತೆ ದೂರವಾಣಿ ಸಂಭಾಷಣೆ ನಡೆಸಿದ್ದು, ವ್ಯಾಪಾರ, ರಕ್ಷಣೆ, ಇಂಧನ ಮತ್ತು ನಿರ್ಣಾಯಕ ತಂತ್ರಜ್ಞಾನ ಕ್ಷೇತ್ರಗಳಲ್ಲಿನ ಭಾರತ–ಅಮೆರಿಕ ದ್ವಿಪಕ್ಷೀಯ ಸಹಕಾರದ ಪ್ರಗತಿಯನ್ನು ಪರಿಶೀಲಿಸಿದರು. ಹಾಗೆಯೇ ಜಾಗತಿಕ ಶಾಂತಿ ಮತ್ತು ಭದ್ರತೆಯನ್ನು ಮುನ್ನಡೆಸುವ ಪ್ರಸ್ತುತ ಪ್ರಯತ್ನಗಳು ಸೇರಿದಂತೆ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.ಈ ಬಗ್ಗೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಮೋದಿ, ಟ್ರಂಪ್ ಜತೆಗಿನ ಸಂಭಾಷಣೆಯನ್ನು "ಫಲಪ್ರದ" ಎಂದು ಬಣ್ಣಿಸಿದ್ದು, ಭಾರತ–ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಸಹಭಾಗಿತ್ವವನ್ನು ಮುನ್ನಡೆಸಲು ನಿಕಟ ನಿರಂತರ ಸಂಪರ್ಕವನ್ನು ಕಾಯ್ದುಕೊಳ್ಳಲು ಪರಸ್ಪರ ಒಪ್ಪಿರುವುದಾಗಿ ಹೇಳಿದ್ದಾರೆ. ಜಾಗತಿಕ ಶಾಂತಿ ಮತ್ತು ಭದ್ರತೆಯನ್ನು ಉತ್ತೇಜಿಸುವ ನಿರಂತರ ಪ್ರಯತ್ನಗಳು ಸೇರಿದಂತೆ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಇಬ್ಬರೂ ನಾಯಕರು ಅಭಿಪ್ರಾಯ ವಿನಿಮಯ ಮಾಡಿಕೊಂಡಿದ್ದಾರೆ ಎಂದು ಪ್ರಧಾನಿ ಸೇರಿಸಿದ್ದಾರೆ. ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳಲ್ಲಿ ಉನ್ನತ ಮಟ್ಟದ ನಿರಂತರ ಸಂಪರ್ಕವನ್ನು ಕಾಯ್ದುಕೊಳ್ಳುವ ಸುಳಿವು ನೀಡಿದ ಪಿಎಂಒ ಮೋದಿ ಮತ್ತು ಟ್ರಂಪ್ ಪರಸ್ಪರ ಸಂಪರ್ಕದಲ್ಲಿರಲು ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದೆ.

## ಐಸಿಸ್ ವಿರುದ್ಧದ ಕಾರ್ಯಾಚರಣೆ ಅಂತ್ಯ ಇರಾಕ್‌ನಿಂದ ಅಮೆರಿಕ ಪಡೆಗಳ ಹಿಂತೆಗೆತ ಪೂರ್ಣ

**ಬಾಗ್ದಾದ್, ಸೆ.30:** ಇರಾಕ್‌ನಿಂದ ತನ್ನ ಸೇನಾ ಪಡೆಗಳನ್ನು ಸಂಪೂರ್ಣವಾಗಿ ಹಿಂತೆಗೆದುಕೊಳ್ಳುವ ಪ್ರಕ್ರಿಯೆಯನ್ನು ಅಮೆರಿಕ ಬುಧವಾರ ಪೂರ್ಣಗೊಳಿಸಿದೆ. ಇದರೊಂದಿಗೆ ಇಸ್ಲಾಮಿಕ್ ಸ್ಟೇಟ್ (ಐಸಿಸ್) ಉಗ್ರರ ವಿರುದ್ಧ ಹೋರಾಡಲು ಆರಂಭಿಸಲಾಗಿದ್ದ 12 ವರ್ಷಗಳ ಸುದೀರ್ಘ ಸೇನಾ ಕಾರ್ಯಾಚರಣೆ ಕೊನೆಗೊಂಡಿದ್ದು, ಬಾಗ್ದಾದ್ ಜೊತೆಗಿನ ಸಂಬಂಧವು ದ್ವಿಪಕ್ಷೀಯ ಭದ್ರತಾ ಸಹಕಾರದತ್ತ ಸಾಗಿದೆ.

2024ರಲ್ಲಿ ಬಾಗ್ದಾದ್ ಮತ್ತು ವಾಷಿಂಗ್ಟನ್ ನಡುವೆ ನಡೆದ ಒಪ್ಪಂದದಂತೆ, ಇರಾಕ್‌ನ ಅರೆ–ಸ್ವಾಯತ್ತ ಕುರ್ದಿಸ್ತಾನ್ ಪ್ರದೇಶದ ಅರ್ಬಿಲ್‌ನಲ್ಲಿರುವ ಸೇನಾ ನೆಲೆಯಿಂದ ಅಂತಿಮ ಅಮೆರಿಕನ್ ಪಡೆಗಳು ಮತ್ತು ಸೇನಾ ಉಪಕರಣಗಳು ನಿರ್ಗಮಿಸಿದವು. ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷದಿಂದಾಗಿ ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಮುಂದುವರಿದಿರುವ ಸಮಯದಲ್ಲೇ ಈ ನಿರ್ಗಮನ ನಡೆದಿದೆ. ಬಾಗ್ದಾದ್ ತನ್ನ ದೇಶದ ಸಾರ್ವಭೌಮತ್ವದ ಬೆಳವಣಿಗೆಯ ಸಂಕೇತವಾಗಿ ಅಮೆರಿಕ ಪಡೆಗಳ ನಿರ್ಗಮನವನ್ನು ಬಿಂಬಿಸಿದ್ದರೆ, ಇರಾಕ್‌ನಲ್ಲಿರುವ ಇರಾನ್ ಬೆಂಬಲಿತ ಸಶಸ್ತ್ರ ಗುಂಪುಗಳು ಅಮೆರಿಕ ಸೇನೆಯ ಉಪಸ್ಥಿತಿಯ ಅಂತ್ಯವನ್ನು ಸ್ವಾಗತಿಸಿವೆ. ಪೆಂಟಗನ್ ಮುಖ್ಯ ವಕ್ತಾರ ಶಾನ್ ಪಾರ್ನೆಲ್ ಮಾತನಾಡಿ, ಅಮೆರಿಕ ಪಡೆಗಳು ಅರ್ಬಿಲ್ ಏರ್ ಬೇಸ್‌ನಿಂದ ನಿರ್ಗಮನವನ್ನು ಪೂರ್ಣಗೊಳಿಸಿದ್ದು, ಇರಾಕ್‌ನಲ್ಲಿ ನಡೆದ 'ಆಪರೇಷನ್ ಇನ್ಹೆರೆಂಟ್ ರಿಸಾಲ್ವ್' ಮಿಷನ್ ಕೊನೆಗೊಂಡಿದೆ ಎಂದು ತಿಳಿಸಿದ್ದಾರೆ.

ಇಸ್ಲಾಮಿಕ್ ಸ್ಟೇಟ್‌ನ ಅಳಿದುಳಿದ ಉಗ್ರರು ಮತ್ತು ಇರಾನ್ ಬೆಂಬಲಿತ ಮಿಲಿಟೆಂಟ್ ಪಡೆಗಳು ಸೇರಿ ದೇಶದ ಭದ್ರತಾ ಸವಾಲುಗಳ ಪ್ರಾಥಮಿಕ ಹೊಣೆಯನ್ನು ಈಗ ಇರಾಕ್ ಭದ್ರತಾ ಪಡೆಗಳು ವಹಿಸಿಕೊಳ್ಳಲಿವೆ. ಅದೇ ಸಮಯದಲ್ಲಿ ವಾಷಿಂಗ್ಟನ್ ನಿರ್ದಿಷ್ಟ ತರಬೇತಿ ಮತ್ತು ಗುಪ್ತಚರ ಬೆಂಬಲವನ್ನು ನೀಡುವುದನ್ನು ಮುಂದುವರಿಸಲಿದೆ ಎಂದು ಅಮೆರಿಕದ ರಕ್ಷಣಾ ಇಲಾಖೆ ತಿಳಿಸಿದೆ.

# ಬಿಜೆಪಿ ರಾಜ್ಯಾಧ್ಯಕ್ಷರ ತವರಲ್ಲಿ ಕಾಂಗ್ರೆಸ್‌ನ ಭಾರತ್ ಜೋಡೋ-2 ಯಾತ್ರೆಗೆ ಚಾಲನೆ

**ಬೆಂಗಳೂರು ಸೆ.30:** ನಾವು ಈಸೂರಿನಲ್ಲಿ ಭಾರತ್ ಜೋಡೋ–2 ಎರಡು ಈ ಯಾತ್ರೆ ಆರಂಭಿಸಿದ್ದೇವೆ. 1942ನೇ ಇಸವಿಯಲ್ಲಿ ಬ್ರಿಟಿಷರ ವಿರುದ್ಧ ಗಾಂಧೀಜಿ ಅವರು ಭಾರತ ಬಿಟ್ಟು ತೊಲಗಿ ಎಂದು ಸಂದೇಶ ನೀಡಿದ್ದರು. ನಮ್ಮ ದೇಶಕ್ಕೆ 1947ರಲ್ಲಿ ಸ್ವಾತಂತ್ರ್ಯ ಬಂದಿತಾದರೂ ಈಸೂರು 1942ರಲ್ಲಿ ನಾವು ಸ್ವತಂತ್ರರು ಎಂದು ಘೋಷಣೆ ಮಾಡಿದ ವೀರನಾಡನ್ನು ಯಾವ ಪರಿಸ್ಥಿತಿಗೆ ತರಲಾಗಿದೆ. ಸಾಮಾಜಿಕ ನ್ಯಾಯದ ಹರಿಕಾರರಾದ ಬಂಗಾರಪ್ಪ, ವಿಶ್ವಮಾನವ ಸಂದೇಶ ಕೊಟ್ಟ ಕುವೆಂಪು, ರೈತ ಹೋರಾಟ ಮಾಡಿದ ಗೋಪಾಲಗೌಡರು, ಕಡಿದಾಳ್ ಮಂಜಪ್ಪ, ಜೆ.ಎಚ್.ಪಾಟೀಲ್‌ರಂತಹ ಮಹನೀಯರನ್ನು ಕೊಟ್ಟ ಜಿಲ್ಲೆ ಶಿವಮೊಗ್ಗ ಎಂದು ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಹೇಳಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರ ತವರು ಕ್ಷೇತ್ರ ಶಿಕಾರಿಪುರದಲ್ಲಿ ಭಾರತ್ ಜೋಡೋ 2 ಯಾತ್ರೆಗೆ ಬುಧವಾರ ಚಾಲನೆ ನೀಡಿ ಮಾತನಾಡಿ, ಬಿಜೆಪಿ ಈ ಜಿಲ್ಲೆಗೆ ಬಂದ ಬಳಿಕ ಜಿಲ್ಲೆ ಪರಿಸ್ಥಿತಿ ಏನಾಗಿದೆ, ವಿಜಯೇಂದ್ರ ಅವರು ಕ್ಷೇತ್ರದಲ್ಲಿ ನಾವು ಮಾಡಿರುವ ಅಭಿವೃದ್ಧಿ ನೋಡಿ ಎಂದಿದ್ದಾರೆ. ಅವರ ಅಭಿವೃದ್ಧಿ ಇದೇ ಜಿಲ್ಲೆಯ ಶಿಕಾರಿಪುರ ವಿವೇಕಾನಂದ ಶಿಕ್ಷಣ ಸಂಸ್ಥೆ ಪರಿಚಯವಿದೆಯೇ, ಮಲ್ಲಜ್ಜ ಕಟ್ಟೆ ಕೆರೆಯನ್ನು ಕಾಲೇಜಿಗೆ 90 ವರ್ಷಕ್ಕೆ ಲೀಜ್ ಪಡೆದರು. ಇದೇನಾ ಅಭಿವೃದ್ಧಿ, ಹೊನ್ನಾಳಿ ರಸ್ತೆಯಲ್ಲಿ ಬಂಡಿಭೈರನಹಳ್ಳಿ ಅರಣ್ಯ ಒತ್ತುವರಿ ಮಾಡಿ ಇವರ ಜಮೀನಿಗೆ ನೀರು ಹರಿಸಲು ಕೆರೆ ನಿರ್ಮಿಸಿ ಸನ್ಯಾಸಿ ಕೊಪ್ಪ ಏತ ನೀರಾವರಿಂದ ನೀರು ಪಡೆಯುತ್ತಿದ್ದಾರೆ ಎಂದು ಕುಟುಕಿದರು.

### ಕೇಂದ್ರ ಸರ್ಕಾರ, ಬಿಜೆಪಿ ನಾಯಕರ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ವಾಗ್ದಾಳಿ



ಈ ದೇಶದಲ್ಲಿ 7 ದೊಡ್ಡಧರ್ಮಗಳಿವೆ. ಬೇರೆ ಯಾವುದೇ ದೇಶಗಳಲ್ಲಿ ಇಷ್ಟು ದೊಡ್ಡ ಧರ್ಮಗಳಿಲ್ಲ. ಆದರೂ ನಾವು ಭಾರತೀಯರಾಗಿ ಒಂದಾಗಿ ಬದುಕುತ್ತಿದ್ದೆವು. ಬಿಜೆಪಿಯವರು ದ್ವೇಷದ ವಾತಾವರಣ ಸೃಷ್ಟಿಸಿದ್ದಾರೆ. ನರೇಂದ್ರ ಮೋದಿ ಅವರು ಧರ್ಮದ ಹೆಸರಲ್ಲಿ, ಶಾಸಕರ ಖರೀದಿ ಮಾಡಿದ್ದಾರೆ. 400 ಸೀಟು ಗೆಲ್ಲುತ್ತೇವೆ ಎಂದವರು 240ಕ್ಕೆ ಕುಸಿದರು. ಮುಂದಿನ ಬಾರಿ 140ಕ್ಕೆ ಕುಸಿಯಲಿದ್ದಾರೆ. ಈಗ ಎಸ್‌ಐಆರ್ ಮೂಲಕ ಕರ್ನಾಟಕದಲ್ಲಿ 5.47 ಕೋಟಿ ಮತದಾರರಲ್ಲಿ 1.7 ಮತದಾರರನ್ನು ಕೈಬಿಟ್ಟಿದ್ದಾರೆ. 43 ಲಕ್ಷ ಜನರಿಗೆ ನೋಟೀಸ್ ನೀಡಿದ್ದು, ಹಿರಿಯರು ಯಾವ ರೀತಿ ಅಧಿಕಾರಿ ಮುಂದೆ ನಿಂತು ಹೆಸರು ಸೇರಿಸಿಕೊಳ್ಳುತ್ತಾರೆ. ಸ್ವಾತಂತ್ರ ಉಳಿಸಿಕೊಳ್ಳಲು ಹೋರಾಟ ಮಾಡಬೇಕು ಎಂದರು

ಅಂಬೇಡ್ಕರ್ ನಮಗೆ ಮೀಸಲಾತಿ ನೀಡಿದ್ದಾರೆ. ಇದು ಬಡತನ ನಿರ್ಮೂಲನಾ ಕಾರ್ಯಕ್ರಮವಲ್ಲ. ಉದ್ಯೋಗ ವಿನಿಮಯ ಕಾರ್ಯಕ್ರಮವಲ್ಲ. 1937ರಲ್ಲಿ ವಂದೇಮಾತರಂ ಹಾಡಿನ ಮೊದಲ ಎರಡು ಪ್ಯಾರಾಗಳನ್ನು ನಾವು ಅಳವಡಿಸಿಕೊಂಡೆವು. 1950ರಲ್ಲಿ ರಾಜೇಂದ್ರ ಪ್ರಸಾದ್ ಅವರು ಇದನ್ನು ರಾಷ್ಟ್ರದ ಹಾಡು ಎಂದು ಕರೆದರು. ಕಳೆದ 80 ವರ್ಷಗಳಿಂದ ಯಾವುದೇ ರೀತಿಯ ವಿರೋಧ ಇರಲಿಲ್ಲ. ಜನರ ಗಮನ ಬೇರೆಡೆ ಸೆಳೆಯಲು ವಂದೇ ಮಾತರಂ ವಿಚಾರ ಎತ್ತಿದ್ದಾರೆ. ಗಲ್ಲಿಗೆ ಹಾಕಿದರೂ ಸರಿ ನಾವು ಮೊದಲ ಎರಡು ಪ್ಯಾರಾ ಮಾತ್ರ ಹಾಡುತ್ತೇವೆ ಎಂದು ಹೇಳಿದ್ದೇನೆ. ಮುಂದೆಯೂ ಹೇಳುವೆ. ಮೋದಿ ಸರ್ಕಾರ ಬಂದ ನಂತರ ಏನೆಲ್ಲಾ ಆಗಿದೆ. ದೇಶದಲ್ಲಿ ಮೊದಲ ಬಾರಿಗೆ ದೇಶದ 72% ಪದವೀಧರರಿಗೆ ಉದ್ಯೋಗವಿಲ್ಲ. ಯುಪಿಎ ಸರ್ಕಾರ ಇದ್ದಾಗ 72 ಸಾವಿರ ಕೋಟಿ ಸಾಲಮನ್ನಾ ಮಾಡಿದರು. ಕಾಫಿ ತೋಟಕ್ಕೆ 1200 ಕೋಟಿ ಪ್ಯಾಕೇಜ್ ನೀಡಿದರು ಎಂದು ಬಿ.ಕೆ. ಹರಿಪ್ರಸಾದ್ ಹೇಳಿದರು.

### ಮೋದಿಯ ಮನ್‌ಕೀ ಬಾತ್‌ಗೆ ಟೀಕೆ

ಮೋದಿ ಅವರ 114 ವರ್ಷಗಳ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ 12 ನಿಮಿಷಗಳ ಕಾಲ ರೈತರು, ಕಾರ್ಮಿಕರು, ವಿದ್ಯಾರ್ಥಿಗಳು, ಯುವಕರ ಉದ್ಯೋಗ, ಮಹಿಳೆಯರ ಸುರಕ್ಷತೆ ಬಗ್ಗೆ ಮಾತನಾಡಿಲ್ಲ. ಬಿಜೆಪಿ ನಾಯಕರು ಆ ಭಾಷಣ ಕೇಳಿ ಇಂಗು ತಿಂದ ಮಂಗನಂತೆ ಆಡುತ್ತಾರೆ. ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ತಿಂಗಳುಗಟ್ಟಲೆ ಹೇಳಬಲ್ಲೆ. ಬಿಜೆಪಿಯವರ ಸಾಧನೆ ಏನು ಎಂದು ಪ್ರಶ್ನಿಸಿದ ಹರಿಪ್ರಸಾದ್, ಹಿಂಸೆ ಸುಳ್ಳು ಅವರ ಮಂತ್ರ. ಎಂದು ಟೀಕಿಸಿದರು.

# ಇಂಡಿಯಾ ಮೈತ್ರಿಕೂಟದ ಪ್ರಜಾಪ್ರಭುತ್ವ ಉಳಿಸಿ ಅಭಿಯಾನ: ಕೇಂದ್ರ ಸಚಿವ ಶಿವರಾಜ್‌ಸಿಂಗ್ ಲೇವಡಿ

**ನವದೆಹಲಿ, ಸೆ.30:** ಮತಗಳ್ಳತನ ಆರೋಪ ಮತ್ತು ಎಸ್‌ಐಆರ್ ವಿವಾದಕ್ಕೆ ಸಂಬಂಧಿಸಿದಂತೆ ಅ. 02ರಂದು ಪ್ರತಿಪಕ್ಷಗಳ ಇಂಡಿಯಾ ಮೈತ್ರಿಕೂಟದ ಪ್ರಜಾಪ್ರಭುತ್ವ ಉಳಿಸಿ ಅಭಿಯಾನಕ್ಕೆ ವ್ಯಂಗ್ಯವಾಡಿರುವ ಬಿಜೆಪಿ, ಅದು ಪ್ರಜಾಪ್ರಭುತ್ವ ಉಳಿಸಿ ಅಲ್ಲ, ವಂಶಪಾರಂಪರ್ಯ ಉಳಿಸಿ ಅಭಿಯಾನ ಎಂದು ಕರೆದಿದೆ.

ನವದೆಹಲಿಯಲ್ಲಿರುವ ಕಾನ್ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ಬುಧವಾರ ಇಂಡಿಯಾ ಮೈತ್ರಿಕೂಟದ ಸಭೆ ನಡೆದಿದ್ದು, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಮತಾ ಬ್ಯಾನರ್ಜಿ, ಸಿಎಂ ಓಮರ್ ಅಬ್ದುಲ್ಲಾ ಸೇರಿ ಮೈತ್ರಿಕೂಟದ ಹಲವು ನಾಯಕರು ಭಾಗವಹಿಸಿದ್ದರು. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ವಿರುದ್ಧ ಜಂಟಿ ಪ್ರತಿಭಟನೆ ನಡೆಸಲು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಇಂಡಿಯಾ ಒಕ್ಕೂಟವು, ಪ್ರಜಾಪ್ರಭುತ್ವ ಉಳಿಸಿ ಅಭಿಯಾನ ಸೇರಿ ಸರಣಿ ಪ್ರತಿಭಟನಾ ಕಾರ್ಯಕ್ರಮಗಳನ್ನು ಘೋಷಿಸಿದೆ.




ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಮುಂಬರುವ ಚುನಾವಣೆಗಳಲ್ಲಿನ ಸೋಲಿಗೆ ಈಗಲೇ ಮುಂಗಡ ನೆಪವನ್ನು ಸೃಷ್ಟಿಸಲು ಪ್ರತಿಪಕ್ಷಗಳು ಚುನಾವಣೆ ಆಯೋಗದ ಮೇಲೆ ದಾಳಿ ಮಾಡುತ್ತಿವೆ ಎಂದು ಆರೋಪಿಸಿದ್ದಾರೆ.

ಯಾವುದೇ ದೂರದೃಷ್ಟಿಯಿಲ್ಲ, ಶೇ.100ರಷ್ಟು ಹತಾಶೆ ಮತ್ತು ಸೋಲಿಗೆ ಮುಂಚಿತವಾಗಿಯೇ ಸಿದ್ಧಪಡಿಸಿಕೊಂಡಿರುವ ನೆಪ. ಮುಂಬರುವ ಚುನಾವಣೆಗಳಿಗೆ ಮುನ್ನವೇ ಅವರು ತಮ್ಮ ಸೋಲಿಗೆ ವೇದಿಕೆ ಸಿದ್ಧಪಡಿಸಿಕೊಳ್ಳುತ್ತಿದ್ದಾರೆ. ಈಗಲೇ ಸೋಲಿಗೆ ನೆಪಗಳನ್ನು ಹುಡುಕುತ್ತಿದ್ದಾರೆ. ಅ. 2ರಿಂದ 8ರವರೆಗೆ ಪ್ರಜಾಪ್ರಭುತ್ವ ಉಳಿಸಿ ಎಂಬ ಅಭಿಯಾನ ಘೋಷಿಸಿದ್ದಾರೆ. ಇದು ಪ್ರಜಾಪ್ರಭುತ್ವ ಉಳಿಸಿ ಅಭಿಯಾನವಲ್ಲ, ಬದಲಾಗಿ ಇದು ವಂಶಪಾರಂಪರ್ಯ ಉಳಿಸಿ ಅಭಿಯಾನ ಎಂದಿದ್ದಾರೆ.

ಬುಧವಾರ ಇಂಡಿಯಾ ಮೈತ್ರಿಕೂಟದ ಸಭೆ ನಡೆಯಿತು, ಆದರೆ ಸಭೆಗೂ ಮುನ್ನವೇ ಆ ಮೈತ್ರಿಕೂಟವು ಛಿದ್ರಗೊಂಡಿದೆ. ಉತ್ತರ ಪ್ರದೇಶದಲ್ಲಿ ಚುನಾವಣೆಗಳು ನಡೆಯಬೇಕಿದೆ. ಅಲ್ಲಿ ಅಖಿಲೇಶ್ ಯಾದವ್ ಎಲ್ಲಿದ್ದರು? ಈ ವಿಷಯವು ಅಷ್ಟು ಮುಖ್ಯವಾಗಿದ್ದಲ್ಲಿ, ಅಖಿಲೇಶ್ ಯಾದವ್ ಅಲ್ಲಿ ಯಾಕೆ ಇರಲಿಲ್ಲ? ಸ್ಟಾಲಿನ್ ಎಲ್ಲಿದ್ದಾರೆ? ಕಾಂಗ್ರೆಸ್ ಇರುವ ಕಡೆ ನಾವು ಕುಳಿತುಕೊಳ್ಳುವುದಿಲ್ಲ ಎಂದು ಡಿಎಂಕೆ ಈಗಾಗಲೇ ಹೇಳಿದೆ. ಅರವಿಂದ್ ಕೇಜ್ರಿವಾಲ್ ಎಲ್ಲಿದ್ದಾರೆ? ಉದ್ಧವ್ ಠಾಕ್ರೆ ಅವರು ಖುದ್ದಾಗಿ ಹಾಜರಿಲ್ಲ. ಪವಾರ್ ಮತ್ತು ಹೇಮಂತ್ ಸೋರೇನ್ ಅವರ ಬಗ್ಗೆ ನಮಗೆ ತಿಳಿದಿಲ್ಲ. ಇಂಡಿಯಾ ಕೂಟದ ಸ್ಥಿತಿ ಹೇಗಾಗಿದೆಯೆಂದರೆ, ಒಂದು ಹೃದಯವು ಸಾವಿರಾರು ತುಂಡುಗಳಾಗಿ ಛಿದ್ರಗೊಂಡು, ಒಂದೊಂದು ತುಂಡು ಒಂದೊಂದು ಕಡೆ ಬಿದ್ದಂತಾಗಿದೆ. ವಾಸ್ತವವೇನೆಂದರೆ, ರಾಹುಲ್ ಗಾಂಧಿಯವರನ್ನು ತಮ್ಮ ನಾಯಕರನ್ನಾಗಿ ಒಪ್ಪಿಕೊಳ್ಳಲು ಮೈತ್ರಿಕೂಟ ಸಿದ್ಧವಿಲ್ಲ ಎಂದು ಪ್ರತಿಪಾದಿಸಿದ್ದಾರೆ.

# ಉದ್ಯೋಗಖಾತ್ರಿ: ಕಾರ್ಮಿಕರ ನಕಲಿ ಜಿಪಿಎಸ್ ಫೋಟೋ ತೆಗೆದು ವಂಚನೆ

**ಪ್ರತಿನಿತ್ಯ 20-30 ಸಾವಿರ ರೂ. ದುರುಪಯೋಗ, ಕೆಲಸ ಮಾಡದೆಯೇ ಹಾಜರಾತಿ: ತನಿಖೆಗೆ ಸಚಿವ ಈಶ್ವರ ಖಂಡ್ರೆ ಸೂಚನೆ**



**ಬೆಂಗಳೂರು, ಸೆ.30:** ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೂಲಿಕಾರ್ಮಿಕರ ನಕಲಿ ಜಿಪಿಎಸ್ ಫೋಟೋ ತೆಗೆದು ವಂಚಿಸಲಾಗುತ್ತಿದೆ ಎಂಬ ವರದಿ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತನಿಖೆಗೆ ಆದೇಶ ನೀಡಿದ್ದಾರೆ.

ಇಲಾಖೆಯ ಕಾರ್ಯದರ್ಶಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಕೊಪ್ಪಳ ಜಿಲ್ಲೆಯಲ್ಲಿ ಮೇಟಿಗಳು ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಕೆಲಸಗಾರರು ಹೋಗದಿದ್ದರೂ ವಿಡಿಯೋ ಚಿತ್ರೀಕರಣ ಮಾಡಿಸಿ ಆ ವಿಡಿಯೋ ಪ್ಲೇ ಆಗುತ್ತಿರುವಾಗ ಮತ್ತೊಂದು ಮೊಬೈಲ್‌ನಲ್ಲಿ ಜಿಪಿಎಸ್ ಫೋಟೋ ತೆಗೆಸಿ ವಂಚಿಸುತ್ತಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಯಾಗಿದ್ದು, ಈ ಬಗ್ಗೆ ಜಂಟಿ ನಿರ್ದೇಶಕರ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸಿ 4 ದಿನಗಳ ಒಳಗಾಗಿ ವರದಿ ಸಲ್ಲಿಸಲು ಸೂಚಿಸಿದ್ದಾರೆ.

ಈ ರೀತಿ ನಕಲಿ ಜಿಪಿಎಸ್ ಫೋಟೋ ತೆಗೆದು ಪ್ರತಿನಿತ್ಯ 20–30 ಸಾವಿರ ರೂ. ವಂಚನೆ ಮಾಡುತ್ತಿದ್ದಾರೆ, ಕೆಲಸ ಮಾಡದೆಯೇ ಹಾಜರಾತಿ ಹಾಕಿಸುತ್ತಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಯಾಗಿತ್ತು. ಇದನ್ನು ಗಂಭೀರವಾಗಿ ಪರಿಗಣಿಸಿರುವ ಈಶ್ವರ ಖಂಡ್ರೆ, ವರದಿಯಲ್ಲಿ ಅಂಶ ಸತ್ಯವಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಳ್ಳಬೇಕಾದ ಶಿಫಾರಸಿನೊಂದಿಗೆ ವಾಸ್ತವಾಂಶದ ವರದಿಯನ್ನು ಸಲ್ಲಿಸುವಂತೆ ಮತ್ತು ಈ ರೀತಿ ತಂತ್ರಜ್ಞಾನವನ್ನೇ ವಂಚಿಸಿ ಹಾಜರಾತಿ ಹಾಕದಂತೆ ತಡೆಯಲು ಏನು ಕ್ರಮ ಕೈಗೊಳ್ಳಬಹುದು ಎಂಬ ಬಗ್ಗೆ ತಜ್ಞರೊಂದಿಗೆ ಸಮಾಲೋಚಿಸಿ ಉಪಕ್ರಮ ಕೈಗೊಳ್ಳುವಂತೆಯೂ ಸೂಚಿಸಿದ್ದಾರೆ.

ಯಂತ್ರಗಳ ಮೂಲಕ ಕಾಮಗಾರಿ ನಡೆಸಿ, ಕೂಲಿ ಕಾರ್ಮಿಕರ ಅಕ್ರಮ ಹಾಜರಾತಿ ಹಾಕಿಸುವುದನ್ನು ತಪ್ಪಿಸಲು ವಿಬಿ ಜಿ ರಾಮ್ ಜಿಯಡಿ ಕೂಲಿಗೆ ಬರುವವರು ಕಾಮಗಾರಿ ನಡೆಯುವ ಸ್ಥಳದಲ್ಲಿ ಕೆಲಸ ಮಾಡುತ್ತಿರುವ ಜಿಪಿಎಸ್ ಫೋಟೋ ತೆಗೆದು ಎನ್.ಎಂ.ಎಂ.ಎಸ್. ಅಪ್ ನಲ್ಲಿ ಅಪ್ ಲೋಡ್ ಮಾಡುವುದನ್ನು ಕಡ್ಡಾಯ ಮಾಡಲಾಗಿದೆ. ಆದರೆ ಕೆಲವರು ಈ ತಂತ್ರಜ್ಞಾನಕ್ಕೆ ಸವಾಲು ಹಾಕಿದ್ದು, ಸರ್ಕಾರ ಈ ಬಗ್ಗೆ ಕ್ರಮಕ್ಕೆ ಮುಂದಾಗಿದೆ.

# ಕಲಬುರಗಿ ವಿಸ್ತೃತ ಸ್ಥಳೀಯ ಯೋಜನಾ ಪ್ರದೇಶದ 2041ರ ಮಾಸ್ಟರ್‌ಪ್ಲಾನ್‌ಗೆ ಅನುಮೋದನೆ

**ಬೆಂಗಳೂರು/ಕಲಬುರಗಿ, ಸೆ.30:** ಕಲಬುರಗಿ ನಗರದ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಸಮಗ್ರ ಮತ್ತು ಯೋಜಿತ ಅಭಿವೃದ್ಧಿಗೆ ಅಗತ್ಯವಾದ ದೀರ್ಘಕಾಲೀನ ನಗರಾಭಿವೃದ್ಧಿ ಯೋಜನೆಗೆ ರಾಜ್ಯ ಸರ್ಕಾರ ತಾತ್ಕಾಲಿಕ ಅನುಮೋದನೆ ನೀಡಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಅಮೃತ್ ಯೋಜನೆಯಡಿ ಸಿದ್ಧಪಡಿಸಿರುವ ಕಲಬುರಗಿ ವಿಸ್ತೃತ ಸ್ಥಳೀಯ ಯೋಜನಾ ಪ್ರದೇಶದ ಜಿಐಎಸ್ ಆಧಾರಿತ ಮಾಸ್ಟರ್‌ಪ್ಲಾನ್ (ಪರಿಷ್ಕೃತ–3) 2041ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಸೆಕ್ಷನ್ 13(1)ರಡಿ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. ಈ ಕುರಿತು ನಗರಾಭಿವೃದ್ಧಿ ಇಲಾಖೆಯು ಸೆಪ್ಟೆಂಬರ್ 29, 2026ರಂದು ಸರ್ಕಾರಿ ಆದೇಶ ಹೊರಡಿಸಿದೆ.

**2041ರ ವೇಳೆಗೆ 18 ಲಕ್ಷ ಜನಸಂಖ್ಯೆ ನಿರೀಕ್ಷೆ**

ಮಾಸ್ಟರ್‌ಪ್ಲಾನ್‌ನಲ್ಲಿ ಕಲಬುರಗಿ ವಿಸ್ತೃತ ಸ್ಥಳೀಯ ಯೋಜನಾ ಪ್ರದೇಶದ ಭವಿಷ್ಯದ ಜನಸಂಖ್ಯೆ ಹಾಗೂ ನಗರೀಕರಣದ ಅಗತ್ಯಗಳನ್ನು ಪರಿಗಣಿಸಲಾಗಿದೆ. 2011ರ ಜನಗಣತಿ ಪ್ರಕಾರ ಈ ಪ್ರದೇಶದ ಜನಸಂಖ್ಯೆ 6,25,623 ಆಗಿದ್ದು, 2041ರ ವೇಳೆಗೆ ಸುಮಾರು 18 ಲಕ್ಷ ಜನಸಂಖ್ಯೆ ತಲುಪುವ ನಿರೀಕ್ಷೆಯನ್ನು ಆಧರಿಸಿ ಯೋಜನೆ ರೂಪಿಸಲಾಗಿದೆ ಎಂದು ಸಚಿವರು ಹೇಳಿದ್ದಾರೆ.

ಒಟ್ಟು ಸುಮಾರು 44,629 ಹೆಕ್ಟೇರ್ ಪ್ರದೇಶವನ್ನು ಯೋಜನಾ ವ್ಯಾಪ್ತಿಯಲ್ಲಿ ಪರಿಗಣಿಸಲಾಗಿದ್ದು, ಇದರಲ್ಲಿ ಸುಮಾರು 18,000 ಹೆಕ್ಟೇರ್ ಪ್ರದೇಶವನ್ನು ಅಭಿವೃದ್ಧಿ ಹಾಗೂ ನಗರೀಕರಣಕ್ಕೆ ಸಂಬಂಧಿಸಿದಂತೆ ಯೋಜಿಸಲಾಗಿದೆ. ವಿಸ್ತೃತ ಸ್ಥಳೀಯ ಯೋಜನಾ ಪ್ರದೇಶಕ್ಕೆ ಹೆಚ್ಚುವರಿಯಾಗಿ 11 ಗ್ರಾಮಗಳನ್ನು ಸೇರ್ಪಡೆಗೊಳಿಸಲಾಗಿದೆ ಎಂಬ ಮಾಹಿತಿಯನ್ನೂ ಸಚಿವ ಪ್ರಿಯಾಂಕ್ ಖರ್ಗೆ ನೀಡಿದ್ದಾರೆ.

**ವಸತಿ, ವಾಣಿಜ್ಯ, ಕೈಗಾರಿಕೆ ಹಾಗೂ ಮೂಲಸೌಕರ್ಯಕ್ಕೆ ಆದ್ಯತೆ**

ಮಾಸ್ಟರ್‌ಪ್ಲಾನ್‌ನಲ್ಲಿ ಸುಮಾರು 18,000 ಹೆಕ್ಟೇರ್ ಅಭಿವೃದ್ಧಿ ಪ್ರದೇಶವನ್ನು ವಿವಿಧ ಬಳಕೆಗಳಿಗೆ ಹಂಚಿಕೆ ಮಾಡಲಾಗಿದೆ. ಇದರಲ್ಲಿ 9,367.20 ಹೆಕ್ಟೇರ್ (52.04%) ವಸತಿ ಪ್ರದೇಶ, 1,080 ಹೆಕ್ಟೇರ್ (6%) ವಾಣಿಜ್ಯ ಪ್ರದೇಶ, 1,269 ಹೆಕ್ಟೇರ್ (7.05%) ಕೈಗಾರಿಕಾ ಪ್ರದೇಶ ಹಾಗೂ 1,261.80 ಹೆಕ್ಟೇರ್ (7.01%) ಸಾರ್ವಜನಿಕ ಮತ್ತು ಅರೆ–ಸಾರ್ವಜನಿಕ ಬಳಕೆಯ ಪ್ರದೇಶವಾಗಿ ಗುರುತಿಸಲಾಗಿದೆ. ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 2165.40 ಹೆಕ್ಟೇರ್ ಮೀಸಲಿರಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

**ಭವಿಷ್ಯದ ನಗರ ಬೆಳವಣಿಗೆಗೆ ಯೋಜಿತ ಚೌಕಟ್ಟು**

ಕಲಬುರಗಿ ನಗರ ಮತ್ತು ವಿಸ್ತೃತ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಮುಂದಿನ ಹಂತದ ನಗರ ವಿಸ್ತರಣೆ, ವಸತಿ ಅಭಿವೃದ್ಧಿ, ವಾಣಿಜ್ಯ ಮತ್ತು ಕೈಗಾರಿಕಾ ಚಟುವಟಿಕೆಗಳು, ಸಾರ್ವಜನಿಕ ಸೌಲಭ್ಯಗಳು, ಸಾರಿಗೆ ವ್ಯವಸ್ಥೆ ಹಾಗೂ ಮುಕ್ತ ಪ್ರದೇಶಗಳ ಅಭಿವೃದ್ಧಿಗೆ ಅಗತ್ಯವಾದ ಯೋಜನಾ ಚೌಕಟ್ಟನ್ನು ಮಾಸ್ಟರ್‌ಪ್ಲಾನ್ ಒದಗಿಸಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ಸದ್ಯದಲ್ಲೇ ಬಸ್ ಪ್ರಯಾಣ ದರ ಹೆಚ್ಚಳ ನಿರ್ಧಾರ: ಅರ್ಧ ಹೆಲ್ಮೆಟ್ ನಿಷೇಧ



**ಉನ್ನತಮಟ್ಟದ ಸಮಿತಿಯಿಂದ ಒಂದೆರಡು ದಿನದಲ್ಲಿ ಸರ್ಕಾರಕ್ಕೆ ವರದಿ, ಸಂಪುಟ ಸಭೆ ಅನುಮೋದನೆ ನಂತರ ಪರಿಷ್ಕರಣೆ**

**ಬೆಂಗಳೂರು, ಸೆ.30:** ಸರ್ಕಾರಿ ಸ್ವಾಮ್ಯದ ಸಾರಿಗೆ ನಿಗಮಗಳ ಬಸ್ ಪ್ರಯಾಣ ದರ ಹೆಚ್ಚಳಕ್ಕೆ ಸಂಬಂಧಿಸಿದಂತೆ ನೇಮಕಗೊಂಡಿರುವ ನಿವೃತ್ತ ಐಎಎಸ್ ಅಧಿಕಾರಿ ಅತುಲ್ ತಿವಾರಿ ನೇತೃತ್ವದ ಉನ್ನತ ಮಟ್ಟದ ಸಮಿತಿ ಒಂದೆರಡು ದಿನಗಳಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ. ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿಟ್ಟು ಚರ್ಚಿಸಿ, ಮುಖ್ಯಮಂತ್ರಿಗಳ ಅನುಮೋದನೆ ಪಡೆದ ನಂತರ ಪ್ರಯಾಣ ದರವನ್ನು ಪರಿಷ್ಕರಣೆ ಮಾಡಲಾಗುತ್ತದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ರಾಜಧಾನಿಯ ಸಂಚಾರ ದಟ್ಟಣೆ ನಿಯಂತ್ರಣ, ರಸ್ತೆ ಸುರಕ್ಷತೆ ಹೆಚ್ಚಿಸುವುದು ಹಾಗೂ ಸಂಚಾರಿ ನಿಯಮಗಳ ಉಲ್ಲಂಘನೆಗೆ ಪರಿಣಾಮಕಾರಿಯಾಗಿ ಕಡಿವಾಣ ಹಾಕುವ ಸಂಬಂಧ ನಡೆದ ಸಭೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನಿಗಮಗಳು ಆರ್ಥಿಕವಾಗಿ ತೀವ್ರ ಸಂಕಷ್ಟ ಎದುರಿಸುತ್ತಿರುವುದರಿಂದ ಪ್ರಯಾಣ ದರವನ್ನು ಹೆಚ್ಚಳ ಮಾಡುವುದು ಅನಿವಾರ್ಯವಾಗಿದೆ ಎಂದರು.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ಒಂದು ವರ್ಷದಲ್ಲಿ ನಾಲ್ಕು ಬಾರಿ ಡೀಸೆಲ್ ಬೆಲೆ ಹೆಚ್ಚಳ ಮಾಡಿದೆ. ಇದರ ಪರಿಣಾಮ ಪ್ರತಿ ಲೀಟರ್ ಡೀಸೆಲ್ ಬೆಲೆ 15 ರಿಂದ 16 ರೂಪಾಯಿ ಹೆಚ್ಚಳವಾಗಿದ್ದು, ನಮ್ಮ ಸಾರಿಗೆ ನಿಗಮಗಳಿಗೆ ವಾರ್ಷಿಕ 8 ಸಾವಿರ ಕೋಟಿ ರೂಪಾಯಿ ನಷ್ಟವಾಗುತ್ತಿದೆ ಎಂದು ಹೇಳಿದರು.

**2 ತಿಂಗಳಲ್ಲಿ ಸ್ಮಾರ್ಟ್‌ಕಾರ್ಡ್ ಸಿದ್ಧ**

ಶಕ್ತಿ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸರ್ಕಾರ ನಿರ್ಧರಿಸಿದ್ದು, ಎಲ್ಲ ಮಹಿಳೆಯರಿಗೆ ಸ್ಮಾರ್ಟ್‌ಕಾರ್ಡ್ ವಿತರಣೆ ಮಾಡಲಾಗುತ್ತದೆ. ಅನ್ಯ ರಾಜ್ಯದ ಮಹಿಳೆಯರೂ ಬಸ್‌ಗಳಲ್ಲಿ ಉಚಿತ ಪ್ರಯಾಣ ಮಾಡುತ್ತಿರುವ ಬಗ್ಗೆ ವರದಿಗಳು ಬರುತ್ತಿವೆ. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸ್ಮಾರ್ಟ್‌ಕಾರ್ಡ್ ವ್ಯವಸ್ಥೆಯನ್ನು ಜಾರಿಗೆ ತರುತ್ತಿದ್ದೇವೆ. ಮೊದಲ ಹಂತದಲ್ಲಿ ಒಂದು ಕೋಟಿ ಮಹಿಳೆಯರಿಗೆ ಸ್ಮಾರ್ಟ್‌ಕಾರ್ಡ್ ನೀಡುವ ದಿಸೆಯಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿದ್ದು, ಎರಡು ತಿಂಗಳಲ್ಲಿ ಸ್ಮಾರ್ಟ್‌ಕಾರ್ಡ್ ಸಿದ್ಧವಾಗಲಿವೆ ಮತ್ತು ಮಹಿಳೆಯರಿಗೆ ವಿತರಣೆ ಮಾಡಲಾಗುತ್ತದೆ ಎಂದು ಬೈರತಿ ಸುರೇಶ್ ತಿಳಿಸಿದರು.

**ಅರ್ಧ ಹೆಲ್ಮೆಟ್‌ಗೆ ಅರ್ಧಚಂದ್ರ**

ಮುಂದಿನ ದಿನಗಳಲ್ಲಿ ದ್ವಿಚಕ್ರ ವಾಹನ ಸವಾರರು ಸುರಕ್ಷಿತವಲ್ಲದ ಅರ್ಧ ಹೆಲ್ಮೆಟ್ ಬಳಸುವಂತಿಲ್ಲ. ಈ ಅಸುರಕ್ಷಿತ ಅರ್ಧ ಹೆಲ್ಮೆಟ್ ತಯಾರಿಕೆ ಮತ್ತಯ ಮಾರಾಟವನ್ನು ನಿಷೇಧಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಈ ಸಂಬಂಧ ನಿಯಮ ರೂಪಿಸಿ ಅರ್ಧ ಹೆಲ್ಮೆಟ್ ತಯಾರಿಸುವ ಎಲ್ಲಾ ಕಾರ್ಖಾನೆಗಳ ವಿರುದ್ಧ ಕ್ರಮ ಜರುಗಿಸಲಾಗುತ್ತದೆ ಮತ್ತು ತಯಾರಿಕೆಯನ್ನು ಸ್ಥಗಿತಗೊಳಿಸಲಾಗುತ್ತದೆ ಎಂದು ಬೈರತಿ ಸುರೇಶ್ ಎಚ್ಚರಿಸಿದರು.

**ಒನ್ ವೇಯಲ್ಲಿ ಸಂಚರಿಸಿದರೆ ಭಾರೀ ದಂಡ**

ಪಾದಚಾರಿ ಮಾರ್ಗಗಳಲ್ಲಿ ವಾಹನಗಳನ್ನು ನಿಲ್ಲಿಸಿದರೆ ಈಗ ಇರುವ 500 ರೂಪಾಯಿ ದಂಡವನ್ನು 5000 ರೂಪಾಯಿಗೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಅದೇರೀತಿ ಒನ್ ವೇಯಲ್ಲಿ ವಾಹನ ಚಲಾಯಿಸಿದರೂ 5000 ರೂಪಾಯಿ ದಂಡ ವಿಧಿಸಲಾಗುತ್ತದೆ ಎಂದು ಬೈರತಿ ಸುರೇಶ್ ಹೇಳಿದರು.

## ಶೀಘ್ರವಾಗಿ ಪಂಚಾಯಿತಿ ಚುನಾವಣೆ ನಡೆಸಲು ಸರ್ಕಾರ ತೀರ್ಮಾನ

# ಕೆಲ ದಿನಗಳಲ್ಲೇ ಅಧಿಸೂಚನೆ ಹೊರಬೀಳುವ ನಿರೀಕ್ಷೆಯಿದೆ: ಸಚಿವ ಲಕ್ಷ್ಮಣ ಸವದಿ ಸುಳಿವು



**ಹಾಸನ, ಸೆ.30:** ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾಪಂಚಾಯಿತಿ ಚುನಾವಣೆಗಳನ್ನು ಆದಷ್ಟು ಬೇಗ ನಡೆಸಲು ಸರ್ಕಾರ ತೀರ್ಮಾನಿಸಿದೆ. ಕೆಲವೇ ದಿನಗಳಲ್ಲಿ ಚುನಾವಣಾ ಅಧಿಸೂಚನೆ ಹೊರ ಬೀಳುವ ನಿರೀಕ್ಷೆಯಿದೆ. ಚುನಾವಣೆ ಎದುರಿಸಲು ಸರ್ಕಾರ ಸಿದ್ಧವಾಗಿದೆ ಎಂದು ಸಹಕಾರ ಸಚಿವ ಲಕ್ಷ್ಮಣ ಸವದಿ ತಿಳಿಸಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಮೀಸಲಾತಿ ಅಂತಿಮಗೊಳಿಸುವ ಪ್ರಕ್ರಿಯೆ ನಡೆಯುತ್ತಿದ್ದು, ನ್ಯಾಯಾಲಯಕ್ಕೆ ದಾಖಲೆ ಸಲ್ಲಿಸಲಿದ್ದು, ಬಳಿಕ ಮೀಸಲಾತಿ ಅಂತಿಮಗೊಂಡು ಚುನಾವಣೆ ಪ್ರಕ್ರಿಯೆ ಮುಂದುವರಿಯಲಿದೆ. ರಾಜ್ಯದಲ್ಲಿ ಈ ಬಾರಿ 50 ವರ್ಷಗಳ ಅವಧಿಯಲ್ಲೇ ಅತ್ಯಂತ ಕಡಿಮೆ ಮಳೆಯಾಗಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಈಗಾಗಲೇ ಬರ ಘೋಷಣೆ ಪ್ರಕ್ರಿಯೆ ಆರಂಭವಾಗಿದೆ. ಬೆಳೆಹಾನಿ, ಜಾನುವಾರುಗಳ ರಕ್ಷಣೆ, ಕುಡಿಯುವ ನೀರು ಸೇರಿದಂತೆ ವಿವಿಧ ವಿಚಾರಗಳ ಕುರಿತು ಈಗಾಗಲೇ ಸಮೀಕ್ಷೆ ನಡೆಯುತ್ತಿದೆ. ಈ ಮಾಹಿತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಟ್ಟಾಗಿ ಬರ ಪರಿಸ್ಥಿತಿ ಎದುರಿಸಬೇಕಿದೆ. ರೈತರಿಗೆ ಆಗಿರುವ ನಷ್ಟವನ್ನು ಹಂತ ಹಂತವಾಗಿ ತುಂಬಿಸುವ ಜವಾಬ್ದಾರಿ ಎರಡೂ ಸರ್ಕಾರಗಳ ಮೇಲಿದೆ ಎಂದು ಹೇಳಿದರು.

# ನ.9 ಉರ್ದು ಹಬ್ಬ: ಯು.ಟಿ. ಖಾದರ್

**ಉರ್ದು ಸಂಸ್ಕೃತಿ, ಪುಸ್ತಕ, ಆಹಾರ ಮತ್ತು ವಿವಿಧ ಕಲಾ ಪ್ರಕಾರಗಳನ್ನು ಒಂದೇ ವೇದಿಕೆಯಲ್ಲಿ ಪರಿಚಯಿಸುವ ಉದ್ದೇಶ**

**ಬೆಂಗಳೂರು, ಸೆ.30:** ಉರ್ದು ದಿನಾಚರಣೆ ಪ್ರಯುಕ್ತ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಸರ್ಕಾರದ ಆಶ್ರಯದಲ್ಲಿ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬ ಆಯೋಜಿಸಲು ಸಿದ್ಧತೆ ನಡೆದಿದೆ. ನವೆಂಬರ್ 9ರಂದು ಉರ್ದು ದಿನದ ಅಂಗವಾಗಿ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬ ಆಯೋಜಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

ಕರ್ನಾಟಕ ಪರ್ವ 2026ರ ನಾಲ್ಕನೇ ದಿನ ಉರ್ದು ಪತ್ರಿಕೆಗಳ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಚಿವರು, ಉರ್ದು ಭಾಷೆ ಮತ್ತು ಸಾಹಿತ್ಯದ ಜೊತೆಗೆ ಅದರೊಂದಿಗೆ ಬೆಸೆದುಕೊಂಡಿರುವ ಸಂಸ್ಕೃತಿ, ಪರಂಪರೆ ಹಾಗೂ ಕಲಾ ಪ್ರಕಾರಗಳನ್ನು ರಾಜ್ಯದ ವಿವಿಧ ಸಮುದಾಯಗಳಿಗೆ ಪರಿಚಯಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ವಿಧಾನಸೌಧದ ಆವರಣದಲ್ಲಿ ವಿವಿಧ ಇಲಾಖೆಗಳು ಮತ್ತು ಕ್ಷೇತ್ರಗಳಿಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ಆಯೋಜಿಸಲು ಅವಕಾಶವಿರುವಾಗ, ಉರ್ದು ಭಾಷೆ ಮತ್ತು ಸಾಹಿತ್ಯಕ್ಕೆ ಸಂಬಂಧಿಸಿದ ಬೃಹತ್ ಬೃಹತ್ ಕಾರ್ಯಕ್ರಮವನ್ನೂ ಇದೇ ಸ್ಥಳದಲ್ಲಿ ನಡೆಸಬಹುದು ಎಂಬ ಚಿಂತನೆಯ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಪ್ರಸ್ತಾವಿತ ಉರ್ದು ಹಬ್ಬವನ್ನು ಕೇವಲ ಸಾಹಿತ್ಯ ಕಾರ್ಯಕ್ರಮಕ್ಕೆ ಸೀಮಿತಗೊಳಿಸದೆ, ಉರ್ದು ಸಂಸ್ಕೃತಿ, ಪುಸ್ತಕ, ಆಹಾರ ಮತ್ತು ವಿವಿಧ ಕಲಾ ಪ್ರಕಾರಗಳನ್ನು ಒಂದೇ ವೇದಿಕೆಯಲ್ಲಿ ಪರಿಚಯಿಸುವ ಉದ್ದೇಶ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

## ಉರ್ದುಹಬ್ಬ ನಿರ್ಧಾರ ಹಿಂಪಡೆಯುವಂತೆ ಬಿಜೆಪಿ ಒತ್ತಾಯ

ಇದೇ ಮೊದಲ ಬಾರಿಗೆ ವಿಧಾನಸೌಧದ ಮೆಟ್ಟಿಲುಗಳ ಮೇಲೆ ನ.9ರಂದು ಉರ್ದು ದಿನಾಚರಣೆ ಆಚರಿಸುವ ಕ್ರಮಕ್ಕೆ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದೆ. ಕನ್ನಡಿಗರ ಅನನ್ಯತೆಯ ಸಂಕೇತವಾಗಿರುವ ವಿಧಾನಸೌಧವನ್ನು ನಿರ್ದಿಷ್ಟ ಸಮುದಾಯದ ಮತಬ್ಯಾಂಕ್ ಓಲೈಕೆಗೆ ಬಳಸಿಕೊಳ್ಳಲಾಗುತ್ತಿದೆ ಎಂದು ಸುರೇಶ್ ಕುಮಾರ್ ಆರೋಪಿಸಿದ್ದು, ಈ ನಿರ್ಧಾರವನ್ನು ತಕ್ಷಣವೇ ಹಿಂಪಡೆಯುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಸಂಬಂಧ ಸಚಿವ ಯು.ಟಿ ಖಾದರ್ ಹೇಳಿಕೆಯನ್ನು ಪ್ರಸ್ತಾಪಿಸಿರುವ ಸುರೇಶ್ ಕುಮಾರ್, ಸರ್ಕಾರದ ಆದ್ಯತೆಗಳ ಕುರಿತು ನೇರ ಪ್ರಶ್ನೆಗಳನ್ನು ಎತ್ತಿದ್ದಾರೆ. ಇಲ್ಲಿ ಪ್ರಶ್ನೆ ಉರ್ದು ಭಾಷೆಯದ್ದಲ್ಲ, ಬದಲಿಗೆ ಸರ್ಕಾರದ ಆದ್ಯತೆಯದ್ದಾಗಿದೆ. ಕನ್ನಡದ ನೆಲದಲ್ಲಿ, ಕಾಂಗ್ರೆಸ್ ಸರ್ಕಾರದ ನೇತೃತ್ವದಲ್ಲಿ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಇಂತಹ ವೈಭವದ ವೇದಿಕೆ ಎಷ್ಟು ಬಾರಿ ಲಭಿಸಿದೆ. ಕನ್ನಡದ ಶ್ರೀಮಂತ ಉಪಭಾಷೆಗಳಿಗೆ ಸಿಗದ ಇಂತಹ ಮಹತ್ವ ಮತ್ತು ಪ್ರಾಮುಖ್ಯತೆಯನ್ನು ಉರ್ದು ಭಾಷೆಗೆ ಏಕೆ ಎಂದು ಪ್ರಶ್ನಿಸಿದ್ದಾರೆ.

# ಸರ್ವಋತು ಪ್ರವಾಸಿತಾಣವಾಗಿ ಜೋಗಜಲಪಾತ ಅಭಿವೃದ್ಧಿ

**ಕಾಮಗಾರಿಗಳನ್ನು ಚುರುಕುಗೊಳಿಸುವಂತೆ ಅಧಿಕಾರಿಗಳಿಗೆ ಸಚಿವ ಕೆ.ಜೆ. ಜಾರ್ಜ್ ನಿರ್ದೇಶನ**



**ಬೆಂಗಳೂರು, ಸೆ.30:** ವಿಶ್ವವಿಖ್ಯಾತ ಜೋಗ ಜಲಪಾತವನ್ನು ಮಳೆಗಾಲಕ್ಕೆ ಮಾತ್ರ ಸೀಮಿತವಾಗದಂತೆ ವರ್ಷವಿಡೀ ಪ್ರವಾಸಿಗರನ್ನು ಆಕರ್ಷಿಸುವ ಸರ್ವಋತು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೈಗೊಂಡಿರುವಂತಹ ಕಾಮಗಾರಿಗಳನ್ನು ಚುರುಕುಗೊಳಿಸುವಂತೆ ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು

ಇಂಧನ ಭವನದ ಪ್ರವಾಸೋದ್ಯಮ ಇಲಾಖೆಯ ಕಚೇರಿಯಲ್ಲಿ, ಜೋಗ ಜಲಪಾತ ಪ್ರದೇಶದಲ್ಲಿ ಪ್ರಗತಿಯಲ್ಲಿರುವ ಅಭಿವೃದ್ಧಿ ಕಾಮಗಾರಿಗಳು ಹಾಗೂ ವರ್ಷವಿಡೀ ನಿಗದಿತ ಅವಧಿಯಲ್ಲಿ ಜಲಪಾತಕ್ಕೆ ನೀರು ಹರಿಸುವ ಉದ್ದೇಶಿತ ಯೋಜನೆಯ ಕುರಿತು ಬುಧವಾರ ನಡೆದ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಜೋಗ ಜಲಪಾತದ ಮೇಲ್ಭಾಗಕ್ಕೆ ನೀರನ್ನು ಪಂಪ್ ಮಾಡಿ, ವರ್ಷವಿಡೀ ನಿಗದಿತ ಅವಧಿಯಲ್ಲಿ ಜಲಪಾತದ ದೃಶ್ಯ ವೈಭವವನ್ನು ಪ್ರವಾಸಿಗರಿಗೆ ಅನುಭವಿಸುವಂತೆ ಮಾಡುವ ಪ್ರಸ್ತಾವನೆಯ ಕುರಿತು ಚರ್ಚಿಸಿದ ಸಚಿವರು, ಇದಕ್ಕೆ ಅಗತ್ಯವಿರುವ ನೀರಿನ ಪ್ರಮಾಣ, ಪಂಪಿಂಗ್ ಸಾಮರ್ಥ್ಯ, ವಿದ್ಯುತ್ ಬಳಕೆ ಹಾಗೂ ನಿರ್ವಹಣಾ ವೆಚ್ಚವನ್ನು ಕೂಲಂಕಷವಾಗಿ ಅಧ್ಯಯನ ಮಾಡಿ ತಾಂತ್ರಿಕ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಿದರು.

ರಾತ್ರಿ ವೇಳೆ ವಿದ್ಯುತ್ ಲಭ್ಯತೆಯ ಸಮಸ್ಯೆಯನ್ನು ಗಮನದಲ್ಲಿಟ್ಟುಕೊಂಡು, ಸೌರಶಕ್ತಿ ಅಥವಾ ಪಂಪ್ಡ್ ಸ್ಟೋರೇಜ್ ಮಾದರಿಯಂತಹ ಪರ್ಯಾಯ ವ್ಯವಸ್ಥೆಗಳ ಕಾರ್ಯಸಾಧ್ಯತೆ ಮತ್ತು ಆರ್ಥಿಕ ಪರಿಣಾಮಗಳನ್ನೂ ಪರಿಶೀಲಿಸುವಂತೆ ಸೂಚಿಸಿದರು.

ಅಲ್ಲದೆ, ಪುರಾತತ್ವ ಇಲಾಖೆ ಸೇರಿದಂತೆ ಸಂಬಂಧಿತ ಸಂಸ್ಥೆಗಳಿಂದ ಅಗತ್ಯ ನಿರಾಕ್ಷೇಪಣಾ ಪತ್ರಗಳು ಮತ್ತು ಅನುಮೋದನೆಗಳನ್ನು ಪಡೆದು, ಜೋಗ್ ಮ್ಯಾನೇಜ್‌ಮೆಂಟ್ ಅಥಾರಿಟಿ ಹಾಗೂ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಅಧಿಕಾರಿಗಳ ಸಮನ್ವಯದೊಂದಿಗೆ ಅಭಿವೃದ್ಧಿ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸ ಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಶಿವಪ್ರಸಾದ್ ಪಿ.ಆರ್. ಸೇರಿದಂತೆ ಇಂಧನ ಮತ್ತು ಪ್ರವಾಸೋದ್ಯಮ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಬರ ಪರಿಹಾರ ನೀಡಿಲ್ಲ, ನಮ್ಮ ಬೇಡಿಕೆ ಈಡೇರಿಸಿಲ್ಲ, ಜನತಾ ನ್ಯಾಯಾಲಯಕ್ಕೆ ಹೋಗುತ್ತೇವೆ: ಪ್ರತಿಪಕ್ಷ ನಾಯಕ ಆರ್.ಅಶೋಕ್

**ಬೆಂಗಳೂರು, ಸೆ.30:** ಬರಗಾಲಕ್ಕೆ ಸಂಬಂಧಿಸಿದಂತೆ ರೈತರಿಗಾಗಿ ನಾವು ಇಟ್ಟ ಬೇಡಿಕೆಗಳನ್ನು ಕಾಂಗ್ರೆಸ್ ಸರ್ಕಾರ ಈಡೇರಿಸಿಲ್ಲ. ಅದರ ಬದಲು ಕೇವಲ 2,500 ರೂ. ನೀಡಿ ಕೈತೊಳೆದುಕೊಳ್ಳಲಾಗಿದೆ. ಆದ್ದರಿಂದ ಕೇಂದ್ರಕ್ಕೆ ನಿಯೋಗ ಹೋಗುವ ಬದಲು ನಾವು ಜನರ ಬಳಿಗೆ, ಜನತಾ ನ್ಯಾಯಾಲಯಕ್ಕೆ ಹೋಗುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಘೋಷಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ಅವರ ಜೋಡಿಯ ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಮೂರು ಸಂಕಷ್ಟಗಳಿಗೆ ದೂಡಿದೆ. ಬರಗಾಲದಿಂದಾಗಿ ರೈತರು ಸಾಯುವ ಪರಿಸ್ಥಿತಿಗೆ ಹೋಗಿದ್ದಾರೆ. ಮಂಡ್ಯದ ಮಳವಳ್ಳಿಯಲ್ಲಿ ಯುವಕ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಹಾಗೂ ಇನ್ನೊಬ್ಬ ರೈತ ಕೆ.ಎಂ. ದೊಡ್ಡಿ ಬಳಿ ಸಾಲಬಾಧೆಯಿಂದ ಆತ್ಮಹತ್ಯೆಗೆ ಶರಣಾಗಿದ್ದಾನೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಶುರುವಾಗಿದೆ. ದನಕರುಗಳಿಗೆ ನೀರಿಲ್ಲ, ಬೋರ್‌ವೆಲ್‌ಗಳು ಹಾಳಾಗಿವೆ. ಮನಸ್ಸಿಗೆ ಬಂದಂತೆ ಲೋಡ್‌ಶೆಡ್ಡಿಂಗ್ ಮಾಡಲಾಗುತ್ತಿದೆ. ಎಲ್ಲಕ್ಕಿಂತ ಹೆಚ್ಚಾಗಿ ಖಜಾನೆಯ ಮೇಲೆ ಒತ್ತಡ ಅಧಿಕವಾಗಿದೆ. ಈ ನಾಲ್ಕು ದಿನಗಳ ಅಧಿವೇಶನದ ವಿಶೇಷ ಚರ್ಚೆಯಲ್ಲಿ ಈ ಎಲ್ಲಾ ವಿಷಯಗಳನ್ನು ಪ್ರಸ್ತಾಪಿಸಲಾಯಿತು.

ಅಷ್ಟೆಲ್ಲಾ ಮನವರಿಕೆ ಮಾಡಿದರೂ ಎಕರೆಗೆ ಕನಿಷ್ಟ 25,000 ರೂ. ಪರಿಹಾರ ನೀಡಬೇಕೆಂದು ಆಗ್ರಹಿಸಲಾಗಿತ್ತು. ವಿಬಿ ಜಿ ರಾಮ್ ಜಿ ಮೂಲಕ ವಲಸೆ ಹೋಗುವವರನ್ನು ತಡೆಯಿರಿ ಎಂದು ಆಗ್ರಹಿಸಲಾಗಿತ್ತು. ಆದರೆ ಈ ಯಾವುದೇ ಆಗ್ರಹಗಳನ್ನು ಈಡೇರಿಸಿಲ್ಲ. ಬದಲಾಗಿ 50 ಲಕ್ಷ ಕುಟುಂಬಕ್ಕೆ ತಲಾ 2,500 ರೂ. ನೀಡುವುದಾಗಿ ಸರ್ಕಾರ ಪ್ರಕಟಿಸಿ ರೈತರನ್ನು ಅಪಮಾನಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಇವರು ಕೊಡುವ ಪರಿಹಾರದಲ್ಲಿ ಎತ್ತುಗಳಿಗೆ ಲಾಳ ಹೊಡೆಸಲು, ಮೂಗುದಾರ ಹಾಕಲು ಹಣ ಸಾಲುವುದಿಲ್ಲ. ರಾಜ್ಯದ 50 ಲಕ್ಷ ರೈತರಿಗೆ 1250 ಕೋಟಿ ರೂ. ನೀಡಲಾಗುತ್ತಿದೆ. ಆದರೆ ಬರಗಾಲದ ಕುರಿತು ಕೇಂದ್ರಕ್ಕೆ ಪತ್ರ ಬರೆಯುವ ಬಗ್ಗೆ ನಮ್ಮನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲಿಲ್ಲ. ಕಸ್ತೂರಿ ರಂಗನ್ ವರದಿ ಕುರಿತು ಸರ್ವಾನುಮತದ ನಿರ್ಣಯದ ಬಗ್ಗೆ ನಮ್ಮನ್ನು ಕೇಳಿ, ಚರ್ಚಿಸಿ ಮಾಹಿತಿ ಪಡೆದು ಮನವಿ ಸಿದ್ಧಪಡಿಸಿದರು. ಬರದ ವಿಷಯದಲ್ಲಿ ಆ ಕೆಲಸ ಮಾಡಿಲ್ಲ ಎಂದರು.

**ಭಾರತ್ ಜೋಡೋಗೆ 1110 ಕೋಟಿ, ರೈತರಿಗೆ ಭಿಕ್ಷೆ**

ರೈತರಿಗೆ ಭಿಕ್ಷೆ ನೀಡಿದಂತೆ ನೀಡುತ್ತಾರೆ ಆದರೆ ಗ್ಯಾರಂಟಿ ಸಮಿತಿಗಳಿಗೆ ಸಾವಿರಾರು ಕೋಟಿ ರೂ. ಖರ್ಚು ಮಾಡಲಾಗುತ್ತಿದೆ. ಭಾರತ್ ಜೋಡೋ ಸಮಿತಿಗಳಿಗೆ 1,110 ಕೋಟಿ ರೂ. ನೀಡಲಾಗುತ್ತಿದೆ. ಈ ಸಮಿತಿಗಳು ಕಾಂಗ್ರೆಸ್ ಕಾರ್ಯಕರ್ತರಿಗೆ ಸೀಮಿತವಾಗಿರಲಿದೆ. ಕಾಂಗ್ರೆಸ್ ಪಕ್ಷದವರಿಗೆ ಸಾವಿರಾರು ಕೋಟಿ ರೂ. ಖರ್ಚು ಮಾಡಿ ಗಂಜಿ ಕೇಂದ್ರ ಆರಂಭಿಸುತ್ತಾರೆ. ಆದರೆ, ರೈತರಿಗೆ ಬಿಡಿಗಾಸು ನೀಡಲಾಗುತ್ತಿದೆ. ಈಗ ಸಿಎಂ ಡಿ.ಕೆ.ಶಿವಕುಮಾರ್ ನಮಗೆ ಪತ್ರ ಬರೆದು ಕೇಂದ್ರಕ್ಕೆ ನಿಯೋಗ ಹೋಗೋಣ ಎಂದು ಮನವಿ ಮಾಡಿದ್ದಾರೆ. ನಾವು ಕೇಂದ್ರಕ್ಕೆ ಹೋಗಲು ಸಿದ್ಧವಿದ್ದೇವೆ. ಆದರೆ ಸರ್ಕಾರದಿಂದ ನಮ್ಮ ಬೇಡಿಕೆಗಳನ್ನು ಈಡೇರಿಸಿಯೇ ಇಲ್ಲ. ಕುಡಿಯುವ ನೀರಿಗೂ ಹಣ ಬಿಡುಗಡೆ ಮಾಡಿಲ್ಲ. ಸರ್ವಪಕ್ಷ ನಿಯೋಗ ಹೋಗಬೇಕೆಂದರೆ ಬರಗಾಲದ ಬಗ್ಗೆ ನಮ್ಮ ಜೊತೆ ಚರ್ಚಿಸಬೇಕಿತ್ತು. ಅದನ್ನು ಬಿಟ್ಟು ಏಕಪಕ್ಷೀಯವಾಗಿ ತೀರ್ಮಾನ ಕೈಗೊಂಡು ರಾಜಕೀಯ ಮಾಡಲಾಗಿದೆ ಎಂದು ಅಶೋಕ್ ದೂರಿದರು.

# ಹೆಸರುಕಾಳು, ಸೂರ್ಯಕಾಂತಿ ಹಾಗೂ ಸೋಯಾಬಿನ್‌ಗೆ ಬೆಂಬಲ ಬೆಲೆ: ಕೇಂದ್ರ ಸರ್ಕಾರದ ಕ್ರಮಕ್ಕೆ ಬಿ.ವೈ. ವಿಜಯೇಂದ್ರ ಸ್ವಾಗತ

**ಬೆಂಗಳೂರು, ಸೆ.30:** ಬೆಲೆ ಕುಸಿತ ಭೀತಿಯಲ್ಲಿರುವ ರಾಜ್ಯದ ರೈತರಿಗೆ ಆಸರೆಯಾಗಲು 2026–27ನೇ ಸಾಲಿನ ಮುಂಗಾರು ಋತುವಿನಲ್ಲಿ ಹೆಸರುಕಾಳು, ಸೂರ್ಯಕಾಂತಿ ಹಾಗೂ ಸೋಯಾಬಿನ್ ಬೆಳೆಗಳನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತಕ್ಷಣವೇ ಖರೀದಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿರುವುದು ಸ್ವಾಗತಾರ್ಹ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬೆಂಬಲ ಬೆಲೆ ಯೋಜನೆಯಡಿ 13 ಸಾವಿರದ 413 ಟನ್ ಮೆಟ್ರಿಕ್ ಟನ್ ಸೂರ್ಯಕಾಂತಿ, 38 ಸಾವಿರದ 250 ಮೆಟ್ರಿಕ್ ಟನ್ ಹೆಸರುಕಾಳು, ಒಂದು ಲಕ್ಷದ 15 ಸಾವಿರದ 500 ಮೆಟ್ರಿಕ್ ಟನ್ ಸೋಯಾಬೀನ್ ಖರೀದಿಗೆ ಕೇಂದ್ರ ಸರ್ಕಾರ ಅನುವು ಮಾಡಿಕೊಟ್ಟಿರುವುದು, ರೈತರ ಬಗ್ಗೆ ಕೇಂದ್ರ ಸರ್ಕಾರಕ್ಕಿರುವ ಕಾಳಜಿಯನ್ನು ಪ್ರತಿಬಿಂಬಿಸಲಿದೆ ಎಂದು ತಿಳಿಸಿದ್ದಾರೆ. ಬರ ಹಾಗೂ ಮಾರುಕಟ್ಟೆ ಏರಿಳಿತದಿಂದ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಬೆಲೆ ಸಿಗುವಂತೆ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ನಿರ್ಧಾರ, ಸಂಕಷ್ಟದಲ್ಲಿರುವ ರೈತರಿಗೆ ನೆರವಾಗಿದೆ. ಇದರಿಂದ ಕೃಷಿ ಕ್ಷೇತ್ರದ ಸುಸ್ಥಿರತೆಗೆ ಸಹಕಾರಿಯಾಗಲಿದೆ. ಸಕಾಲಿಕ ರೈತಸ್ನೇಹಿ ನಿರ್ಧಾರಕ್ಕೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದ್ದಾರೆ.

# ಏಷ್ಯನ್ ಗೇಮ್ಸ್ ಶೂಟಿಂಗ್: ನೀರು ಧಂಡಾ, ಚೆನಾಯ್‌ಗೆ ಚಿನ್ನ



**ನಗೋಯಾ, ಸೆ.30:** ಏಷ್ಯನ್ ಗೇಮ್ಸ್‌ನಲ್ಲಿ ಭಾರತದ ಶೂಟರ್‌ಗಳ ಅದ್ಭುತ ಪ್ರದರ್ಶನ ಮುಂದುವರಿದಿದ್ದು, ನೀರು ಧಂಡಾ ಬುಧವಾರ ಇಲ್ಲಿ ನಡೆದ ಟ್ರ್ಯಾಪ್ ಮಿಶ್ರಿತ ತಂಡ ವಿಭಾಗದ ರೋಚಕ ಫೈನಲ್‌ನಲ್ಲಿ ಕೈನಾನ್ ಚೆನಾಯ್ ಅವರೊಂದಿಗೆ ಸೇರಿ ಚಿನ್ನದ ಪದಕ ಗೆದ್ದಿದ್ದಾರೆ.

ಈ ಮೂಲಕ ನೀರು ಧಂಡಾ ಎರಡೆರಡು ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಭಾರತದ ಜೋಡಿ ಒತ್ತಡವನ್ನು ಸಮರ್ಥವಾಗಿ ನಿಭಾಯಿಸಿ 34 ಅಂಕಗಳೊಂದಿಗೆ ಅಗ್ರಸ್ಥಾನ ಪಡೆಯಿತು. 32 ಅಂಕ ಗಳಿಸಿದ ಕತಾರ್ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟುಕೊಂಡರೆ, ಚೀನಾ 23 ಅಂಕಗಳೊಂದಿಗೆ ಕಂಚಿನ ಪದಕವನ್ನು ಹಾಗೂ ಇರಾನ್ 12 ಅಂಕಗಳೊಂದಿಗೆ ನಾಲ್ಕನೇ ಸ್ಥಾನವನ್ನು ಪಡೆದುಕೊಂಡವು.

ನೀರು ಅವರಿಗೆ ಈ ಗೆಲುವು ಎರಡು ದಿನಗಳ ಸ್ಮರಣೀಯ ಪ್ರದರ್ಶನದ ಶಿಖರ ಪ್ರಾಯವಾಗಿತ್ತು. ಮಂಗಳವಾರ ಟ್ರ್ಯಾಪ್ ಶೂಟಿಂಗ್‌ನಲ್ಲಿ ವೈಯಕ್ತಿಕ ಏಷ್ಯನ್ ಗೇಮ್ಸ್ ಚಿನ್ನ ಗೆದ್ದ ಮೊದಲ ಭಾರತೀಯ ಮಹಿಳೆ ಎನಿಸಿಕೊಂಡ ನಂತರ, ಅವರು ಚೆನಾಯ್ ಅವರೊಂದಿಗೆ ಶೂಟಿಂಗ್ ರೇಂಜ್‌ಗೆ ಹಿಂತಿರುಗಿ ಭಾರತದ ಪದಕಗಳ ಪಟ್ಟಿಗೆ ಮತ್ತೊಂದು ಶೀರ್ಷಿಕೆಯನ್ನು ಸೇರಿಸಿದರು. ನೀರು ಅವರ ವೈಯಕ್ತಿಕ ಗೆಲುವು ಸ್ವತಃ ಐತಿಹಾಸಿಕವಾಗಿತ್ತು.

# ಜಮ್ಮು-ಕಾಶ್ಮೀರದಲ್ಲಿ ಎನ್‌ಕೌಂಟರ್ ಲಷ್ಕರ್ ಉಗ್ರ ಫೌಜಿ ಮೂಸಾ ಹತ್ಯೆ



**ಶ್ರೀನಗರ, ಸೆ.30:** ಜಮ್ಮು ಮತ್ತು ಕಾಶ್ಮೀರದ ಬುದ್ಗಾಮ್ ಜಿಲ್ಲೆಯಲ್ಲಿ ಮಂಗಳವಾರ ಸಂಜೆ ಭದ್ರತಾ ಪಡೆಗಳೊಂದಿಗೆ ನಡೆದ ಎನ್ಕೌಂಟರ್‌ನಲ್ಲಿ ಲಷ್ಕರ್-ಎ-ತೊಯ್ಬಾದ ಉನ್ನತ ಭಯೋತ್ಪಾದಕನೊಬ್ಬ ಸಾವನ್ನಪ್ಪಿದ್ದಾನೆ. ಆ ಭಯೋತ್ಪಾದಕನನ್ನು ಲಷ್ಕರ್-ಎ-ತೊಯ್ಬಾದ ಉನ್ನತ ಕಮಾಂಡರ್ ಫೌಜಿ ಮೂಸಾ ಎಂದು ಗುರುತಿಸಲಾಗಿದೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಭಾರತೀಯ ಸೇನೆಯ ಚಿನಾರ್ ಕಾರ್ಪ್ಸ್, ಆಪರೇಷನ್ ಕೊರಾಗ್ ಎಂದು ಕರೆಯಲ್ಪಡುವ ಈ ಕಾರ್ಯಾಚರಣೆಯನ್ನು ಸೇನೆ, ಪೊಲೀಸರು ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆ ಜಂಟಿಯಾಗಿ ಬುದ್ಗಾಮ್‌ನ ಯೂಸ್ಮಾರ್ಗ್ ಬಳಿಯ ಕೊರಾಗ್‌ನಲ್ಲಿ ನಡೆಸಿದೆ ಎಂದು ಹೇಳಿದೆ.

ನಿರ್ದಿಷ್ಟ ಗುಪ್ತಚರ ಮಾಹಿತಿ ಆಧರಿಸಿ ಭದ್ರತಾ ಪಡೆಗಳು ಕೊರಾಗ್ ಪ್ರದೇಶದಲ್ಲಿ ಶೋಧ ಕಾರ್ಯ ಆರಂಭಿಸಿದ್ದವು. ಈ ವೇಳೆ ಅನುಮಾನಾಸ್ಪದ ಚಲನವಲನ ಗಮನಕ್ಕೆ ಬಂದಿದ್ದು, ಪಡೆಗಳು ಸವಾಲು ಹಾಕಿದಾಗ ಉಗ್ರರು ಗುಂಡಿನ ದಾಳಿ ನಡೆಸಿದ್ದಾರೆ. ಬಳಿಕ ನಡೆದ ಗುಂಡಿನ ಚಕಮಕಿಯಲ್ಲಿ ಓರ್ವ ಉಗ್ರ ಹತನಾಗಿದ್ದಾನೆ ಎಂದು ಚಿನಾರ್ ಕಾರ್ಪ್ಸ್ ತಿಳಿಸಿದೆ.

ಹತ್ಯೆಯಾದ ಉಗ್ರನನ್ನು ಅಧಿಕಾರಿಗಳು ಮೊಹಮ್ಮದ್ ಆಸಿಫ್ ಅಲಿಯಾಸ್ ಹಾಶಿಮ್ ಮೂಸಾ ಎಂದು ಗುರುತಿಸಿದ್ದಾರೆ. ಜಮ್ಮು-ಕಾಶ್ಮೀರದ ಹಲವು ದಾಳಿಗಳಲ್ಲಿ ಭಾಗಿಯಾಗಿರುವ ಆರೋಪದ ಹಿನ್ನೆಲೆಯಲ್ಲಿ ಮೂಸಾ ಭದ್ರತಾ ಪಡೆಗಳಿಗೆ ಬೇಕಾಗಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ತಿಂಗಳ ಸೆಪ್ಟೆಂಬರ್ 5ರಂದು ಯೂಸ್ಮಾರ್ಗ್ ಬೆಟ್ಟಗಳಲ್ಲಿ ನಡೆದ ಮತ್ತೊಂದು ಎನ್‌ಕೌಂಟರ್‌ನಿಂದ ಮೂಸಾ ತಪ್ಪಿಸಿಕೊಂಡಿದ್ದ. ಆ ಕಾರ್ಯಾಚರಣೆಯಲ್ಲಿ ಆತನ ಆಪ್ತ ಸಹಾಯಕ ಯಾಸಿರ್ ಹತನಾಗಿದ್ದನು. ಎನ್‌ಕೌಂಟರ್ ಬಳಿಕವೂ ಪ್ರದೇಶದಲ್ಲಿ ಶೋಧ ಕಾರ್ಯ ಮುಂದುವರಿದಿದೆ. ಭದ್ರತಾ ಪಡೆಗಳು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹೆಚ್ಚಿನ ಪರಿಶೀಲನೆ ನಡೆಸುತ್ತಿವೆ.

# ಉಮರ್, ಶರ್ಜೀಲ್ ಜಾಮೀನು ಅರ್ಜಿ ಮತ್ತೆ ವಜಾಗೊಳಿಸಿದ ದೆಹಲಿ ಹೈಕೋರ್ಟ್

**ನವದೆಹಲಿ, ಸೆ. 30:** 2020ರ ದೆಹಲಿ ಗಲಭೆ ವಿಚಾರದಲ್ಲಿ ಜೈಲು ಸೇರಿರುವ ವಿದ್ಯಾರ್ಥಿ ನಾಯಕರಾದ ಉಮರ್ ಖಾಲಿದ್ ಮತ್ತು ಶರ್ಜೀಲ್ ಇಮಾಮ್ ಅವರ ಜಾಮೀನು ಅರ್ಜಿಯನ್ನು ದೆಹಲಿ ಹೈಕೋರ್ಟ್ ಮತ್ತೊಮ್ಮೆ ವಜಾಗೊಳಿಸಿದೆ. ವಿಚಾರಣಾ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದ ನ್ಯಾಯಪೀಠವು, ಪ್ರಕರಣಕ್ಕೆ ಸಂಬಂಧಿಸಿದಂತೆ ಸದ್ಯಕ್ಕೆ ಇಬ್ಬರಿಗೂ ಜಾಮೀನು ನೀಡಲು ಯಾವುದೇ ಸೂಕ್ತ ಆಧಾರಗಳಿಲ್ಲ ಎಂದಿದೆ.

2020ರ ಫೆಬ್ರವರಿಯಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಮತ್ತು ಎನ್‌ಆರ್‌ಸಿ ವಿರುದ್ಧ ನಡೆದ ಪ್ರತಿಭಟನೆಗಳ ವೇಳೆ ಈಶಾನ್ಯ ದೆಹಲಿಯಲ್ಲಿ ಕೋಮು ಗಲಭೆ ಸಂಭವಿಸಿತ್ತು. ಈ ಗಲಭೆಗೆ ಸಂಬಂಧಿಸಿದಂತೆ ಯುಎಪಿಎ ಮತ್ತು ಭಾರತೀಯ ದಂಡಸಂಹಿತೆಯ ಹಲವು ಕಠಿಣ ಸೆಕ್ಷನ್‌ಗಳಡಿ ಶರ್ಜೀಲ್ ಇಮಾಮ್ ಅವರನ್ನು 2020ರ ಜನವರಿಯಲ್ಲಿ ಮತ್ತು ಉಮರ್ ಖಾಲಿದ್ ಅವರನ್ನು 2020ರ ಸೆಪ್ಟೆಂಬರ್‌ನಲ್ಲಿ ಬಂಧಿಸಲಾಗಿತ್ತು.

ಇಬ್ಬರೂ ಐದು ವರ್ಷಗಳಿಗೂ ಹೆಚ್ಚು ಕಾಲದಿಂದ ಜೈಲಿನಲ್ಲಿದ್ದಾರೆ. ನ್ಯಾಯಾಲಯದಲ್ಲಿ ಇನ್ನೂ ಮುಖ್ಯ ವಿಚಾರಣೆ ಪೂರ್ಣ ಪ್ರಮಾಣದಲ್ಲಿ ಆರಂಭವಾಗಿಲ್ಲ, ಆರೋಪ ನಿಗದಿ ಪ್ರಕ್ರಿಯೆಗಳು ವಿಳಂಬವಾಗುತ್ತಿದೆ. ಆದರೆ ದೆಹಲಿಯ ವಿಚಾರಣಾ ನ್ಯಾಯಾಲಯ, ದೆಹಲಿ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್‌ಗಳಲ್ಲಿ ಇಬ್ಬರ ಜಾಮೀನು ಅರ್ಜಿಗಳು ಸತತವಾಗಿ ತಿರಸ್ಕೃತಗೊಂಡಿವೆ.

ಈ ರೀತಿ ವಿಚಾರಣೆಯಿಲ್ಲದೆ ಸುದೀರ್ಘ ಅವಧಿಗೆ ಕಸ್ಟಡಿಯಲ್ಲಿಟ್ಟಿರುವುದಕ್ಕೆ ವಿಶ್ವಸಂಸ್ಥೆ ಸೇರಿದಂತೆ ಹಲವು ಅಂತಾರಾಷ್ಟ್ರೀಯ ಮಾನವ ಹಕ್ಕುಗಳ ಸಂಘಟನೆಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿವೆ. ವಿಶ್ವಸಂಸ್ಥೆಯ ಸ್ವೇಚ್ಛಾನುಸಾರ ಬಂಧನ ಕುರಿತ ಕಾರ್ಯನಿರತ ಗುಂಪು ಈ ಬಂಧನವು ಅನಿಯಂತ್ರಿತ ಮತ್ತು ಮಾನವ ಹಕ್ಕುಗಳ ಉಲ್ಲಂಘನೆ ಎಂದು ಬಣ್ಣಿಸಿದೆ. ಕೂಡಲೇ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಆಗ್ರಹಿಸಿದೆ. ಆದರೆ ಈವರೆಗೆ ಈ ಸಂಬಂಧ ಯಾವುದೇ ಕ್ರಮಕೈಗೊಳ್ಳಲಾಗಿಲ್ಲ. ಪದೇ ಪದೇ ಜಾಮೀನು ತಿರಸ್ಕರಿಸಲಾಗುತ್ತಿದೆ. ಇವೆಲ್ಲವುದರ ನಡುವೆ ಕೇಂದ್ರ ಸರ್ಕಾರವು ಯುಎಪಿಎ ಕಾಯ್ದೆಯನ್ನು ದುರುಪಯೋಗ ಮಾಡುತ್ತಿರುವ ಬಗ್ಗೆ ತೀವ್ರ ಆಕ್ರೋಶ ವ್ಯಕ್ತವಾಗುತ್ತಿವೆ.

# ಓಲಾ, ಉಬರ್, ರ್‍ಯಾಪಿಡೊಗೆ ದೆಹಲಿ ಹೈಕೋರ್ಟ್ ನೋಟಿಸ್

## ಆಪ್ ಆಧಾರಿತ ಕ್ಯಾಬ್ ಸೇವೆಗಳಲ್ಲಿ ಮಹಿಳೆಯರ ಸುರಕ್ಷತೆ ಖಚಿತಪಡಿಸಲು ಸಮಗ್ರ ಕ್ರಮ ಕೈಗೊಳ್ಳುವಂತೆ ಕೋರಿ ಸಲ್ಲಿಸಿದ್ದ ಪಿಐಎಲ್ ವಿಚಾರಣೆ

**ನವದೆಹಲಿ, ಸೆ. 30:** ಆಪ್ ಆಧಾರಿತ ಕ್ಯಾಬ್ ಸೇವೆಗಳಲ್ಲಿ ಮಹಿಳೆಯರ ಸುರಕ್ಷತೆ ಖಚಿತಪಡಿಸಲು ಸಮಗ್ರ ಕ್ರಮ ಕೈಗೊಳ್ಳುವಂತೆ ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿ ಓಲಾ, ಉಬರ್ ಮತ್ತು ರ್‍ಯಾಪಿಡೊ ಸೇರಿ ಕೇಂದ್ರ ಹಾಗೂ ದೆಹಲಿ ಸರ್ಕಾರಗಳಿಗೆ ದೆಹಲಿ ಹೈಕೋರ್ಟ್ ಬುಧವಾರ ನೋಟಿಸ್ ಜಾರಿ ಮಾಡಿದೆ.




ಮುಖ್ಯ ನ್ಯಾಯಮೂರ್ತಿ ದೇವೇಂದ್ರ ಕುಮಾರ್ ಉಪಾಧ್ಯಾಯ ಮತ್ತು ನ್ಯಾಯಮೂರ್ತಿ ತೇಜಸ್ ಕಾರಿಯಾ ಅವರ ವಿಭಾಗೀಯ ಪೀಠವು ಅರ್ಜಿಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಸಂಬಂಧಪಟ್ಟ ಎಲ್ಲರಿಗೂ ಸೂಚಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಡಿಸೆಂಬರ್ 16ಕ್ಕೆ ನಿಗದಿ ಪಡಿಸಲಾಗಿದೆ. ಖಾಸಗಿ ಟ್ಯಾಕ್ಸಿ ಆಪ್ ನಿರ್ವಹಣಾ ಸಂಸ್ಥೆಗಳನ್ನು ಹೊಣೆಗಾರರನ್ನಾಗಿ ಮಾಡಲು ನಾವು ಬಯಸುತ್ತೇವೆ. ಅದಕ್ಕಾಗಿಯೇ ನೋಟಿಸ್ ಜಾರಿ ಮಾಡುತ್ತಿದ್ದೇವೆ ಎಂದು ನ್ಯಾಯ ಪೀಠ ಸ್ಪಷ್ಟಪಡಿಸಿದೆ. ಅದಿತ್ಯ ಸೆಹಗಲ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ಈ ಆದೇಶ ನೀಡಿದೆ.

ಅರ್ಜಿದಾರರ ಪರ ವಕೀಲರು ದೆಹಲಿ-ಎನ್ಸಿಆರ್ ಪ್ರದೇಶದಲ್ಲಿ ಆಪ್ ಆಧಾರಿತ ಕಂಪನಿಗಳು 2 ಲಕ್ಷಕ್ಕೂ ಹೆಚ್ಚು ಕ್ಯಾಬ್ಗಳನ್ನು ನಿರ್ವಹಿಸುತ್ತಿವೆ. ಆದರೆ ರಾತ್ರಿ ವೇಳೆ ಚಾಲಕರ ತಪಾಸಣೆ ಸಮರ್ಪಕವಾಗಿ ನಡೆಯುತ್ತಿಲ್ಲ. ರಾತ್ರಿ 8 ಅಥವಾ 9 ಗಂಟೆಯ ನಂತರ ಚಾಲಕರು ಕ್ಯಾಬ್ ಚಲಾಯಿಸುತ್ತಿದ್ದಾರೆಯೇ, ಅವರು ವಿಮಾನ ನಿಲ್ದಾಣ ಅಥವಾ ಇತರ ಪ್ರಮುಖ ಸ್ಥಳಗಳಿಗೆ ತೆರಳುತ್ತಿದ್ದಾರೆಯೇ, ಚಾಲಕ ಮದ್ಯಪಾನ ಮಾಡಿದ್ದಾನೆಯೇ ಎಂಬುದನ್ನು ಪರಿಶೀಲಿಸುವ ವ್ಯವಸ್ಥೆ ಇಲ್ಲ ಎಂದು ಅರ್ಜಿದಾರರ ಪರ ವಕೀಲರು ಆರೋಪಿಸಿದರು.

ಮಹಿಳೆಯರು ಬಳಸುವ ಆ?ಯಪ್ ಆಧಾರಿತ ಕ್ಯಾಬ್, ಬೈಕ್ ಟ್ಯಾಕ್ಸಿ ಹಾಗೂ ಇತರ ರೈಡ್ ಹೈಲಿಂಗ್ ಸೇವೆಗಳ ಸುರಕ್ಷತಾ ವ್ಯವಸ್ಥೆಯನ್ನು ಸಮಗ್ರವಾಗಿ ಪರಿಷ್ಕರಿಸುವಂತೆ ಅರ್ಜಿಯಲ್ಲಿ ಮನವಿ ಮಾಡಲಾಗಿದೆ. ಪ್ರಯಾಣದ ಸಂದರ್ಭದಲ್ಲಿ ಆಪ್‌ನಲ್ಲಿ ತೋರಿಸುವ ಚಾಲಕ ಮತ್ತು ವಾಹನವೇ ನಿಜವಾಗಿ ಪ್ರಯಾಣಕ್ಕೆ ನಿಯೋಜನೆಯಾಗಿರುವುದನ್ನು ಖಚಿತಪಡಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಆಪ್‌ನಲ್ಲಿ ತೋರಿಸಿರುವ ಚಾಲಕ ಅಥವಾ ವಾಹನದ ಬದಲಿಗೆ ಅನಧಿಕೃತವಾಗಿ ಬೇರೊಬ್ಬ ಚಾಲಕ ಅಥವಾ ವಾಹನ ಬಂದರೆ, ಪ್ರಯಾಣಿಕರು ಯಾವುದೇ ದಂಡವಿಲ್ಲದೆ ರೈಡ್ ರದ್ದುಪಡಿಸಲು ಅವಕಾಶ ನೀಡಬೇಕು. ಇಂತಹ ಬದಲಾವಣೆಗಳನ್ನು ಸುರಕ್ಷತಾ ಘಟನೆಗಳಾಗಿ ದಾಖಲಿಸಬೇಕು ಎಂದು ಅರ್ಜಿಯಲ್ಲಿ ಮನವಿ ಮಾಡಲಾಗಿದೆ.

ಮಹಿಳೆಯರು ತುರ್ತು ಪರಿಸ್ಥಿತಿಯಲ್ಲಿ ಖಔಖ ಸಂದೇಶ ಕಳುಹಿಸಿದಾಗ ತಕ್ಷಣ ಪ್ರತಿಕ್ರಿಯಿಸಲು 24/7 ಕಮಾಂಡ್ ಮತ್ತು ಕಂಟ್ರೋಲ್ ಕೇಂದ್ರಗಳನ್ನು ಸ್ಥಾಪಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ. ಖಔಖ ಬಂದ ಸಂದರ್ಭದಲ್ಲಿ ಪ್ರಯಾಣದ ಬುಕಿಂಗ್ ವಿವರಗಳು, ಚಾಲಕನ ಗುರುತು, ವಾಹನ ನೋಂದಣಿ ಸಂಖ್ಯೆ ಮತ್ತು ವಾಹನದ ನೈಜ-ಸಮಯದ ಸ್ಥಳ ಮಾಹಿತಿಯನ್ನು ಅಗತ್ಯವಿರುವ ಸಂದರ್ಭಗಳಲ್ಲಿ ತುರ್ತು ಸೇವೆಗಳು ಮತ್ತು ಪೊಲೀಸರೊಂದಿಗೆ ಹಂಚಿಕೊಳ್ಳುವ ವ್ಯವಸ್ಥೆ ಇರಬೇಕು ಎಂದು ಅರ್ಜಿದಾರರು ಹೇಳಿದ್ದಾರೆ. ಇದನ್ನು ಗೌಪ್ಯತಾ ನಿಯಮಗಳಿಗೆ ಒಳಪಡಿಸಬೇಕು ಎಂದೂ ಮನವಿ ಮಾಡಲಾಗಿದೆ.

ಪ್ರಯಾಣದ ವೇಳೆ ಚಾಲಕ ನಿಗದಿತ ಮಾರ್ಗದಿಂದ ಗಮನಾರ್ಹವಾಗಿ ಬೇರೆಡೆಗೆ ತಿರುಗಿದರೆ ಪ್ರಯಾಣಿಕರಿಗೆ ಸ್ವಯಂಚಾಲಿತ ಎಚ್ಚರಿಕೆ ನೀಡುವ ವ್ಯವಸ್ಥೆ ಜಾರಿಗೆ ತರಬೇಕು ಎಂದು ಅರ್ಜಿಯಲ್ಲಿ ಒತ್ತಾಯಿಸಲಾಗಿದೆ. ಜೊತೆಗೆ ಚಾಲಕರಿಗೆ ನಿಯಮಿತವಾಗಿ ಲಿಂಗ ಸಂವೇದನೆ ಮತ್ತು ಮಹಿಳಾ ಸುರಕ್ಷತೆ ಕುರಿತ ತರಬೇತಿ ನೀಡಬೇಕು ಹಾಗೂ ಮಹಿಳೆಯರಿಗೆ ಅಪಾಯಕಾರಿಯಾಗಬಹುದಾದ ಸ್ಥಳಗಳಲ್ಲಿ ಮೇಲ್ವಿಚಾರಣಾ ವ್ಯವಸ್ಥೆ ಬಲಪಡಿಸಬೇಕು ಎಂದು ಕೋರಲಾಗಿದೆ.

ಏಕಾಂಗಿಯಾಗಿ ಪ್ರಯಾಣಿಸುವ ಮಹಿಳೆಯರಿಗಾಗಿ ಪರಿಶೀಲನೆಗೊಳಗಾದ ಮಹಿಳಾ ಚಾಲಕರ ಪ್ರತ್ಯೇಕ ಬಳಗ ನಿರ್ಮಿಸುವಂತೆಯೂ ಅರ್ಜಿಯಲ್ಲಿ ಮನವಿ ಮಾಡಲಾಗಿದೆ. ಲಭ್ಯತೆ ಇರುವ ಸಂದರ್ಭದಲ್ಲಿ ಒಂಟಿಯಾಗಿ ಪ್ರಯಾಣಿಸುವ ಮಹಿಳೆಯರು ಮಹಿಳಾ ಚಾಲಕರನ್ನು ಆಯ್ಕೆ ಮಾಡಿಕೊಳ್ಳಲು ಅಥವಾ ಅಂತಹ ಚಾಲಕರಿಗೆ ಆದ್ಯತೆ ನೀಡುವ ವ್ಯವಸ್ಥೆ ಕಲ್ಪಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ. ಮಹಿಳೆಯರ ಸುರಕ್ಷತೆಗೆ ಸಂಬಂಧಿಸಿದ ಈ ಎಲ್ಲಾ ಬೇಡಿಕೆಗಳ ಕುರಿತು ಓಲಾ, ಉಬರ್, ರ್‍ಯಾಪಿಡೊ ಹಾಗೂ ಕೇಂದ್ರ ಮತ್ತು ದೆಹಲಿ ಸರ್ಕಾರಗಳ ಪ್ರತಿಕ್ರಿಯೆಯನ್ನು ಹೈಕೋರ್ಟ್ ಕೇಳಿದೆ.

### ಮಕ್ಕಳಿಗೆ ಸೋಷಿಯಲ್ ಮೀಡಿಯಾ ಬ್ಯಾನ್:

# ನಿಯಮ ರೂಪಿಸುವಂತೆ ಕೇಂದ್ರಕ್ಕೆ ಸುಪ್ರೀಂ ಸೂಚನೆ

**ನವದೆಹಲಿ, ಸೆ.30:** ಈಗಾಗಲೇ ವಿಶ್ವದ ಹಲವು ದೇಶಗಳು 18 ವರ್ಷದೊಳಗಿನ ಅಪ್ರಾಪ್ತರಿಗೆ ಸಾಮಾಜಿಕ ಜಾಲತಾಣದ ಖಾತೆಗಳನ್ನು ಹೊಂದುವುದನ್ನು ನಿರ್ಬಂಧಿಸಲಾಗಿದೆ. ಈಗ ಇದೇ ಮಾದರಿಯಲ್ಲಿ 18 ವರ್ಷದೊಳಗಿನವರು ಸ್ವತಂತ್ರವಾಗಿ ಸಾಮಾಜಿಕ ಜಾಲತಾಣದ ಖಾತೆಗಳನ್ನು ಹೊಂದುವುದನ್ನು ನಿರ್ಬಂಧಿಸಲು ಕಠಿಣ ಶಾಸನಬದ್ಧ ನಿಯಮಗಳನ್ನು ರೂಪಿಸುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಮಹತ್ವದ ಸೂಚನೆ ನೀಡಿದೆ. ಪ್ರಕರಣವೊಂದರ ವಿಚಾರಣೆ ವೇಳೆ, ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ. ಮೋಹನ ಅವರನ್ನೊಳಗೊಂಡ ಸುಪ್ರೀಂ ಕೋರ್ಟ್ ಪೀಠವು, ಅಪ್ರಾಪ್ತರು ಸೋಷಿಯಲ್ ಮೀಡಿಯಾ ಖಾತೆ ತೆರೆಯುವುದನ್ನು ತಡೆಯಲು ಕೇವಲ ಮಾರ್ಗಸೂಚಿಗಳಲ್ಲ, ಬದಲಿಗೆ ಕಡ್ಡಾಯವಾಗಿ ಪಾಲಿಸಲೇಬೇಕಾದ ಶಾಸನಬದ್ಧ ನಿಯಮಗಳನ್ನು ರೂಪಿಸುವ ಸಾಧ್ಯತೆಯನ್ನು ಪರಿಶೀಲಿಸುವಂತೆ ಕೇಂದ್ರ ಸರ್ಕಾರಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಜೊತೆಗೆ, ಭಾರತೀಯ ಒಪ್ಪಂದ ಕಾಯ್ದೆಯ ಪ್ರಕಾರ, 18 ವರ್ಷದೊಳಗಿನ ಅಪ್ರಾಪ್ತರು ಯಾವುದೇ ಕಾನೂನುಬದ್ಧ ಒಪ್ಪಂದಗಳಿಗೆ ಸಹಿ ಹಾಕಲು ಅಥವಾ ಒಪ್ಪಿಗೆ ನೀಡಲು ಅರ್ಹರಲ್ಲ ಎಂದು ಪೀಠವು ಅಭಿಪ್ರಾಯಪಟ್ಟಿದೆ.

# ಅರಬ್ಬಿ ಸಮುದ್ರದಲ್ಲಿ 3 ಸಾವಿರ ಕೋಟಿ ಮೌಲ್ಯದ ಡ್ರಗ್ಸ್ ವಶ

## ಇರಾನ್ ದೋಣಿಯಲ್ಲಿದ್ದ ಐವರು ಪಾಕ್ ಪ್ರಜೆಗಳ ಬಂಧನ

**ಅಹಮದಾಬಾದ್, ಸೆ.30:** ಭಾರತೀಯ ಕರಾವಳಿ ಕಾವಲು ಪಡೆ ಮತ್ತು ಗುಜರಾತ್ ಎಟಿಎಸ್ ಜಂಟಿ ಕಾರ್ಯಾಚರಣೆ ನಡೆಸಿ ಅರಬ್ಬಿ ಸಮುದ್ರದಲ್ಲಿ ಇರಾನಿನ ದೋಣಿಯಿಂದ 526 ಕೆಜಿಗೂ ಹೆಚ್ಚು ಮಾದಕವಸ್ತುಗಳನ್ನು ವಶಪಡಿಸಿಕೊಂಡಿದೆ.

ವಶಪಡಿಸಿಕೊಂಡ ಹೆರಾಯಿನ್ ಮತ್ತು ಮೆಥಾಂಫೆಟಮೈನ್ನ ಅಂತಾರಾಷ್ಟ್ರೀಯ ಮಾರುಕಟ್ಟೆ ಮೌಲ್ಯ 3,000 ಕೋಟಿಗೂ ಹೆಚ್ಚು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದೋಣಿಯಲ್ಲಿದ್ದ ಐವರು ಪಾಕಿಸ್ತಾನಿ ಪ್ರಜೆಗಳನ್ನು ವಶಕ್ಕೆ ಪಡೆಯಲಾಗಿದೆ.

ಸೆಪ್ಟೆಂಬರ್ 25ರಂದು ಲಕ್ಷದ್ವೀಪದ ಪಶ್ಚಿಮ ಭಾಗದಲ್ಲಿ ಈ ಕಾರ್ಯಾಚರಣೆ ನಡೆದಿದೆ. ಗುಪ್ತಚರ ಮಾಹಿತಿ ಆಧರಿಸಿ ಭಾರತೀಯ ಕರಾವಳಿ ಕಾವಲು ಪಡೆ ಸಮುದ್ರ ಮತ್ತು ವಾಯು ಮಾರ್ಗದ ಮೂಲಕ ಅನುಮಾನಾಸ್ಪದ ದೋಣಿಯ ಮೇಲೆ ನಿರಂತರ ನಿಗಾ ಇರಿಸಿತ್ತು. ಬಳಿಕ ಬೆನ್ನಟ್ಟಿ ದೋಣಿಯನ್ನು ತಡೆದು, ಸಿಬ್ಬಂದಿ ಬೋರ್ಡಿಂಗ್ ಕಾರ್ಯಾಚರಣೆ ನಡೆಸಿದ್ದಾರೆ.

ಮುಂಬೈಗೆ ಕರೆತಂದ ದೋಣಿ

ಕಾರ್ಯಾಚರಣೆ ಬಳಿಕ ವಶಪಡಿಸಿಕೊಂಡ ಮಾದಕವಸ್ತುಗಳು, ದೋಣಿ ಮತ್ತು ಅದರಲ್ಲಿದ್ದ ಸಿಬ್ಬಂದಿಯನ್ನು ಸಶಸ್ತ್ರ ಭದ್ರತೆಯೊಂದಿಗೆ ಮುಂಬೈಗೆ ಕರೆತರಲಾಗಿದೆ. ಇಲ್ಲಿ ವಿವಿಧ ತನಿಖಾ ಸಂಸ್ಥೆಗಳು ಜಂಟಿಯಾಗಿ ವಿಚಾರಣೆ ನಡೆಸಲಿವೆ.

ವಶಪಡಿಸಿಕೊಂಡ ಸರಕಿನ ಮೂಲ, ಅದರ ಮಾಲೀಕತ್ವ ಹಾಗೂ ಎಲ್ಲಿಗೆ ಸಾಗಿಸಲಾಗುತ್ತಿತ್ತು ಎಂಬುದನ್ನು ಪತ್ತೆಹಚ್ಚಲು ಐವರು ಪಾಕಿಸ್ತಾನಿ ಪ್ರಜೆಗಳನ್ನು ವಿಚಾರಣೆ ನಡೆಸಲಾಗುತ್ತಿದೆ. ಈ ಕಳ್ಳಸಾಗಣೆ ಹಿಂದೆ ಇರುವ ಜಾಲದ ಬಗ್ಗೆಯೂ ತನಿಖೆ ಮುಂದುವರಿದಿದೆ.



### ಗುಪ್ತಚರ ಮಾಹಿತಿ ಆಧರಿಸಿ ಕಾರ್ಯಾಚರಣೆ

**ಗುಜರಾತ್ ಎಟಿಎಸ್ ಹಾಗೂ ಕೇಂದ್ರ ಗುಪ್ತಚರ ಸಂಸ್ಥೆಗಳಿಂದ ದೊರೆತ ಮಾಹಿತಿಯ ಆಧಾರದ ಮೇಲೆ ಅನುಮಾನಾಸ್ಪದ ದೋಣಿಯ ಚಲನವಲನದ ಬಗ್ಗೆ ಮಾಹಿತಿ ಸಂಗ್ರಹಿಸಲಾಗಿತ್ತು. ಅದರಂತೆ ಭಾರತೀಯ ಕರಾವಳಿ ಕಾವಲು ಪಡೆ ಸಮುದ್ರ ಮತ್ತು ವಾಯು ಕಣ್ಗಾವಲು ನಡೆಸಿ ದೋಣಿಯನ್ನು ಪತ್ತೆಹಚ್ಚಿತ್ತು. ಕರಾವಳಿ ಕಾವಲು ಪಡೆಯ ಪ್ರಕಾರ, ಈ ಕಾರ್ಯಾಚರಣೆ ಸಮುದ್ರ ಮಾರ್ಗದ ಮೂಲಕ ನಡೆಯುತ್ತಿದ್ದ ಅಂತಾರಾಷ್ಟ್ರೀಯ ಮಾದಕವಸ್ತು ಕಳ್ಳಸಾಗಣೆ ತಡೆಯುವ ಪ್ರಯತ್ನದ ಭಾಗವಾಗಿದೆ. ಗುಜರಾತ್ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ಸಮುದ್ರ ಮಾರ್ಗದ ಮೂಲಕ ನಡೆಯುವ ಮಾದಕವಸ್ತು ಕಳ್ಳಸಾಗಣೆ ವಿರುದ್ಧ ತನಿಖಾ ಸಂಸ್ಥೆಗಳು ಕಾರ್ಯಾಚರಣೆ ಮುಂದುವರಿಸಿವೆ.**

# 2027ರ ಚುನಾವಣೆಯಲ್ಲಿ ಒಟ್ಟಾಗಿ ಸ್ಪರ್ಧಿಸೋಣ: ಮಾಯಾವತಿಗೆ ಆಜಾದ್ ಸಮಾಜ ಪಕ್ಷ ಮನವಿ

**ಲಖನೌ, ಸೆ. 30:** ಉತ್ತರ ಪ್ರದೇಶದ 2027ರ ವಿಧಾನಸಭಾ ಚುನಾವಣೆಯಲ್ಲಿ ಬಹುಜನ ಸಮಾಜ ಪಕ್ಷದ (ಬಿಎಸ್‌ಪಿ) ಮುಖ್ಯಸ್ಥೆ ಮಾಯಾವತಿ ಅವರೊಂದಿಗೆ ಒಟ್ಟಾಗಿ ಚುನಾವಣೆ ಎದುರಿಸುವ ಇರಾದೆಯನ್ನು ಆಜಾದ್ ಸಮಾಜ ಪಕ್ಷದ (ಕಾನ್ಶಿರಾಮ್) ಮುಖ್ಯಸ್ಥ ಹಾಗೂ ನಗೀನಾ ಸಂಸದ ಚಂದ್ರಶೇಖರ್ ಆಜಾದ್ ಮತ್ತೊಮ್ಮೆ ವ್ಯಕ್ತಪಡಿಸಿದ್ದಾರೆ. ಸಮಾಜದ ಜನರು ತಮ್ಮಿಬ್ಬರೂ ಒಟ್ಟಾಗಿ ಬರಬೇಕು ಎಂದು ಬಯಸುತ್ತಿದ್ದಾರೆ. ಈ ನಿಟ್ಟಿನಲ್ಲಿ ತಾವು ಹಲವು ಬಾರಿ ಪ್ರಯತ್ನಿಸಿದ್ದರೂ ಯಶಸ್ವಿಯಾಗಿಲ್ಲ. ಒಂದೇ ಕೈಯಿಂದ ಚಪ್ಪಾಳೆ ಬಾರಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದಾರೆ.

- ಬಿಜೆಪಿ ಬಿ-ಟೀಮ್ ಎನ್ನುವ ಆರೋಪ ತಳ್ಳಿಹಾಕಿದ ಚಂದ್ರಶೇಖರ್ ಆಜಾದ್

ಮಂಗಳವಾರ ಸಂಭಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿದ ಚಂದ್ರಶೇಖರ್ ಆಜಾದ್, ಮಾಯಾವತಿ ಅವರ ಬಗ್ಗೆ ತಮಗೆ ಗೌರವವಿದೆ. ಬಹುಜನ ಸಮಾಜದ ಹಿತಕ್ಕಾಗಿ ಒಟ್ಟಾಗಿ ಕೆಲಸ ಮಾಡುವ ಬಯಕೆ ತಮ್ಮಲ್ಲಿದೆ. ಮ್ಮನ್ನು ಬಿಜೆಪಿ ಪರವಾಗಿ ಕೆಲಸ ಮಾಡುವ ಬಿ ಟೀಂ ಎಂದು ಬಿಂಬಿಸುವ ಆರೋಪಗಳನ್ನೂ ಆಜಾದ್ ತಳ್ಳಿಹಾಕಿದ್ದಾರೆ. ತಮ್ಮ ರಾಜಕೀಯ ಬೆಳವಣಿಗೆ ಯಾವುದೇ ಪಕ್ಷದ ನೆರವಿನಿಂದ ಬಂದದ್ದಲ್ಲ; ಜನರ ಹೋರಾಟ ಮತ್ತು ತಮ್ಮ ರಾಜಕೀಯ ಪ್ರಯತ್ನಗಳ ಮೂಲಕ ತಾವು ಈ ಹಂತಕ್ಕೆ ಬಂದಿದ್ದಾಗಿ ಅವರು ಹೇಳಿದ್ದಾರೆ. ಮಾಯಾವತಿ ಅವರು ತಮ್ಮ ವಿರುದ್ಧ ಮಾಡಿರುವ ಆರೋಪಗಳ ನಡುವೆಯೂ ಅವರ ಬಗ್ಗೆ ತಮಗೆ ಗೌರವವಿದೆ. ತಮ್ಮ ಉದ್ದೇಶ ಮಾಯಾವತಿ ಅವರನ್ನು ರಾಜಕೀಯವಾಗಿ ಎದುರಿಸುವುದಲ್ಲ. ಬದಲಾಗಿ ಬಹುಜನ ಸಮಾಜದ ರಾಜಕೀಯ ಶಕ್ತಿ ಒಂದಾಗಬೇಕು ಎಂಬುದು ತಮ್ಮ ಆಶಯ ಎಂದು ಸ್ಪಷ್ಟಪಡಿಸಿದ್ದಾರೆ.

ಒಟ್ಟಿನಲ್ಲಿ, ಮಾಯಾವತಿ ಅವರೊಂದಿಗೆ ಮೈತ್ರಿಗೆ ಸಿದ್ಧ ಎಂಬ ಸಂದೇಶವನ್ನು ನೀಡಿರುವ ಚಂದ್ರಶೇಖರ್ ಆಜಾದ್, ನಗೀನಾ ಗೆಲುವಿನ ಕುರಿತಾದ ಮಾಯಾವತಿ ಅವರ ಆರೋಪವನ್ನು ತಿರಸ್ಕರಿಸುವುದರ ಜೊತೆಗೆ ತಮ್ಮ ರಾಜಕೀಯ ಅಸ್ತಿತ್ವವನ್ನು ಜನಾದೇಶದ ಮೂಲಕ ಸಮರ್ಥಿಸಿಕೊಂಡಿದ್ದಾರೆ. ಮೈತ್ರಿಗೆ ಎರಡೂ ಕಡೆಯ ಒಪ್ಪಿಗೆ ಅಗತ್ಯ ಎಂಬುದನ್ನು 'ಒಂದೇ ಕೈಯಿಂದ ಚಪ್ಪಾಳೆ ಸಾಧ್ಯವಿಲ್ಲ' ಎಂಬ ಮಾತಿನ ಮೂಲಕ ಅವರು ಸ್ಪಷ್ಟಪಡಿಸಿದ್ದಾರೆ.

# ವಿಧ್ವಂಸಕ ಕೃತ್ಯ ಹಿಮ್ಮೆಟ್ಟಿಸಿದ ಭಾರತೀಯ ಪೈಲಟ್ ಸ್ಮಿತ್ ಮಚ್ಚಾರ್



- ಫ್ಲೈದುಬೈ ವಿಮಾನದಲ್ಲಿ ಪೈಲಟ್‌ಗಳ ಮಾರಾಮಾರಿ
- ಸೌದಿ ಅರೇಬಿಯಾದಲ್ಲಿ ಸುರಕ್ಷಿತವಾಗಿ ಇಳಿದ 180 ಪ್ರಯಾಣಿಕರಿದ್ದ ವಿಮಾನ

**ಟೆಲ್‌ಅವಿವ್(ಇಸ್ರೇಲ್), ಸೆ.30:** ಯುನೈಟೆಡ್ ಅರಬ್ ಎಮಿರೇಟ್ಸ್‌ನ ದುಬೈನಿಂದ ಇಸ್ರೇಲ್‌ಗೆ ಪ್ರಯಾಣಿಸುತ್ತಿದ್ದ ವಿಮಾನದ ಕಾಕ್‌ಪಿಟ್‌ನಲ್ಲಿ ನಡೆದ ಸಂಘರ್ಷದ ವೇಳೆ, ಸಹ-ಪೈಲಟ್‌ನಿಂದ ನಡೆದ ವಿಮಾನ ವಿಧ್ವಂಸಕ ಕೃತ್ಯದ ಯತ್ನವನ್ನು ಹಿಮ್ಮೆಟ್ಟಿಸಿದ್ದು, 'ಫ್ಲೈದುಬೈ' ಸಂಸ್ಥೆಯ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಎಂದು ಗುರುತಿಸಲಾಗಿದೆ. ವಿಮಾನದ ವ್ಯವಸ್ಥೆಗಳನ್ನು ಹಾಳುಮಾಡಲು (ವಿಧ್ವಂಸಕ ಕೃತ್ಯ ನಡೆಸಲು) ಯತ್ನಿಸಿದ ಸಹ-ಪೈಲಟ್‌ನನ್ನು ಕ್ಯಾಪ್ಟನ್ ಮಚ್ಚಾರ್ ಎದುರಿಸಿ ತಡೆದರು ಮತ್ತು ದುಬೈ-ಟೆಲ್ ಅವಿವ್ ವಿಮಾನದಲ್ಲಿದ್ದ 180 ಪ್ರಯಾಣಿಕರ ಪ್ರಾಣವನ್ನು ಉಳಿಸಿದರು. ಈ ಸಂಘರ್ಷದ ವೇಳೆ ಚಾಕುವಿನಿಂದ ಹಲ್ಲೆಗೊಳಗಾದ ಅವರು ರಕ್ತಸಿಕ್ತರಾಗಿ, ಮಾತನಾಡಲು ಪರದಾಡುವ ಸ್ಥಿತಿಯಲ್ಲಿದ್ದರು. ಈ ದೃಶ್ಯಗಳಲ್ಲಿ ಪ್ರಯಾಣಿಕರು ಅವರನ್ನು 'ಹೀರೋ' ಎಂದು ಶ್ಲಾಘಿಸುತ್ತಿರುವುದು ಕಂಡುಬಂದಿದೆ.

ಈ ಘರ್ಷಣೆಯು ವಿಮಾನ ಅಪಹರಣದ ಆತಂಕವನ್ನು ಹುಟ್ಟುಹಾಕಿತಾದರೂ, ಆ ಸಾಧ್ಯತೆಯನ್ನು ಶೀಘ್ರದಲ್ಲೇ ತಳ್ಳಿಹಾಕಲಾಯಿತು. ಇತರ ಪೈಲಟ್‌ಗಳು ಕಾಕ್‌ಪಿಟ್‌ನ ನಿಯಂತ್ರಣವನ್ನು ವಹಿಸಿಕೊಂಡು, ವಿಮಾನವನ್ನು ಸೌದಿ ಅರೇಬಿಯಾದ ಬೇರೊಂದು ಸ್ಥಳಕ್ಕೆ ಸುರಕ್ಷಿತವಾಗಿ ಇಳಿಸಿದರು.

**ಯಾರು ಈ ಮಚ್ಚಾರ್?:** ಭಾರತೀಯ ಪ್ರಜೆಯಾದ ಕ್ಯಾಪ್ಟನ್ ಸ್ಮಿತ್ ಮಚ್ಚಾರ್, ಯುಎಇ ಸರ್ಕಾರದ ಒಡೆತನದ 'ಫ್ಲೈದುಬೈ'ನಲ್ಲಿ ನಾಲ್ಕು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದರು. ಅದಕ್ಕೂ ಮೊದಲು ಅವರು 10 ವರ್ಷಗಳ ಕಾಲ 'ಸ್ಪೈಸ್ ಜೆಟ್' ಸಂಸ್ಥೆಯಲ್ಲಿ ಕೆಲಸ ಮಾಡಿದ್ದರು. ಕ್ಯಾಪ್ಟನ್ ಮಚ್ಚಾರ್ ಬೋಯಿಂಗ್ 737 ವಿಮಾನಗಳ ಕಾರ್ಯಾಚರಣೆಯಲ್ಲಿ 13 ವರ್ಷಗಳಿಗೂ ಹೆಚ್ಚು ಕಾಲ ವಾಣಿಜ್ಯ ವಿಮಾನಯಾನ ಅನುಭವವನ್ನು ಹೊಂದಿದ್ದಾರೆ. ಅವರು 'ಲೈನ್ ಟ್ರೈನಿಂಗ್ ಕ್ಯಾಪ್ಟನ್' ಆಗಿ ವ್ಯಾಪಕವಾಗಿ ಸೇವೆ ಸಲ್ಲಿಸಿದ್ದರು.

# ಜ್ಞಾನೇಶ್ ಕುಮಾರ್‌ಗೆ ಭಾರತ ರತ್ನ ಕೊಡಿ: ಉಮರ್ ಅಬ್ದುಲ್ಲಾ ವ್ಯಂಗ್ಯ

**ಶ್ರೀನಗರ, ಸೆ. 30:** ಇಡೀ ಪಶ್ಚಿಮ ಬಂಗಾಳವನ್ನೇ ಬಿಜೆಪಿಗೆ ಒಪ್ಪಿಸಿರುವ ಕೇಂದ್ರ ಚುನಾವಣಾ ಆಯೋಗದ (ಇಸಿಐ) ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರಿಗೆ ಭಾರತ ರತ್ನ ಕೊಡಿ ಎಂದು ಕೇಂದ್ರ ಸರ್ಕಾರದ ವಿರುದ್ಧ ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ವಾಗ್ದಾಳಿ ನಡೆಸಿದ್ದಾರೆ.

ಆಯೋಗದಲ್ಲಿ ಜ್ಞಾನೇಶ್ ಕುಮಾರ್ ನಾಯಕತ್ವ ಮತ್ತು ಎಸ್‌ಐಆರ್ ಪ್ರಕ್ರಿಯೆ ವಿರುದ್ಧ ದೇಶಾದ್ಯಂತ ಆಕ್ರೋಶಗಳು ವ್ಯಕ್ತವಾಗುತ್ತಿವೆ. ಇದೇ ಹೊತ್ತಿನಲ್ಲಿ, ಗ್ಯಾನೇಶ್ ಕುಮಾರ್ಗೆ ಪದ್ಮಭೂಷಣ ಪ್ರಶಸ್ತಿ ನೀಡಬೇಕೆಂಬು ಬಿಜೆಪಿ ಪ್ರಸ್ತಾಪಿಸಿದೆ. ಈ ಪ್ರಸ್ತಾಪಕ್ಕೆ ಖಾರವಾಗಿ ಪ್ರತಿಕ್ರಿಯಿಸಿರುವ ಒಮರ್ ಅಬ್ದುಲ್ಲಾ, ಪದ್ಮಭೂಷಣಕ್ಕೆ ಏಕೆ ನಿಲ್ಲಿಸುತ್ತೀರಿ, ಇಡೀ ಪಶ್ಚಿಮ ಬಂಗಾಳವನ್ನೇ ಬಿಜೆಪಿಗೆ ಒಪ್ಪಿಸಿದ್ದಕ್ಕಾಗಿ ಅವರಿಗೆ ಭಾರತ ರತ್ನ ಕೊಡಿ ಅಥವಾ ರಾಷ್ಟ್ರಪತಿಯನ್ನಾಗಿ ಮಾಡಿ ಎಂದು ವ್ಯಂಗ್ಯವಾಡಿದ್ದಾರೆ.

ಶ್ರೀನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜ್ಞಾನೇಶ್ ಕುಮಾರ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಬೇಕೆಂದು ಬಿಜೆಪಿಯವರು ಹೇಳುತ್ತಿದ್ದಾರೆ. ಕೇವಲ ಪದ್ಮಭೂಷಣವೇಕೆ? ಅವರನ್ನು ಭಾರತ ರತ್ನ ನೀಡಿ ಗೌರವಿಸಬೇಕು. ಇನ್ನೂ ಒಂದೆರಡು ವರ್ಷಗಳಲ್ಲಿ ರಾಷ್ಟ್ರಪತಿ ಚುನಾವಣೆ ಬರಲಿದೆ, ಅವರನ್ನು ದೇಶದ ರಾಷ್ಟ್ರಪತಿಯಾಗೇ ಮಾಡಿಬಿಡಲಿ! ಏಕೆಂದರೆ ಅವರು ಬಿಜೆಪಿಗಾಗಿ ಅಷ್ಟೊಂದು ಕೆಲಸ ಮಾಡಿದ್ದಾರೆ, ಇಡೀ ಪಶ್ಚಿಮ ಬಂಗಾಳವನ್ನೇ ಬಿಜೆಪಿಗೆ ಉಡುಗೊರೆಯಾಗಿ ತಂದುಕೊಟ್ಟಿದ್ದಾರೆ.



### ಬಿಜೆಪಿ ಪ್ರಸ್ತಾಪಕ್ಕೆ ಕಿಡಿ: ಕೇಂದ್ರ ಸರ್ಕಾರದ ವಿರುದ್ಧ ಜಮ್ಮು ಕಾಶ್ಮೀರ ಸಿಎಂ ವಾಗ್ದಾಳಿ

ಹೀಗಿರುವಾಗ ಅವರಿಗೆ ಬರೀ ಪದ್ಮಭೂಷಣ ನೀಡಿದರೆ ಅದು ಅವರಿಗೆ ಮಾಡುವ ಬಹುದೊಡ್ಡ ಅನ್ಯಾಯ ಎಂದು ಹಾಸ್ಯದ ಧಾಟಿಯಲ್ಲಿ ಲೇವಡಿ ಮಾಡಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ತಾಂತ್ರಿಕ ನಿಯಮಗಳ ಮೂಲಕ ಲಕ್ಷಾಂತರ ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಗುತ್ತಿದೆ. ಚುನಾವಣಾ ಆಯೋಗವು ತಕ್ಷಣವೇ ಆತ್ಮಾವಲೋಕನ ಮಾಡಿಕೊಳ್ಳಬೇಕು. ಆಯೋಗದ ಮೇಲೆ ರಾಜಕೀಯ ಪಕ್ಷಗಳು ಮಾತ್ರ ಆರೋಪ ಮಾಡುತ್ತಿಲ್ಲ; ಆಯೋಗದ ಒಳಗೂ ಆಕ್ಷೇಪಣೆಗಳು ಪತ್ರಿಕಾ ತನಿಖೆಗಳಿಂದ ಬಹಿರಂಗಗೊಂಡಿವೆ. ತಪ್ಪನ್ನು ಮುಚ್ಚಿಹಾಕಲು ಯತ್ನಿಸುವ ಬದಲು ಆಯೋಗ ತನ್ನ ಕೆಲಸವನ್ನು ತಿದ್ದಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಅಂದಹಾಗೆ, ಜ್ಞಾನೇಶ್ ಕುಮಾರ್ ಅವರ ವಜಾಕ್ಕೆ ಆಗ್ರಹಿಸಿ ದೇಶದ ನಾನಾ ಭಾಗಗಳಲ್ಲಿ ರಾಜಕೀಯ ಕಾವು ತೀವ್ರಗೊಂಡಿದೆ. ದೆಹಲಿಯಲ್ಲಿರುವ ಚುನಾವಣಾ ಆಯೋಗದ ಕೇಂದ್ರ ಕಚೇರಿಯ ಮುಂದೆ ಸಿಪಿಐ(ಎಂ) ನಾಯಕ ಎಂ.ಎ. ಬೇಬಿ, ಬೃಂದಾ ಕಾರಟ್ ಸೇರಿದಂತೆ ಎಡಪಕ್ಷಗಳ ಪ್ರಮುಖ ನಾಯಕರು ಬೃಹತ್ ಪ್ರತಿಭಟನೆ ನಡೆಸಿ, ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿದರು. ಪ್ರತಿಭಟನಾ ನಿರತರನ್ನು ಪೊಲೀಸರು ವಶಕ್ಕೆ ಪಡೆದು, ಬಳಿಕ ಬಿಡುಗಡೆ ಮಾಡಿದ್ದಾರೆ.

ಅಂತೆಯೇ, ಜ್ಞಾನೇಶ್ ಕುಮಾರ್ ವಜಾಗಾಗಿ ವಿಪಕ್ಷಗಳು ಸಂಸತ್ತಿನಲ್ಲಿ ಮಹಾಭಿಯೋಗ ಪ್ರಸ್ತಾಪಿಸಲು ಮುಂದಾಗಿವೆ. ಈ ಮಹಾಭಿಯೋಗಕ್ಕೆ ತಮ್ಮ ಪಕ್ಷವು ಪೂರ್ಣಪ್ರಮಾಣದಲ್ಲಿ ಬೆಂಬಲಿಸಲಿದೆ ಎಂದು ಡಿಎಂಕೆ ನಾಯಕ ಟಿ.ಕೆ.ಎಸ್. ಇಳಂಗೋವನ್ ದೃಢಪಡಿಸಿದ್ದಾರೆ.

# ಆಮ್ ಆದ್ಮಿ ಪಕ್ಷ ಇಂಡಿಯಾ ಒಕ್ಕೂಟದ ಭಾಗವಲ್ಲ: ಸಂಜಯ್ ಸಿಂಗ್ ಸ್ಪಷ್ಟನೆ

**ನವದೆಹಲಿ, ಸೆ.30:** ಪ್ರತಿಪಕ್ಷಗಳ ಇಂಡಿಯಾ ಮೈತ್ರಿಕೂಟದ ಪ್ರಮುಖ ಸಭೆಯಿಂದ ಆಮ್ ಆದ್ಮಿ ಪಕ್ಷ (ಎಎಪಿ) ದೂರ ಉಳಿಯುವುದಾಗಿ ಸ್ಪಷ್ಟಪಡಿಸಿದೆ. ಎಎಪಿ ಇಂಡಿಯಾ ಒಕ್ಕೂಟದ ಭಾಗವಾಗಿಲ್ಲ, ಹೀಗಾಗಿ ಸಭೆಯಲ್ಲಿ ಭಾಗವಹಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಎಎಪಿಯ ಹಿರಿಯ ನಾಯಕ ಹಾಗೂ ರಾಜ್ಯಸಭಾ ಸಂಸದ ಸಂಜಯ್ ಸಿಂಗ್ ತಿಳಿಸಿದ್ದಾರೆ.

ಬುಧವಾರ ನವದೆಹಲಿಯಲ್ಲಿ ಇಂಡಿಯಾ ಮೈತ್ರಿಕೂಟದ ನಾಯಕರ ಪ್ರಮುಖ ಸಮನ್ವಯ ಸಭೆ ಕರೆಯಲಾಗಿತ್ತು. ಪ್ರಸ್ತುತ ರಾಜಕೀಯ ಮತ್ತು ಚುನಾವಣೆ ಬೆಳವಣಿಗೆಗಳ ಬಗ್ಗೆ ಚರ್ಚಿಸಲು ಈ ಸಭೆಯನ್ನು ಆಯೋಜಿಸಲಾಗಿತ್ತು. ಆದರೆ ಈ ಸಭೆಯಲ್ಲಿ ಎಎಪಿ ಪ್ರತಿನಿಧಿಗಳು ಭಾಗವಹಿಸಲ್ಲ ಎಂದು ಸಂಜಯ್ ಸಿಂಗ್ ಮಾಧ್ಯಮಗಳಿಗೆ ಹೇಳಿದ್ದಾರೆ. ಎಎಪಿ ಇಂಡಿಯಾ ಒಕ್ಕೂಟದ ಭಾಗವಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಲಾಗಿದೆ. ಹೀಗಾಗಿ ಈ ರೀತಿಯ ಸಭೆಗಳಲ್ಲಿ ಭಾಗವಹಿಸುವುದರಲ್ಲಿ ಅರ್ಥವಿಲ್ಲ. ಆದರೆ ಮುಖ್ಯ ಚುನಾವಣೆ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರ ವಿರುದ್ಧ ಸಂಸತ್ತಿನಲ್ಲಿ ವಜಾ/ಮಹಾಭಿಯೋಗ ಪ್ರಸ್ತಾಪ ಮಂಡನೆಯಾದರೆ ಎಎಪಿ ಸಂಪೂರ್ಣ ಬೆಂಬಲಿ ನೀಡಲಿದೆ ಎಂದೂ ಈ ಸಂದರ್ಭದಲ್ಲೇ ಸಂಜಯ್ ಸಿಂಗ್ ಸ್ಪಷ್ಟಪಡಿಸಿದ್ದಾರೆ. ಸಿಇಸಿ ಜ್ಞಾನೇಶ್ ಕುಮಾರ್ ಅವರ ಮಹಾಭಿಯೋಗವು ರಾಷ್ಟ್ರೀಯ ಪ್ರಾಮುಖ್ಯತೆಯ ವಿಷಯ. ಆದ್ದರಿಂದ ಎಲ್ಲ ವಿಪಕ್ಷಗಳ ಜೊತೆಗೂಡಿ ಹೋರಾಟ ನಡೆಸಬೇಕಾಗುತ್ತದೆ ಎಂದೂ ಹೇಳಿದರು.

### ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಸಚಿವ ಎಚ್.ಸಿ. ಬಾಲಕೃಷ್ಣ ವಾಗ್ದಾಳಿ

# ರಾಜ್ಯದ ಸಮಸ್ಯೆಗಳ ಬಗ್ಗೆ ಗಮನಹರಿಸಬೇಕಿದೆ, ಬೆದರಿಕೆ ತಂತ್ರ ಅಗತ್ಯವಿಲ್ಲ



**ಬೆಂಗಳೂರು, ಸೆ.30:** ರಾಜ್ಯದಲ್ಲಿ ಜ್ವಲಂತ ಸಮಸ್ಯೆಗಳಿದ್ದು, ಅದರ ಬಗ್ಗೆ ಗಮನ ಹರಿಸಬೇಕಾಗಿದೆ. ಬೇರೆಯವರ ರೀತಿ ದಾಖಲೆ ತೋರಿಸಿ ಬ್ಲ್ಯಾಕ್‌ಮೇಲ್ ಮಾಡಿ ಹಫ್ತಾ ವಸೂಲಿ ಮಾಡಬೇಕಾ ಎಂದು ಪೌರಾಡಳಿತ ಸಚಿವ ಎಚ್. ಸಿ ಬಾಲಕೃಷ್ಣ ಪ್ರಶ್ನಿಸಿದರು.

ಕೇಂದ್ರ ಸಚಿವ ಕುಮಾರಸ್ವಾಮಿ ಆರೋಪಗಳಿಗೆ ಪ್ರತಿಕ್ರಿಯೆ ನೀಡಿದ ಸಚಿವರು, ನಮ್ಮದೂ ಕೆಜಿಎಫ್ 2 ಬರುತ್ತೆ. ಸಮಯ ಬಂದಾಗ ಬಿಡುಗಡೆ ಮಾಡ್ತೀವಿ. ಅವರ ಹಾಗೆ ಬ್ಲ್ಯಾಕ್‌ಮೇಲ್ ಮಾಡಿ ಹಫ್ತಾ ವಸೂಲಿ ಮಾಡುವ ಅವಶ್ಯಕತೆ ನಮಗಿಲ್ಲ ಎಂದಿದ್ದಾರೆ.

2018ರಲ್ಲಿ ಕುಮಾರಸ್ವಾಮಿ ಸಿಎಂ ಆಗಿದ್ದಾಗ ಎಲ್ಲವನ್ನೂ ಸರಿಮಾಡಬಹುದಿತ್ತಲ್ಲಾ, 2 ಸಲ ಸಿಎಂ ಆಗಿದ್ದಾಗ ಕುಮಾರಸ್ವಾಮಿ ಯಾಕೆ ಮಾಡಲಿಲ್ಲ. ನೈಸ್ ವಿಷಯ ಆರಂಭವಾಗಿದ್ದು 1994 ರಲ್ಲಿ ದೇವೇಗೌಡರು ಮುಖ್ಯಮಂತ್ರಿಯಾಗಿದ್ದಾಗ ಆರಂಭವಾಗಿತ್ತು, ಆಮೇಲೆ ಕುಮಾರಸ್ವಾಮಿ ಸಿಎಂ ಆಗಿದ್ದಾಗ ಸರಿ ಮಾಡಬಹುದಿತ್ತು. ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದಾಗ ಮಾತನಾಡಬಹುದಿತ್ತು. ಈಗ ಅನಾವಶ್ಯಕವಾಗಿ ಕ್ಯಾಸೆಟ್ ಬಿಡ್ತಿನಿ ಅದೂ ಇದು ಅಂತಾ ಹೇಳಿಕೊಂಡು ತಿರುಗಾಡ್ತಿದ್ದಾರೆ. ಈ ಬ್ಲ್ಯಾಕ್‌ಮೇಲರ್‌ಗಳಿಗೆ ನೀವು ಮಾಧ್ಯಮದವರು ಮಣೆ ಹಾಕೋದು ಏಕೆ ಎಂದಿದ್ದಾರೆ.

ಕೇಂದ್ರ ಸರ್ಕಾರದಲ್ಲಿ ಮಂತ್ರಿ ಆಗಿದ್ದೀರಾ, ನಿಮ್ಮ ಯೋಗ್ಯತೆಗೆ 50 ಸಾವಿರ ಕೊಡಿಸಿದರೆ ರೈತ ನಾಯಕ ಎಂದು ಒಪ್ಪಿಕೊಳ್ಳುತ್ತೇವೆ. ಕೆಲಸ ಮಾಡೋಕೆ ಬಿಡಿ. ಕೇಂದ್ರದಲ್ಲಿ ಮಂತ್ರಿ ಆಗಿದ್ದೀರಾ ಅಲ್ಲಿ ಕೆಲಸ ಮಾಡಿ, ಇಲ್ಲಿಗೆ ಬಂದು ಮುಖ್ಯಮಂತ್ರಿಗಳನ್ನು ಅಲ್ಲಾಡಿಸೋಕೆ ಬರೋದು ಬೇಡ ಎಂದು ಕಿಡಿ ಕಾರಿದ್ದಾರೆ.

**ಸೋದರನ ಆಸ್ತಿ ಬಗ್ಗೆ ಮೊದಲು ತನಿಖೆ ನಡೆಸಲಿ:** ಕುಮಾರಸ್ವಾಮಿ ಅವರ ತಾಯಿ ಚನ್ನಮ್ಮ ಅವರಿಗೂ ಐಟಿ ನೋಟೀಸ್ ಕೊಟ್ಟಿದ್ರು.. ಯಾಕೆ ಅಂತಾ ಗೊತ್ತಾ? ಏನಾಯ್ತು ನೋಟೀಸ್, ನರೇಂದ್ರ ಮೋದಿ, ಮತ್ತು ಅಮಿತ್ ಶಾ ಕೈ ಕಾಲು ಹಿಡಕೊಂಡ್ರು ಎಂದರು. ಐಟಿ ಮತ್ತು ಇಡಿಯವರು ಸುಮ್ಮನೆ ನೋಟೀಸ್ ಕೊಡುವುದಿಲ್ಲ ಎಂದರು. ಅವರ ಸಹೋದರ ಬಾಲಕೃಷ್ಣಗೌಡ ಅವರ ಆಸ್ತಿ ಕುಮಾರಸ್ವಾಮಿ ಮುಖ್ಯಮಂತ್ರಿ ಯಾಗಿದ್ದಾಗ ಒಂದೇ ವರ್ಷದಲ್ಲಿ ಏಕಾಏಕಿ 1000 ಕೋಟಿಗೆ ಏರಿತು. ಅದರ ಬಗ್ಗೆ ತನಿಖೆ ನಡೆಸಲಿ. ಆಮೇಲೆ ನಮ್ಮ ವಿರುದ್ಧ ತನಿಖೆ ನಡೆಸಲಿ ಎಂದು ಸಚಿವ ಎಚ್.ಸಿ. ಬಾಲಕೃಷ್ಣ ವಾಗ್ದಾಳಿ ನಡೆಸಿದ್ದಾರೆ.

## ಕೆಪಿಎಸ್‌ಸಿ ನೇಮಕಾತಿ ಪ್ರಕರಣ: ಜ್ಞಾನೇಂದ್ರಕುಮಾರ್, ಬಸವರಾಜ್ ಕನ್ನಾಳೆ 14 ದಿನ ಇ.ಡಿ. ವಶಕ್ಕೆ



**ಬೆಂಗಳೂರು, ಸೆ.30:** ಕರ್ನಾಟಕ ಲೋಕಸೇವಾ ಆಯೋಗ ನಡೆಸಿದ 400 ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯ ಅಕ್ರಮ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಭರ್ಜರಿ ಕಾರ್ಯಾಚರಣೆ ನಡೆಸಿದೆ.

ಕೆಪಿಎಸ್‌ಸಿಯ ಅಂದಿನ ಪರೀಕ್ಷಾ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಹಾಗೂ ಪ್ರಮುಖ ಮಧ್ಯವರ್ತಿ ಬಸವರಾಜ್ ಕನ್ನಾಳೆಯನ್ನು ಇ.ಡಿ. ಬಂಧಿಸಿದ್ದು, ನ್ಯಾಯಾಲಯವು ಇಬ್ಬರನ್ನೂ 14 ದಿನಗಳ ಕಾಲ ಇಡಿ ವಶಕ್ಕೆ ಒಪ್ಪಿಸಿದೆ.

ಬೆಂಗಳೂರಿನ ವಿಧಾನ ಸೌಧ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆ (BNS) 2023ರ ವಿವಿಧ ಸೆಕ್ಷನ್‌ಗಳಡಿ ದಾಖಲಾಗಿದ್ದ ಎಫ್‌ಐಆರ್‌ಗಳ ಆಧಾರದ ಮೇಲೆ ತನಿಖೆ ಆರಂಭಿಸಿದ ಇಡಿ ಬೆಂಗಳೂರು ವಲಯ ಕಚೇರಿ, ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (PMLA) ಅಡಿಯಲ್ಲಿ ಈ ಮಹತ್ವದ ಕ್ರಮ ಕೈಗೊಂಡಿದೆ. ಪ್ರತಿ ಅಭ್ಯರ್ಥಿಗೆ 30 ರಿಂದ 40 ಲಕ್ಷ ರೂ. ಡೀಲ್–ತನಿಖೆಯ ವೇಳೆ ಬಯಲಾದ ಅಂಶಗಳ ಪ್ರಕಾರ, ಅಕ್ರಮವಾಗಿ ಆಯ್ಕೆಯಾಗಲು ಪ್ರತಿ ಅಭ್ಯರ್ಥಿಯಿಂದ ಆರಂಭದಲ್ಲಿ ಬರೋಬ್ಬರಿ 80 ಲಕ್ಷ ರೂಪಾಯಿಗೆ ಬೇಡಿಕೆ ಇಡಲಾಗಿತ್ತು. ನಂತರ ಸಂಧಾನ ನಡೆಸಿ ಪ್ರತಿ ಅಭ್ಯರ್ಥಿಗೆ 30 ಲಕ್ಷದಿಂದ 40 ಲಕ್ಷ ರೂಪಾಯಿಗೆ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಒಪ್ಪಂದದ ಮುಂಗಡ ಮೊತ್ತವನ್ನು ನಗದು ಹಾಗೂ ಬ್ಯಾಂಕಿಂಗ್ ಮಾರ್ಗಗಳ ಮೂಲಕ ಸಂಗ್ರಹಿಸಲಾಗಿತ್ತು. ಉಳಿದ ಬಾಕಿ ಮೊತ್ತದ ಖಾತರಿಗಾಗಿ ಅಭ್ಯರ್ಥಿಗಳಿಂದ ಮುಂಗಡವಾಗಿ ಸಹಿ ಮಾಡಿದ ಖಾಲಿ ಚೆಕ್‌ಗಳು ಹಾಗೂ ಪ್ರಾಮಿಸರಿ ನೋಟುಗಳನ್ನು ಪಡೆಯಲಾಗಿತ್ತು. ಇವುಗಳನ್ನು ಶೋಧ ಕಾರ್ಯಾಚರಣೆಯ ವೇಳೆ ಜಪ್ತಿ ಮಾಡಲಾಗಿದೆ. ಅಕ್ರಮ ಹಣ ಸ್ವೀಕರಿಸಲು ಬೀದರ್‌ನ 'ಮೆಸರ್ಸ್ ಓಂ ಲಕ್ಷ್ಮಿ ಸೌಹಾರ್ದ ಸಹಕಾರಿ ಸಂಘ ನಿಯಮಿತ' ಬ್ಯಾಂಕ್ ಖಾತೆಯನ್ನು ಬಳಸಿಕೊಂಡಿರುವುದು ಪತ್ತೆಯಾಗಿದೆ.

### ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಜತೆ ಸಚಿವ ಪ್ರಿಯಾಂಕ್ ಖರ್ಗೆ ಚರ್ಚೆ

# ಕಲಬುರಗಿ ಯುವಜನರಿಗೆ ಕ್ರಿಕೆಟ್‌ನ ವಿವಿಧ ತಾಂತ್ರಿಕ ಕೌಶಲ್ಯಗಳ ತರಬೇತಿ



**ಬೆಂಗಳೂರು, ಸೆ.30:** ಕಲಬುರಗಿ ಜಿಲ್ಲೆಯ ಪ್ರತಿಭಾನ್ವಿತ ಯುವಜನರಿಗೆ ಕ್ರಿಕೆಟ್‌ಗೆ ಸಂಬಂಧಿಸಿದ ವಿವಿಧ ತಾಂತ್ರಿಕ ಕೌಶಲ್ಯಗಳಲ್ಲಿ ತರಬೇತಿ ನೀಡುವ ಕುರಿತು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ಕರ್ನಾಟಕ ಕ್ರಿಕೆಟ್ ಸಂಸ್ಥೆ ಅಧ್ಯಕ್ಷರಾದ ವೆಂಕಟೇಶ್ ಪ್ರಸಾದ್ ಹಾಗೂ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಪ್ರಗತಿಪರ ಆಶಯಗಳೊಂದಿಗೆ ಆರಂಭಿಸಲಾಗಿರುವ ಕಲಬುರಗಿ ನೆಕ್ಸ್ಟ್ ಫೌಂಡೇಶನ್ ಹಾಗೂ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ಸಹಯೋಗದಲ್ಲಿ ಕಲಬುರಗಿ ಜಿಲ್ಲೆಯ ಯುವಜನರಿಗೆ ಕ್ರಿಕೆಟ್ ಕ್ಷೇತ್ರದ ವಿವಿಧ ತಾಂತ್ರಿಕ ವಿಭಾಗಗಳಲ್ಲಿ ತರಬೇತಿ ಒದಗಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಿಕೆಟ್ ತಂಡದಲ್ಲಿ ಆಟಗಾರರಷ್ಟೇ ಅಲ್ಲದೆ, ಪಿಚ್ ವಿಶ್ಲೇಷಕರು, ವಿವಿಧ ವಿಭಾಗಗಳ ತರಬೇತುದಾರರು, ಪಿಚ್ ಕ್ಯೂರೇಟರ್‌ಗಳು, ಸ್ಕೋರರ್‌ಗಳು, ಅಂಪೈರ್‌ಗಳು, ವಿಡಿಯೋ ವಿಶ್ಲೇಷಕರು ಹಾಗೂ ಫಿಸಿಯೋಥೆರಪಿಸ್ಟ್‌ಗಳು ಸೇರಿದಂತೆ ಹಲವು ತಾಂತ್ರಿಕ ಪರಿಣಿತರ ಪಾತ್ರವೂ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ ಕ್ರಿಕೆಟ್ ಕ್ಷೇತ್ರದಲ್ಲಿರುವ ವಿವಿಧ ವೃತ್ತಿಪರ ಅವಕಾಶಗಳನ್ನು ಕಲಬುರಗಿ ಜಿಲ್ಲೆಯ ಯುವಜನರಿಗೆ ಪರಿಚಯಿಸಿ, ಅಗತ್ಯ ಕೌಶಲ್ಯಗಳನ್ನು ಬೆಳೆಸಲು ತರಬೇತಿ ಕಾರ್ಯಕ್ರಮ ರೂಪಿಸುವ ಕುರಿತು ಸಚಿವರು ಚರ್ಚಿಸಿದರು.

ಕ್ರಿಕೆಟ್ ಕ್ಷೇತ್ರದಲ್ಲಿ ಆಟಗಾರರ ಹೊರತಾಗಿಯೂ ಹಲವು ವಿಭಾಗಗಳಲ್ಲಿ ಉದ್ಯೋಗಾವಕಾಶಗಳಿದ್ದು, ಈ ಅವಕಾಶಗಳ ಕುರಿತು ಯುವಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಅಗತ್ಯ ತರಬೇತಿ ನೀಡುವ ಮೂಲಕ ಅವರನ್ನು ವಿವಿಧ ವೃತ್ತಿಪರ ಅವಕಾಶಗಳಿಗೆ ಸಿದ್ಧಗೊಳಿಸುವ ನಿಟ್ಟಿನಲ್ಲಿ ಸಹಯೋಗದ ಕಾರ್ಯಕ್ರಮ ರೂಪಿಸುವ ಕುರಿತು ಸಭೆಯಲ್ಲಿ ಸಮಾಲೋಚನೆ ನಡೆಯಿತು

ಕಲಬುರಗಿಯಲ್ಲಿ ನಡೆಯುವ ಕ್ರಿಕೆಟ್ ಪಂದ್ಯಾವಳಿಗಳ ಸಂದರ್ಭದಲ್ಲಿ ಭದ್ರತೆ, ಪ್ರೇಕ್ಷಕರ ಸುರಕ್ಷತೆ ಹಾಗೂ ಸಾರ್ವಜನಿಕ ಸುರಕ್ಷತೆ ಖಚಿತಪಡಿಸಿ ಕೊಳ್ಳಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆಯೂ ಸಚಿವ ಪ್ರಿಯಾಂಕ್ ಖರ್ಗೆ ಅವರು ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ನ ಪದಾಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.



ಮೈಸೂರು ದಸರಾ 2026ರ ಚಟುವಟಿಕೆ: ಬುಧವಾರ ಮೈಸೂರಿನ ಜಂಬೂ ಸವಾರಿ ಮಾರ್ಗದಲ್ಲಿ ನಡೆದ ದಸರಾ ಆನೆಗಳ ದೈನಂದಿನ ತಾಲೀಮಿನಲ್ಲಿ 'ಸುಗ್ರೀವ' ಆನೆಯು ಮುಂಚೂಣಿಯಲ್ಲಿ ಸಾಗಿ ಸಾರ್ವಜನಿಕರ ಗಮನ ಸೆಳೆಯಿತು.

# ಕರ್ನಾಟಕ ಮತ್ತೊಂದು ಬಂಗಾಳವಾಗಲು ಬಿಡಲ್ಲ: ನಟ ಪ್ರಕಾಶ್‌ರಾಜ್



**ಬೆಂಗಳೂರು, ಸೆ.30:** ಕರ್ನಾಟಕ ಮತ್ತೊಂದು ಪಶ್ಚಿಮ ಬಂಗಾಳವಾಗಲು ಬಿಡುವುದಿಲ್ಲ. ಎಸ್.ಐ.ಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು. ಮತದಾರರ ಹಕ್ಕನ್ನು ಕಸಿಯುವ ಯಾವುದೇ ವ್ಯವಸ್ಥೆಯನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ನಟ ಹಾಗೂ ಸಾಮಾಜಿಕ ಹೋರಾಟಗಾರ ಪ್ರಕಾಶ್ ರಾಜ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎಸ್.ಐ.ಆರ್ ಪ್ರಕ್ರಿಯೆಯಿಂದ ಎದುರಾಗುತ್ತಿರುವ ಸಮಸ್ಯೆಗಳು, ದಾಖಲೆಗಳ ಗೊಂದಲ, ಮತದಾರರ ಹೆಸರುಗಳ ಹೊರಗುಳಿಯುವಿಕೆ ಹಾಗೂ ಚುನಾವಣಾ ವ್ಯವಸ್ಥೆಯ ಪಾರದರ್ಶಕತೆ ಕುರಿತು ಹಲವು ಪ್ರಶ್ನೆಗಳನ್ನು ಮುಂದಿಟ್ಟರು. ರಾಜ್ಯದ ವಿವಿಧ ಭಾಗಗಳಲ್ಲಿ ತಾವು ನಡೆಸಿದ ಪ್ರವಾಸದ ವೇಳೆ ಸಾರ್ವಜನಿಕರಿಂದ ಕೇಳಿಬಂದ ಅಹವಾಲುಗಳು ಆತಂಕಕಾರಿ ಸ್ವರೂಪದಲ್ಲಿವೆ ಎಂದು ಹೇಳಿದರು.

ರಾಜ್ಯ ಪ್ರವಾಸದ ವೇಳೆ ತೃತೀಯ ಲಿಂಗಿಯೊಬ್ಬರು ತಮ್ಮ ಮತದಾರರ ಪಟ್ಟಿಗೆ ಸಂಬಂಧಿಸಿದ ಸಮಸ್ಯೆಯನ್ನು ಹೇಳಿಕೊಂಡ ಘಟನೆ ತಮ್ಮನ್ನು ಆಳವಾಗಿ ಕಾಡಿತು ಎಂದು ಪ್ರಕಾಶ್ ರಾಜ್ ಹೇಳಿದರು. ಹುಟ್ಟಿದಾಗ ಒಂದು ಹೆಸರು, ಈಗ ಮತ್ತೊಂದು ಹೆಸರು. ಹುಟ್ಟಿದ ಮನೆಯ ಮಾಹಿತಿ ಒಂದು ರೀತಿಯಲ್ಲಿದ್ದರೆ, ಈಗಿನ ಬದುಕಿನ ಮಾಹಿತಿ ಮತ್ತೊಂದು ರೀತಿಯಲ್ಲಿದೆ. ಇವೆರಡೂ ಒಂದಕ್ಕೊಂದು ಹೊಂದಿಕೆಯಾಗದಿದ್ದರೆ ದಾಖಲೆಗಳ ಮೂಲಕ ವ್ಯಕ್ತಿಯ ಅಸ್ತಿತ್ವವನ್ನೇ ಪ್ರಶ್ನಿಸುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂಬ ಅರ್ಥದಲ್ಲಿ ಅವರು ಅನುಭವವನ್ನು ವಿವರಿಸಿದರು.

ಕೊಡಗಿನಲ್ಲಿ ಎಸ್.ಐ.ಆರ್ ಕುರಿತು ತಾವು ಕಂಡ ಪರಿಸ್ಥಿತಿಯನ್ನೂ ಪ್ರಕಾಶ್ ರಾಜ್ ವಿವರಿಸಿದರು. ಇಂದಿಗೂ ಹಲವು ಎಸ್ಟೇಟ್ ಪ್ರದೇಶಗಳಲ್ಲಿ ಲೈನ್ ಮನೆಗಳಲ್ಲಿ ವಾಸಿಸುವ ಕಾರ್ಮಿಕರು, ಭೂಹೀನರು ಹಾಗೂ ಆದಿವಾಸಿ ಸಮುದಾಯದ ಜನರು ಶಾಶ್ವತ ವಿಳಾಸ, ಆಸ್ತಿ ದಾಖಲೆಗಳು ಅಥವಾ ವಿವಿಧ ಸರ್ಕಾರಿ ದಾಖಲೆಗಳ ಕೊರತೆಯನ್ನು ಎದುರಿಸುತ್ತಿದ್ದಾರೆ.

ಎಸ್ಟೇಟ್ ಮಾಲೀಕರ ಅಧೀನದಲ್ಲಿರುವ ಬದುಕು, ಸ್ವಂತ ಜಮೀನು ಅಥವಾ ಮನೆ ಇಲ್ಲದಿರುವುದು, ದಾಖಲೆಗಳನ್ನು ಮಾಡಿಸಿಕೊಳ್ಳಲು ಎದುರಾಗುವ ಅಡೆತಡೆಗಳು ಸೇರಿದಂತೆ ಹಲವು ಸಾಮಾಜಿಕ–ಆರ್ಥಿಕ ಕಾರಣಗಳಿಂದ ಇಂತಹ ಸಮುದಾಯಗಳ ದಾಖಲೆಗಳಲ್ಲಿ ವ್ಯತ್ಯಾಸ ಕಂಡುಬರಬಹುದು. ಕೆಲವರು ದಾಖಲೆಗಳನ್ನು ಮಾಡಿಸಿಕೊಂಡರೂ ಅವುಗಳನ್ನು ಸುರಕ್ಷಿತವಾಗಿ ಉಳಿಸಿಕೊಳ್ಳುವ ಪರಿಸ್ಥಿತಿ ಇಲ್ಲದಿರಬಹುದು. ಸ್ವಂತ ಸೂರು ಇಲ್ಲ, ನನ್ನದು ಎಂದು ಹೇಳಿಕೊಳ್ಳಲು ಭೂಮಿ ಇಲ್ಲ. ಇಂತಹ ಪರಿಸ್ಥಿತಿಯಲ್ಲಿರುವ ವ್ಯಕ್ತಿಗೆ ಹಳೆಯ ದಾಖಲೆ, ಪೋಷಕರ ದಾಖಲೆ, ವಿಳಾಸದ ದಾಖಲೆ ಕೇಳಿದರೆ ಆತ ಏನು ಮಾಡಬೇಕು ಎಂಬ ಪ್ರಶ್ನೆಯನ್ನು ಮುಂದಿಟ್ಟರು.

ಎಸ್.ಐ.ಆರ್ ಸಂದರ್ಭದಲ್ಲಿ ಬಳಸಲಾಗುತ್ತಿರುವ ದಾಖಲೆಗಳು ಮತ್ತು ಮತದಾರರ ಹೆಸರುಗಳ ವಿರುದ್ಧ ಸಲ್ಲಿಸಲಾಗುವ ಆಕ್ಷೇಪಣೆಗಳ ಕುರಿತು ಮಾತನಾಡಿದ ಪ್ರಕಾಶ್ ರಾಜ್, ಫಾರಂ–7 ಕುರಿತೂ ಗಂಭೀರ ಆರೋಪ ಮಾಡಿದರು. ಕೆಲವೆಡೆ ಬಿಜೆಪಿ ಮುಖಂಡರು ಅಥವಾ ಯುವ ಮೋರ್ಚಾ ಕಾರ್ಯಕರ್ತರು ಫಾರಂ ಭರ್ತಿ ಮಾಡಿರುವ ಉದಾಹರಣೆಗಳು ತಮ್ಮ ಗಮನಕ್ಕೆ ಬಂದಿವೆ ಎಂದು ಪ್ರಕಾಶ್ ರಾಜ್ ಆರೋಪಿಸಿದರು.

ಆದಿವಾಸಿ, ಮುಸ್ಲಿಂ ಹಾಗೂ ಕ್ರೈಸ್ತ ಸಮುದಾಯಗಳ ಜನರನ್ನು ಗುರಿಯಾಗಿಸಿ ಮತಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕುವ ಪ್ರಯತ್ನ ನಡೆಯುತ್ತಿದೆ ಎಂಬ ಆರೋಪವನ್ನೂ ಅವರು ಮಾಡಿದರು. ಇಂತಹ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ, ಫಾರಂ ಸಲ್ಲಿಕೆ, ಆಕ್ಷೇಪಣೆ, ಪರಿಶೀಲನೆ ಮತ್ತು ಹೆಸರು ಕೈಬಿಡುವ ಪ್ರಕ್ರಿಯೆಗಳಲ್ಲಿ ಯಾರು ಭಾಗವಹಿಸಿದ್ದಾರೆ ಎಂಬುದನ್ನು ಪಾರದರ್ಶಕವಾಗಿ ದಾಖಲಿಸುವ ಅಗತ್ಯವಿದೆ ಎಂಬ ಪ್ರಶ್ನೆ ಉದ್ಭವಿಸಿದೆ ಎಂದರು.

# ಸಾರಿಗೆ ಸಂಸ್ಥೆಗಳನ್ನು ಸರ್ವನಾಶ ಮಾಡುವುದೇ ಮಾದರಿ ಆಡಳಿತವೇ?: ಮುಖ್ಯಮಂತ್ರಿ, ಸಾರಿಗೆ ಸಚಿವರಿಗೆ ಬಿಜೆಪಿ ಪ್ರಶ್ನೆ

**ಬೆಂಗಳೂರು, ಸೆ.30:** ಶಕ್ತಿ ಹೆಸರಲ್ಲಿ ಬೊಕ್ಕಸ ಲೂಟಿಮಾಡಿ, ನೌಕರರ ಹೊಟ್ಟೆಗೆ ಹೊಡೆಯುತ್ತಿರುವ ಮುಖ್ಯಮಂತ್ರಿಗಳೇ ಮತ್ತು ಸಾರಿಗೆ ಸಚಿವರೇ, ಸಾರಿಗೆ ಸಂಸ್ಥೆಗಳನ್ನು ಸರ್ವನಾಶ ಮಾಡುವುದೇ ನಿಮ್ಮ ಮಾದರಿ ಆಡಳಿತವೇ ಎಂದು ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರನ್ನು ಬಿಜೆಪಿ ಪ್ರಶ್ನೆ ಮಾಡಿದೆ.

ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಬಿಎಂಟಿಸಿ ಚಾಲಕರು ಹಾಗೂ ನಿರ್ವಾಹಕರಿಗೆ ಈ ತಿಂಗಳ ವೇತನ ಸಿಗುವುದು ಅನುಮಾನವಾಗಿದೆ ಎಂದು ಹೇಳಲಾಗುತ್ತಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪಕ್ಷ, ಶಕ್ತಿ ತುಂಬುತ್ತೇವೆ ಎಂದು ಬೊಗಳೆ ಬಿಟ್ಟು ಈಗ ಸಾರಿಗೆ ಸಂಸ್ಥೆಗಳನ್ನೇ ದಿವಾಳಿ ಮಾಡಿದೆ. ರಾತ್ರಿ–ಹಗಲು ಕಷ್ಟಪಟ್ಟು ದುಡಿಯುವ ಬಿಎಂಟಿಸಿ ಚಾಲಕರು ಮತ್ತು ನಿರ್ವಾಹಕರಿಗೆ ಈ ತಿಂಗಳು ವೇತನ ಸಿಗುವುದು ಅನುಮಾನವಾಗಿದೆ. ನೌಕರರ ಭವಿಷ್ಯದ ಭದ್ರತೆಗಾಗಿ ಮೀಸಲಿಟ್ಟಿದ್ದ ಭವಿಷ್ಯ ನಿಧಿ ಹಾಗೂ ಇನ್ಶೂರೆನ್ಸ್ ಹಣವನ್ನು ಬೇರೆ ಉದ್ದೇಶಗಳಿಗೆ ಅಕ್ರಮವಾಗಿ ಬಳಸಿಕೊಳ್ಳಲಾಗಿದೆ. ಬಸ್‌ಗಳಿಗೆ ಇಂಧನ ಪೂರೈಸುವ ತೈಲ ಕಂಪನಿಗಳಿಗೆ ರೂ.650 ಕೋಟಿ ಬಾಕಿ ಉಳಿಸಿಕೊಂಡಿದೆ. ಬಿಡಿಭಾಗಗಳ ಖರೀದಿಗೆ ಕನಿಷ್ಠ ರೂ.50 ಕೋಟಿ ಇಲ್ಲದೇ, ಕಳಪೆ ಸ್ಥಿತಿಯ ಬಸ್‌ಗಳನ್ನು ರಸ್ತೆಗೆ ಇಳಿಸಲಾಗುತ್ತಿದೆ. ಬಸ್‌ಗಳ ಸಮರ್ಪಕ ದುರಸ್ತಿ ನಡೆಯದ ಹಿನ್ನೆಲೆಯಲ್ಲಿ ಅಪಘಾತಗಳು ಹೆಚ್ಚಾಗುತ್ತಿದ್ದು, ಇದಕ್ಕೆ ಚಾಲಕರು ಮತ್ತು ನಿರ್ವಾಹಕರನ್ನೇ ಹೊಣೆ ಮಾಡಲಾಗುತ್ತಿದೆ ಎಂದು ಆರೋಪಿಸಿದೆ.

ಶಕ್ತಿ ಯೋಜನೆಯ ಹೆಸರಿನಲ್ಲಿ ರಾಜ್ಯದ ಬೊಕ್ಕಸಕ್ಕೆ ಹೊರೆ ಹಾಕಿ, ಸಾರಿಗೆ ನೌಕರರ ಹಿತಾಸಕ್ತಿಯನ್ನೂ ಕಡೆಗಣಿಸಲಾಗುತ್ತಿದೆ ಎಂದು ಟೀಕಿಸಿರುವ ಬಿಜೆಪಿ, ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರು ಕೂಡಲೇ ನೌಕರರ ವೇತನ, ಪಿಎಫ್ ಹಣ ಹಾಗೂ ಸಾರಿಗೆ ಸಂಸ್ಥೆಗಳ ಬಾಕಿ ಮೊತ್ತವನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದೆ.

ಇಲ್ಲದಿದ್ದರೆ ನೌಕರರ ಹಕ್ಕುಗಳಿಗಾಗಿ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿದೆ.

### ಡಾ. ಮನಮೋಹನ್ ಸಿಂಗ್ ವಿಶ್ವವಿದ್ಯಾನಿಲಯ

# ಅಂತಾರಾಷ್ಟ್ರೀಯ ಭಾಷಾಂತರ ದಿನಾಚರಣೆ, ಅನುವಾದ ಕಮ್ಮಟ



**ಬೆಂಗಳೂರು, ಸೆ.30:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರ ಮತ್ತು ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಭಾಷಾಂತರ ದಿನಾಚರಣೆಯ ಅಂಗವಾಗಿ ಸೆಂಟ್ರಲ್ ಕಾಲೇಜಿನ ನೂತನಶೈಕ್ಷಣಿಕ ವಿಭಾಗದಲ್ಲಿ "ಅನುವಾದ ಕಮ್ಮಟ" ಆಯೋಜಿಸಲಾಗಿತ್ತು.

ಕಮ್ಮಟವನ್ನು ಉದ್ಘಾಟಿಸಿ ಮಾತನಾಡಿದ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷ ಡಾ. ಚನ್ನಪ್ಪ ಕಟ್ಟಿಯವರು ಭಾಷಾ ವೈವಿಧ್ಯ ಮತ್ತು ಭಾಷಾ ಹಕ್ಕುಗಳು" ಈ ಬಾರಿಯ ಅಂತಾರಾಷ್ಟ್ರೀಯ ಭಾಷಾಂತರ ದಿನಾಚರಣೆಯ ಧ್ಯೇಯವಾಕ್ಯವಾಗಿದೆ ಎಂದು ವಿವರಿಸಿದರು.

2017 ರಿಂದ ವಿಶ್ವಸಂಸ್ಥೆ ಆರಂಭಿಸಿರುವ ಅಂತಾರಾಷ್ಟ್ರೀಯ ಭಾಷಾಂತರ ದಿನಾಚರಣೆಯ ದಶಮಾನೋತ್ಸವ ಹಂತ ತಲುಪಿದ್ದು ಅನುವಾದ ವಿಶ್ವ ಸಾಹಿತ್ಯದ ನೆಲೆಗಟ್ಟಾಗಿದೆ ಎಂದು ಅವರು ತಿಳಿಸಿದರು.

ನಾಲ್ಕನೇ ಶತಮಾನದ ಅಂತ್ಯದಲ್ಲಿ ಬೈಬಲ್ ಗ್ರಂಥವನ್ನು ಗ್ರೀಕ್ ಭಾಷೆಯಿಂದ ಲ್ಯಾಟಿನ್ ಭಾಷೆಗೆ ಅನುವಾದಿಸಿದ ಇಟಲಿಯ ಸೇಂಟ್ ಜೆರೋಮ್ ಸ್ಮರಣೆಯ ಪ್ರಯುಕ್ತ ಅಂತಾ ರಾಷ್ಟ್ರೀಯ ಭಾಷಾಂ ತರ ದಿನಾಚರಣೆ ಪ್ರಾರಂಭಿಸಲಾಯಿತೆಂದು ಅವರು ಉಲ್ಲೇಖಿಸಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ. ಬಂಜಗೆರೆ ಜಯಪ್ರಕಾಶ್ "ಇಂಗ್ಲೀಷ್– ಕನ್ನಡ ಅನುವಾದ ಪ್ರಯೋಗದ ನೆಲೆಗಳು" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು. ಭಾಷಾಂತರದ ವಿವಿಧ ಸ್ವರೂಪಗಳನ್ನು ಅವರು ವಿಧ್ಯಾರ್ಥಿಗಳಿಗೆ ವಿವರಿಸಿದರು.

ಬೆಂಗಳೂರು ವಿಶ್ವವಿದ್ಯಾಲಯದ ವಿದ್ಯುನ್ಮಾನ ವಿಭಾಗದ ಮುಖ್ಯಸ್ಥ ಪ್ರೊ. ವಾಹಿನಿ ಅರವಿಂದ್ "ಸಂವಹನ ಮತ್ತು ಪತ್ರಿಕೋದ್ಯಮದಲ್ಲಿ ಭಾಷಾಂತರದ ಸವಾಲುಗಳು" ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು.

ಕಮ್ಮಟದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ರಮೇಶ್ .ಬಿ. ಡಿಜಿಟಲ್ ಸಾಧನಗಳ ಅವಕಾಶ ಈಗ ಲಭ್ಯವಿದ್ದರೂ ಕೃತಕ ಬುದ್ಧಿಮತ್ತೆ ಮಾನವ ಸೃಜನಶೀಲತೆ ಸರಿಸಾಟಿಯಾಗದು ಎಂದು ಅಭಿಪ್ರಾಯಪಟ್ಟರು. ಸಕಲ ಭಾಷೆಗಳಿಗೂ ಸಮಾನ ಗೌರವ ಲಭಿಸಬೇಕೆಂದು ಪ್ರತಿಪಾದಿಸಿದ ಅವರು ಯಾವುದೇ ಭಾಷೆಯ ಯಜಮಾನಿಕೆ ಬಹುತ್ವ ಸಂಸ್ಕೃತಿಗೆ ಪ್ರತಿಕೂಲವೆಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಸಂಚಾಲಕ ಪ್ರೊ.ಡಿ.ಕೆ. ಚಿತ್ತಯ್ಯ ಪೂಜಾರ್ ಪ್ರಾಸ್ತಾವಿಕವಾಗಿ ಮಾತನಾಡಿ ಏಕಮುಖಿ ಸಂಸ್ಕೃತಿಯಿಂದ ಬಹುಮುಖಿ ಸಂಸ್ಕೃತಿಯತ್ತ ಸಾಗ ಬೇಕಾದ ಅಗತ್ಯವನ್ನು ಒತ್ತಿ ಹೇಳಿದರು.

ಜಾಗತಿಕ ಭಾಷೆಗಳ ಕೇಂದ್ರದ ನಿರ್ದೇಶಕಿ ಪ್ರೊ. ಜ್ಯೋತಿ ವೆಂಕಟೇಶ್ ಸಮಾರೋಪ ಭಾಷಣ ಮಾಡಿದರು. ಕನ್ನಡ ಉಪನ್ಯಾಸಕ ಡಾ.ಎಸ್. ಅಖ್ತರ್ ಕಾರ್ಯಕ್ರಮ ನಿರೂಪಿಸಿದರು. ಡಾ. ಗೋಪಿ ಎಸ್.ಎಂ. ಮತ್ತು ಡಾ. ಪ್ರವೀಣ್ ಡಿ.ಎಸ್. ಅತಿಥಿಗಳನ್ನು ಪರಿಚಯಿಸಿದರು.

ಇಂಗ್ಲೀಷ್ ವಿಭಾಗದ ಉಪನ್ಯಾಸಕರಾದ ಯದುಶ್ರೀ ಸ್ವಾಗತಿಸಿ ಪದ್ಮಜಾ ಡಿ.ಎಸ್. ವಂದಿಸಿದರು.

# ಗಡಿ ದಾಟಿದರೂ ಕಲೆ ದಾಟಿಲ್ಲ, ಹೊಸೂರಿನಲ್ಲಿ ಕನ್ನಡದ ಮಕ್ಕಳಿಂದ ಭುವನೇಶ್ವರಿಗೆ ನೃತ್ಯಾರ್ಚನೆ



**ಹೊಸೂರು/ಬೆಂಗಳೂರು, ಸೆ.30:** ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ತಮಿಳುನಾಡು ಗಡಿಗೆ ಹೊಂದಿಕೊಂಡಿರುವ ಹೊಸೂರು ತಾಲ್ಲೂಕಿನಲ್ಲಿ ಬುಧವಾರ "ಗಡಿನಾಡು ಕನ್ನಡ ಕಾರ್ಯಕ್ರಮ.. ಗಡಿಯಲ್ಲಿ ಕನ್ನಡ ಕಹಳೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಆನೇಕಲ್ ಶಾಸಕ ಬಿ. ಶಿವಣ್ಣ, ಹೊಸೂರು ಶಾಸಕ ಬಾಲಕೃಷ್ಣ ರೆಡ್ಡಿ, ಮಾಜಿ ಶಾಸಕ ಡಾ. ಕೆ.ಎ. ಮನೋಹರನ್, ಇಂಟಕ್ ಹಾಗೂ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಹಾಗೂ ಕಾರ್ಯದರ್ಶಿಗಳಾದ ಪ್ರಕಾಶ್ ಮತ್ತಿಹಳ್ಳಿ ಹಾಗೂ ಗಡಿ ಪ್ರಾಧಿಕಾರದ ಸದಸ್ಯರು ಭಾಗ ವಹಿಸಿದ್ದರು.

ಬೆಂಗಳೂರಿನ ವಿವಿಧ ಕಲಾವಿದರಿಂದ ಹಾಗೂ ಗಡಿ ಭಾಗದ ಜಾನಪದ ತಂಡಗಳಿಂದ ಡೊಳ್ಳು ಕುಣಿತ, ಭರತನಾಟ್ಯ, ಎಸ್ ಜಾನಕಿಯವರಿಗೆ ಗೀತ ನಮನ, ಗೊರವರ ಕುಣಿತ, ಗುಂಪು ನೃತ್ಯ, ಪಟ ನೃತ್ಯ, ಕನ್ನಡ ವಿಚಾರ ಸಂಕಿರಣ ಮುಂತಾದ ಕಲಾ ಪ್ರಕಾರಗಳ ಪ್ರದರ್ಶನ ನಡೆಯಿತು.

ಕನ್ನಡದಲ್ಲಿಯೇ ಮಾತನಾಡಿದ ಹೊಸೂರು ಶಾಸಕರಾದ ಬಾಲಕೃಷ್ಣರೆಡ್ಡಿ, ಬೆಂಗಳೂರಿನ ಮೆಟ್ರೊವನ್ನು ಹೊಸೂರಿನವರೆಗೆ ವಿಸ್ತರಿಸಲು ಕರ್ನಾಟಕ ಸರ್ಕಾರಕ್ಕೆ ಮನವಿ ಮಾಡಿದರು. ಮಾಜಿ ಶಾಸಕರಾದ ಮನೋಹರನ್ ಮಾತನಾಡಿ, ಸರ್ ಪುಟ್ಟಣ್ಣ ಚೆಟ್ಟಿ ಪುರಭವನದ ನಿರ್ಮಾತೃ ಅವರನ್ನು ನೆನೆಸಿದರು. ಕನ್ನಡ, ತಮಿಳು ಮತ್ತು ತೆಲುಗು ಸಂಗಮ ಕ್ಷೇತ್ರದಲ್ಲಿ ಇಂತಹ ಇನ್ನೂ ಹಲವಾರು ಕಾರ್ಯಕ್ರಮಗಳು ಪ್ರತಿ ತಿಂಗಳೂ ನಡೆಸಲು ಗಡಿ ಪ್ರಾಧಿಕಾರಕ್ಕೆ ಮನವಿ ಮಾಡಿದರು.

### ಸರ್ಕಾರಕ್ಕೆ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಗಡುವು

# ಡಿಸೆಂಬರ್ ಅಂತ್ಯದೊಳಗೆ ಬಾಕಿ ಪಾವತಿಸದಿದ್ದರೆ ರಾಜ್ಯಾದ್ಯಂತ ಹೋರಾಟ

**ಬೆಂಗಳೂರು, ಸೆ.30:** ರಾಜ್ಯದ ವಿವಿಧ ಇಲಾಖೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ ವರ್ಷಗಳೇ ಕಳೆದರೂ ಬಿಲ್ ಪಾವತಿಯಾಗಿಲ್ಲ ಎಂದು ಆರೋಪಿಸಿರುವ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ, ಸುಮಾರು 38 ಸಾವಿರ ಕೋಟಿ ರೂ. ಬಾಕಿ ಮೊತ್ತವನ್ನು ಡಿಸೆಂಬರ್ ಅಂತ್ಯದೊಳಗೆ ಬಿಡುಗಡೆ ಮಾಡಬೇಕು ಎಂದು ಸರ್ಕಾರಕ್ಕೆ ಗಡುವು ನೀಡಿದೆ. ಬೇಡಿಕೆ ಈಡೇರದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ಸಂಘ ಎಚ್ಚರಿಸಿದೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ 10 ದಿನಗಳ ಹಿಂದೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಸುಮಾರು 1.5 ಲಕ್ಷ ಗುತ್ತಿಗೆದಾರರು ಹಲವು ವರ್ಷಗಳಿಂದ ಬಾಕಿ ಹಣಕ್ಕಾಗಿ ಕಾಯುತ್ತಿದ್ದಾರೆ ಎಂದು ತಿಳಿಸಿದರು.

ಸಂಘದ ಅಂಕಿ–ಅಂಶಗಳ ಪ್ರಕಾರ, ಲೋಕೋಪಯೋಗಿ ಇಲಾಖೆಯಲ್ಲಿ 8,370 ಕೋಟಿ, ಜಲಸಂಪನ್ಮೂಲ ಇಲಾಖೆಯಲ್ಲಿ 14,000 ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 3,000 ಕೋಟಿ, ಸಣ್ಣ ನೀರಾವರಿಯಲ್ಲಿ 3,600 ಕೋಟಿ, ನಗರಾಭಿವೃದ್ಧಿಯಲ್ಲಿ 1,800 ಕೋಟಿ, ವಸತಿ ಮತ್ತು ವಕ್?ಫ ಇಲಾಖೆಯಲ್ಲಿ 2,600 ಕೋಟಿ, ಕಾರ್ಮಿಕ ಇಲಾಖೆಯಲ್ಲಿ 2,000 ಕೋಟಿ ಹಾಗೂ ಬಿಬಿಎಂಪಿಯಲ್ಲಿ 2,600 ಕೋಟಿ ಬಾಕಿ ಇದೆ. ಒಟ್ಟು ಬಾಕಿ ಮೊತ್ತ ಸುಮಾರು 37,980 ಕೋಟಿ ಎಂದು ಸಂಘ ತಿಳಿಸಿದೆ.

ಸರ್ಕಾರ ಕ್ರಮ ಕೈಗೊಳ್ಳದಿದ್ದರೆ 31 ಜಿಲ್ಲೆಗಳ ಜಿಲ್ಲಾಧಿಕಾರಿ ಕಚೇರಿಗಳವರೆಗೆ ಪಾದಯಾತ್ರೆ ನಡೆಸುವುದಾಗಿ ಸಂಘ ತಿಳಿಸಿದೆ. ಡಿಸೆಂಬರ್ ಅಂತ್ಯದೊಳಗೆ ಬಾಕಿ ಹಣ ಬಿಡುಗಡೆ ಮಾಡಬೇಕು.ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಮಂಜುನಾಥ್ ಹೇಳಿದರು. ಈ ಆರೋಪಗಳಿಗೆ ಸರ್ಕಾರದ ಅಧಿಕೃತ ಪ್ರತಿಕ್ರಿಯೆ ಇನ್ನಷ್ಟೇ ಹೊರಬರಬೇಕಿದೆ.

# ಇನ್ನೂ ಒಂದು ವಾರ ರಾಜ್ಯದ ವಿವಿಧೆಡೆ ಮಳೆ ಮುಂದುವರಿಕೆ: ಹವಾಮಾನ ಇಲಾಖೆ ಮಾಹಿತಿ

**ಬೆಂಗಳೂರು, ಸೆ.30:** ಅಕ್ಟೋಬರ್ ಮೊದಲ ವಾರದಲ್ಲೂ ವಿವಿಧ ಜಿಲ್ಲೆಗಳಲ್ಲಿ ಮಳೆ ಮುಂದುವರಿಯಲಿದೆ. ನಾಲ್ಕೈದು ದಿನಗಳಿಂದ ಹೆಚ್ಚಿನ ಜಿಲ್ಲೆಗಳಲ್ಲಿ ಮಳೆಯಾಗುತ್ತಿದ್ದು, ಮುಂದಿನ ಎರಡು ದಿನ ಗುಡುಗು ಸಹಿತ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ.

ಬುಧವಾರ ಹಾಗೂ ಅ.1ರ ಗುರುವಾರದಂದು ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ 12 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಅನ್ನು ಘೋಷಿಸಲಾಗಿದೆ. ಕರಾವಳಿ ಕರ್ನಾಟಕ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು–ಸಿಡಿಲು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಕೆಲವೆಡೆ ಗುಡುಗು–ಸಿಡಿಲು ಸಹಿತ ಸಾಧಾರಣ ಮಳೆ ಮುಂದಿನ ಎರಡು ದಿನ ಆಗಲಿದೆ ಎಂದು ತಿಳಿಸಲಾಗಿದೆ.

ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 48 ಗಂಟೆವರೆಗೆ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರುತ್ತದೆ. ಕೆಲವು ಕಡೆ ಜೋರು ಮಳೆಯಾದರೆ, ಇನ್ನಷ್ಟು ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಬಹುದು. ಗಂಟೆಗೆ 30–40 ಕಿ.ಮೀ. ವೇಗದ ಬಿರುಗಾಳಿಯೊಂದಿಗೆ ಗುಡುಗು ಆಗಾಗ್ಗೆ ಭಾರಿ ಮಳೆಯಾಗುವ ಸಾಧ್ಯತೆಯೂ ಇದೆ. ಮೂರು ದಿನದಿಂದಲೂ ಬೆಂಗಳೂರು ಹಲವು ಬಡಾವಣೆಗಳಲ್ಲಿ ಉತ್ತಮ ಮಳೆಯಾಗಿದೆ.



ವಿಶಾಲವಾದ ಪರ್ವತ ಶಿಖರಗಳು ಮತ್ತು ಸಮೃದ್ಧ ಕಾಫಿ ತೋಟಗಳಿಗೆ ಹೆಸರುವಾಸಿಯಾದ ಚಿಕ್ಕಮಗಳೂರಿನ ಸಮೀಪವಿರುವ ಸರೋವರವೊಂದರಲ್ಲಿ ಪೇಂಟೆಡ್ ಸ್ಟಾರ್ಕ್ (Painted Stork) ಪಕ್ಷಿಗಳು ಕಂಡುಬಂದಿವೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ನೋಡಲ್ ಅಧಿಕಾರಿ ನೇಮಕ

**ಬೀದರ್, ಸೆ. 30:** ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಯಲ್ಲಿ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿಯಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿ ಹಾಗೂ ಸಿಬ್ಬಂದಿಯನ್ನು ನೇಮಕ ಮಾಡಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ ಹೊರಡಿಸಿದ್ದಾರೆ.

ನೇಮಕಗೊಂಡ ನೋಡಲ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ವಿವರ ಹೀಗಿದೆ: ಬೀದರ್ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿಯ ನೋಡಲ್ ಅಧಿಕಾರಿಯಾಗಿ ಮಂಜುನಾಥ ಸುಳ್ಳೊಳ್ಳಿ (ಮೊ.ನಂ. 9632511437), ಜಿಲ್ಲಾ ಪಂಚಾಯಿತಿ ಪ್ರಥಮ ದರ್ಜೆ ಸಹಾಯಕ ವಿಜಯಕುಮಾರ (ಮೊ.ನಂ. 9916268750), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುರೇಶ ಅಂಬಿಗರ (ಮೊ.ನಂ. 8660068406), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಬೆರಳಚ್ಚುಗಾರ ಭೀಮಣ್ಣ ನಾಯಕ (ಮೊ.ನಂ. 9980135288), ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಿಬ್ಬಂದಿ ಆಶೀಶ ಹಜಾರೆ (ಮೊ.ನಂ. 8861111083).

ನೇಮಕಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿ, ಚುನಾವಣೆ ಕರ್ತವ್ಯವನ್ನು ಶಿಸ್ತುಬದ್ಧ ವಾಗಿ ನಿಯಮಾನುಸಾರ ನಿರ್ವಹಿಸ ಬೇಕು. ಮೇಲಧಿಕಾರಿಗಳ ಅನುಮತಿ ಇಲ್ಲದೆ ಯಾವುದೇ ಸಿಬ್ಬಂದಿ ಅಥವಾ ಅಧಿಕಾರಿಗಳು ರಜೆಯ ಮೇಲೆ ಹೋಗುವಂತಿಲ್ಲ.



ತಮಗೆ ವಹಿಸಿದ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸಿದಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ 1951ರ ಅನ್ವಯ ಶಿಸ್ತುಕ್ರಮ ಕೈಗೊಳ್ಳಲಾಗುವುದು. ಈ ನೇಮಕಗೊಂಡ ಅಧಿಕಾರಿಗಳ ವರ್ಗಾವಣೆ ಅಥವಾ ಇನ್ನಿತರ ಕಾರಣದಿಂದಾಗಿ ಅನುಪಸ್ಥಿತಿಯಾಗಿದ್ದಲ್ಲಿ ಆ ಹುದ್ದೆಗೆ ಬರುವ ಹೊಸ ಅಧಿಕಾರಿ ಗಳು ಈ ಮೇಲಿನಂತೆ ಕರ್ತವ್ಯ ನಿರ್ವಹಿಸ ಬೇಕು ಎಂದು ಸೂಚಿಸಿದ್ದಾರೆ.

ಚುನಾವಣೆ ವೇಳಾಪಟ್ಟಿ ಪ್ರಕಟ: ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ವೇಳಾಪಟ್ಟಿ ಪ್ರಕಟಿಸಲಾಗಿದೆ ಎಂದು ತಿಳಿಸಿದ್ದಾರೆ. ಅ. 6ರಂದು ನಾಮಪತ್ರ ಸಲ್ಲಿಕೆಗೆ ಕೊನೆ ದಿನ, ಅ. 7ರಂದು ನಾಮಪತ್ರಗಳ ಪರಿಶೀಲನೆ, ಅ. 9ರಂದು ನಾಮಪತ್ರ ಹಿಂಪಡೆಯಲು ಕೊನೆ ದಿನ, ಅ. 23 ಮತದಾನ ಜರುಗುವ ದಿನ, ಬೆಳಿಗ್ಗೆ 8ರಿಂದ ಸಂಜೆ 4ರ ವರೆಗೆ, ಅ. 27ರಂದು ಬೆಳಿಗ್ಗೆ 8ರಿಂದ ಮತ ಎಣಿಕೆ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಚುನಾವಣೆಯ ಮಾದರಿ ನೀತಿ ಸಂಹಿತೆ ತಕ್ಷಣವೇ ಕ್ಷೇತ್ರದಾದ್ಯಂತ ಜಾರಿಗೆ ಬಂದಿದೆ. ಕಲಬುರಗಿ ವಿಭಾಗದ ಬೀದರ್ ಜಿಲ್ಲೆಯು ಕರ್ನಾಟಕ ಈಶಾನ್ಯ ಶಿಕ್ಷಕರ ಮತಕ್ಷೇತ್ರದ ವ್ಯಾಪ್ತಿಗೆ ಒಳಪಟ್ಟಿರುವುದರಿಂದ, ಈ ಚುನಾವಣೆಗೆ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಚುನಾವಣಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ಗಳಾಗಿರುತ್ತಾರೆ. ಬೀದರ್ ಜಿಲ್ಲಾಧಿಕಾರಿಗಳು ಸಹಾಯಕ ಚುನಾವಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಾರೆ. ನಾಮಪತ್ರಗಳ ನಮೂನೆಯನ್ನು ಪ್ರಾದೇಶಿಕ ಆಯುಕ್ತರ ಕಚೇರಿ ಚುನಾವಣೆ ಶಾಖೆಯಿಂದ ಯಿಂದ ಪಡೆಯಬಹುದು ಎಂದರು.

ಭರ್ತಿ ಮಾಡಿದ ನಾಮಪತ್ರಗಳನ್ನು ಕಲಬುರಗಿಯ ಜಿಲ್ಲಾಡಳಿತ ಭವನದಲ್ಲಿರುವ ಪ್ರಾದೇಶಿಕ ಆಯುಕ್ತರ ಕಚೇರಿಯ ಕಾನ್ಫರೆನ್ಸ್ ಹಾಲ್‌ನಲ್ಲಿ ಸೆ. 29ರಿಂದ ಅ. 6ರ ಸರ್ಕಾರಿ ರಜಾದಿನಗಳನ್ನು ಹೊರತುಪಡಿಸಿ ಬೆಳಿಗ್ಗೆ 11ರಿಂದ ಮಧ್ಯಾಹ್ನ 3ರ ವರೆಗೆ ಸಲ್ಲಿಸಬಹುದು. ಸ್ವೀಕೃತವಾದ ಎಲ್ಲಾ ನಾಮಪತ್ರಗಳನ್ನು ಅ.7ರಂದು ಬೆಳಿಗ್ಗೆ 11 ಗಂಟೆಗೆ ಪ್ರಾದೇಶಿಕ ಆಯುಕ್ತರ ಕಚೇರಿಯ ಕಾನ್ಫರೆನ್ಸ್ ಹಾಲ್‌ನಲ್ಲಿ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

# ಚಾಮುಂಡಿಬೆಟ್ಟಕ್ಕೆ ಸೂಪರ್‌ಸ್ಟಾರ್ ರಜನಿಕಾಂತ್ ಭೇಟಿ: ನಾಡದೇವತೆಗೆ ವಿಶೇಷ ಪೂಜೆ ಸಲ್ಲಿಕೆ



ಮೈಸೂರು, ಸೆ.30: ಭಾರತೀಯ ಚಿತ್ರರಂಗದ ಖ್ಯಾತ ನಟ, ಸೂಪರ್‌ಸ್ಟಾರ್ ರಜನಿಕಾಂತ್ ಅವರು ಸಾಂಸ್ಕೃತಿಕ ನಗರಿ ಮೈಸೂರಿನ ಇಷ್ಟದೈವ ಶ್ರೀ ಚಾಮುಂಡೇಶ್ವರಿ ದೇಗುಲಕ್ಕೆ ಭೇಟಿ ನೀಡಿ ತಾಯಿಯ ದರ್ಶನ ಪಡೆದಿದ್ದಾರೆ. ಸಿನಿಮಾ ಶೂಟಿಂಗ್ ನಿಮಿತ್ತ ಮೈಸೂರಿಗೆ ಆಗಮಿಸಿರುವ ಅವರು, ಬಿಡುವು ಮಾಡಿಕೊಂಡು ಬೆಟ್ಟಕ್ಕೆ ತೆರಳಿ ನಾಡದೇವತೆಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ದೇವಸ್ಥಾನಕ್ಕೆ ಭೇಟಿ ನೀಡಿದ ರಜನಿಕಾಂತ್ ಅವರಿಗೆ ದೇಗುಲದ ಆಡಳಿತ ಮಂಡಳಿಯು ಶಾಲು ಹೊದಿಸಿ, ಗೌರವಪೂರ್ವಕವಾಗಿ ಸನ್ಮಾನಿಸಿತು. ತಮ್ಮ ನೆಚ್ಚಿನ ನಟ ಬೆಟ್ಟಕ್ಕೆ ಆಗಮಿಸಿರುವ ಸುದ್ದಿ ತಿಳಿಯುತ್ತಿದ್ದಂತೆ, ಅವರನ್ನು ಕಣ್ತುಂಬಿಕೊಳ್ಳಲು ಅಪಾರ ಸಂಖ್ಯೆಯ ಅಭಿಮಾನಿಗಳು ಹಾಗೂ ಸಾರ್ವಜನಿಕರು ದೇವಾಲಯದ ಆವರಣದಲ್ಲಿ ಮಾಯಿಸಿದ್ದರು. ರಜನಿಕಾಂತ್ ಅವರ ಈ ಮೈಸೂರು ಭೇಟಿಯು ಹೊಸ ಸಿನಿಮಾದ ಚಿತ್ರೀಕರಣದ ಹಿನ್ನೆಲೆಯಲ್ಲಿ ನಡೆದಿದ್ದು, ಸದ್ಯ ಸಾಂಸ್ಕೃತಿಕ ನಗರಿಯ ವಿವಿಧ ತಾಣಗಳಲ್ಲಿ ನಡೆಯುತ್ತಿರುವ ಶೂಟಿಂಗ್ ಕುರಿತ ಸಂಪೂರ್ಣ ವಿವರಗಳು ಇನ್ನಷ್ಟೇ ತಿಳಿದು ಬರಬೇಕಿದೆ.

## ಸೌಜನ್ಯ ಪ್ರಕರಣ: ತನಿಖಾ ತಂಡದಿಂದ ಕೈಬಿಡುವಂತೆ ಸರ್ಕಾರಕ್ಕೆ ಎಎಸ್‌ಪಿ ಡಾ.ವೆಂಕಟೇಶ್ ಪ್ರಸನ್ನ ಪತ್ರ



**ಮಂಗಳೂರು, ಸೆ.30:** ಸೌಜನ್ಯ ಅತ್ಯಾಚಾರ, ಕೊಲೆ ಪ್ರಕರಣ ಮರುತನಿಖೆ ಆರಂಭವಾಗುವ ಮೊದಲೇ ದೊಡ್ಡ ಹಿನ್ನಡೆಯಾಗಿದೆ.

ಸೌಜನ್ಯ ಪ್ರಕರಣದ ಮರು ತನಿಖೆಗಾಗಿ ರಚಿಸಿರೋ ಎಸ್‌ಐಟಿ ತಂಡದಿಂದ ತಮ್ಮನ್ನು ಕೈಬಿಡುವಂತೆ ಎಎಸ್‌ಪಿ ಡಾ.ವೆಂಕಟೇಶ್ ಪ್ರಸನ್ನ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ.

ಸುಪ್ರೀಂಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರಚಿಸಿದ್ದ ಎಸ್‌ಐಟಿ ತಂಡದಲ್ಲಿ ಎಎಸ್‌ಪಿ ವೆಂಕಟೇಶ್ ಪ್ರಸನ್ನ ಅವರು ಇದ್ದರು. ಆದರೆ ಇದಕ್ಕೆ ಸೌಜನ್ಯ ತಾಯಿ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಎಸ್‌ಐಟಿ ತಂಡದಿಂದ ಹೊರಬರಲು ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಡಾ. ವೆಂಕಟೇಶ್ ಪ್ರಸನ್ನ ನಿರ್ಧರಿಸಿದ್ದಾರೆ ಎಂದು ತಿಳಿದುಬಂದಿದೆ.

ಐಜಿಪಿ ಶಶಿಕುಮಾರ್ ನೇತೃತ್ವದಲ್ಲಿ ಎಸ್‌ಐಟಿ ತಂಡ ರಚಿಸಲಾಗಿದ್ದು ತಂಡದಲ್ಲಿ ಮಂಗಳೂರು ಪೊಲೀಸ್ ಆಯುಕ್ತ ಮತ್ತು ಡಿಐಜಿ ಸಿ. ಎಚ್. ಸುಧೀರ್ ಕುಮಾರ್ ರೆಡ್ಡಿ, ಗುಪ್ತದಳದ ಎಸ್ಪಿ ನಿಶಾ ಜೇಮ್ಸ್, ಸಿಐಡಿ ಎಸ್ಪಿ ಲೋಕೇಶ್ ಜಗಲಸಾರ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ಎಎಸ್ಪಿ ವೆಂಕಟೇಶ್ ಪ್ರಸನ್ನ ಸೇರಿ ನಾಲ್ವರು ಅಧಿಕಾರಿಗಳು ಸದಸ್ಯ ರಾಗಿದ್ದರು.

### ಎಂಆರ್‌ಪಿಎಲ್‌ನ ಸಿಎಚ್‌ಟಿ ಘಟಕದಲ್ಲಿ ಅಗ್ನಿ ಅವಘಡ

# ಕೋಲ್ಡ್ ಸೆಪರೇಟರ್ ಒಡೆದ ಪರಿಣಾಮ ಕಾಣಿಸಿಕೊಂಡ ಬೆಂಕಿ, 7 ಮಂದಿಗೆ ಗಾಯ

**ಮಂಗಳೂರು, ಸೆ.30:** ಮಂಗಳೂರಿನ ಜೋಕಟ್ಟೆ ಸಮೀಪದ ಮಂಗಳೂರು ರಿಫೈನರಿ ಆಂಡ್ ಪೆಟ್ರೋಕೆಮಿಕಲ್ಸ್ ಲಿಮಿಟೆಡ್ (ಎಂಆರ್‌ಪಿಎಲ್)ನ ಕೋಕರ್ ಹೈಡ್ರೋ ಟ್ರೀಟರ್ (ಸಿಎಚ್‌ಟಿ) ಘಟಕದಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ಘಟನೆಯಲ್ಲಿ 7 ಮಂದಿ ಗಾಯಗೊಂಡಿರುವ ಘಟನೆ ಬುಧವಾರ ನಡೆದಿದೆ.



ಘಟನೆ ಕುರಿತು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಮಾಹಿತಿ ನೀಡಿದ್ದು, ಸಿಎಚ್‌ಟಿ (ಹೈಡ್ರೋ ಸಲ್ಫರ್ ಟ್ರೀಟ್‌ಮೆಂಟ್) ಘಟಕದಲ್ಲಿ ಸ್ಫೋಟ ಸಂಭವಿಸಿದೆ. ಬಳಿಕ ಭಾರೀ ಪ್ರಮಾಣದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ನಂತರ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ ಎಂದು ಹೇಳಿದ್ದಾರೆ.

ಘಟನೆಯಲ್ಲಿ 7 ಮಂದಿ ಗಾಯಗೊಂಡಿದ್ದು, ರಾಜೇಶ್ ಬ್ಯಾಪ್ಟಿಸ್ಟ್ ಎಂಬ ಸಿಬ್ಬಂದಿಗೆ ಶೇ.35ರಷ್ಟು ಸುಟ್ಟ ಗಾಯಗಳಾಗಿದೆ. ಅವರಿಗೆ ಶ್ರೀನಿವಾಸ ಆಸ್ಪತ್ರೆಯ ತೀವ್ರ ನಿಗಾ ಘಟಕ (ಐಸಿಯು)ದಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆಂದು ತಿಳಿಸಿದ್ದಾರೆ.ಘಟನೆಯಲ್ಲಿ ಘಟಕದ ಪಕ್ಕದ ಕಚೇರಿಯಲ್ಲಿದ್ದ ಇತರ ಆರು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಹೊರರೋಗಿಗಳಾಗಿ ಚಿಕಿತ್ಸೆ ನೀಡ ಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಎಂಆರ್‌ಪಿಎಲ್ ಅಧಿಕಾರಿಗಳ ಪ್ರಕಾರ, ಕೋಕರ್ ಹೈಡ್ರೋಟ್ರೀಟರ್ ಘಟಕದಲ್ಲಿ ಸುಮಾರು 70 ಬಾರ್ ಒತ್ತಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೋಲ್ಡ್ ಸೆಪರೇಟರ್ ಒಡೆದ ಪರಿಣಾಮ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣವೇ ಘಟಕದ ಬ್ಯಾಟರಿ ಮಿತಿಯನ್ನು ಪ್ರತ್ಯೇಕಿಸಿ, ಬೆಂಕಿ ನಂದಿಸುವ ಕಾರ್ಯಾಚರಣೆ ಆರಂಭಿಸಲಾಯಿತು. ಪರಿಣಾಮಿತ ಘಟಕವನ್ನು ಖಾಲಿ ಮಾಡಿಸಲಾಗಿದ್ದು, ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ. ಆದರೆ ಸಂಪೂರ್ಣ ತಂಪುಗೊಳಿ ಸುವ ಕಾರ್ಯಾಚರಣೆ ಇನ್ನೂ ಕೆಲಕಾಲ ಮುಂದು ವರಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ನಡುವೆ ಸ್ಫೋಟದ ಸದ್ದು ಸುತ್ತಮುತ್ತಲಿನ ಹಲವು ಪ್ರದೇಶಗಳಲ್ಲಿ ಆತಂಕ ಮೂಡಿಸಿದ್ದು, ಕಾಟಿಪಳ್ಳ, ಕಾನಾ, ಬಜ್ಪೆ, ಅಂಗರಗುಂಡಿ, ಕುಳಾಯಿ, ಜೋಕಟ್ಟೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳು ಬೆಚ್ಚಿ ಬೀಳವಂತೆ ಸ್ಫೋಟದ ಸದ್ದು ಕೇಳಿಸಿದೆ ಎಂದು ತಿಳಿಸಿದ್ದಾರೆ. ಬಳಿಕ ಜೋಕಟ್ಟೆಯಲ್ಲಿರುವ ಎಂಆರ್‌ಪಿಎಲ್ ಘಟಕದ ದಿಕ್ಕಿನಿಂದ ದಟ್ಟ ಕಪ್ಪು ಹೊಗೆ ಮೇಲಕ್ಕೆ ಬರುತ್ತಿರುವುದು ಕಂಡುಬಂದಿದೆ. ಕೆಲವು ಪ್ರದೇಶಗಳಲ್ಲಿ ಕಿಟಕಿ ಗಾಜುಗಳು ಒಡೆದಿವೆ ಎಂದು ನಿವಾಸಿಗಳು ತಿಳಿಸಿದ್ದಾರೆ.

**ತನಿಖೆ ನಂತರ ನಿಖರ ಕಾರಣ ಪತ್ತೆ:** ದಕ್ಷಿಣ ಕನ್ನಡ ಜಿಲ್ಲಾಡಳಿತದ ಸಲಹೆಯ ಮೇರೆಗೆ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಪ್ರಮುಖ ವ್ಯವಸ್ಥೆಗಳನ್ನು ಪರಿಶೀಲನೆ ನಡೆಸಿತು. ಇದರಲ್ಲಿ ಪ್ರಿಸಿಷನ್ ಅಪ್ರೋಚ್ ಲೈಟಿಂಗ್ ವರ್ಗ–1 ವ್ಯವಸ್ಥೆ ಹಾಗೂ ಸುತ್ತಮುತ್ತಲಿನ ರಸ್ತೆಗಳನ್ನೂ ಪರಿಶೀಲಿಸಲಾಗಿದ್ದು, ವಿಮಾನ ನಿಲ್ದಾಣದ ಕಾರ್ಯಾ ಚರಣೆಯ ಸಿದ್ಧತೆಯನ್ನು ಖಚಿತ ಪಡಿಸಿಕೊಳ್ಳಲಾಗಿದೆ.

ನವ ಮಂಗಳೂರು ಬಂದರು ಪ್ರಾಧಿಕಾರ (ಎನ್‌ಎಂಪಿಎ) ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ಬೆಂಕಿ ನಂದಿಸುವ ವಾಹನಗಳೊಂದಿಗೆ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಸದ್ಯ ಯಾವುದೇ ದೊಡ್ಡ ಮಟ್ಟದ ಆತಂಕಕ್ಕೆ ಕಾರಣವಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸೆಪರೇಟರ್ ಒಡೆದ ನಿಖರ ಕಾರಣವನ್ನು ವಿವರವಾದ ತನಿಖೆಯ ಬಳಿಕ ಪತ್ತೆಹಚ್ಚಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ.

# ಸನಾತನ ಧರ್ಮಕ್ಕೆ ಬ್ರಾಹ್ಮಣರ ಕೊಡುಗೆ ದೊಡ್ಡದು: ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ

**ಬೀದರ್, ಸೆ. 30:** ಸನಾತನ ಧರ್ಮದ ಮೌಲ್ಯ, ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ, ಆಧ್ಯಾತ್ಮಿಕತೆಗೆ ಬ್ರಾಹ್ಮಣರ ಕೊಡುಗೆ ಬಹಳ ದೊಡ್ಡದಿದೆ. ಬ್ರಾಹ್ಮಣರಿಂದಲೇ ಸನಾತನ ಧರ್ಮ ಶತಶತಮಾನಗಳಿಂದ ಇಂದಿನ ವರೆಗೂ ಉಳಿದಿದೆ ಎಂದು ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ತಿಳಿಸಿದರು.




ಸನಾತನ ಕಲಾ ಮತ್ತು ಸಾಂಸ್ಕೃತಿಕ ವಿಪ್ರ ಸಂಗೀತ ಬಳಗದಿಂದ ನಗರದಲ್ಲಿ ಆಯೋಜಿಸಿದ್ದ 'ಸ್ವರ ವೈಭವ' ಕಾರ್ಯಕ್ರಮ ಉದ್ಘಾಟಿಸಿ, ಸತನಾನ ಸಂಸ್ಕೃತಿ ಉಳಿಸಿ ಬೆಳೆಸುವುದು ಇಂದು ಅಗತ್ಯವಿದೆ. ಇದಕ್ಕೆ ಪೂರಕವಾಗಿ ಬ್ರಾಹ್ಮಣ ಸಮಾಜ ಸೇವೆ ಸಲ್ಲಿಸುತ್ತಿದೆ. ಉತ್ತಮ ಸಮಾಜದ ನಿರ್ಮಾಣಕ್ಕಾಗಿ ಬ್ರಾಹ್ಮಣ ಸಮಾಜ ಸದಾ ಶ್ರಮಿಸುತ್ತಿದೆ. ಯಾವಾಗಲೂ ರಾಷ್ಟ್ರಹಿತ, ಧರ್ಮಪರ, ಸಮಾಜ ಪರವಾಗಿ ಇನ್ನೊಬ್ಬರಿಗೆ ಒಳ್ಳೆಯ ಮಾರ್ಗದರ್ಶನ ಮಾಡುವ ಸಮಾಜ ಇದಾಗಿದೆ. ಇಲ್ಲಿ ಸನಾತನ ಹೆಸರಿನಲ್ಲಿ ವಿಪ್ರ ಸಂಗೀತ ಬಳಗ ಕಟ್ಟಿ ವಿವಿಧ ಚಟುವಟಿಕೆಗಳು ನಡೆಸುತ್ತಿರುವುದು ಶ್ಲಾಘನಾರ್ಹ

ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಮಹಾರಾಜ ಸಾನಿಧ್ಯ ವಹಿಸಿ, ಕಲಾವಿದರಿಗೆ ವಿಪ್ರ ಸಂಗೀತ ಬಳಗ ಸಾರ್ವಜನಿಕ ವೇದಿಕೆ ಒದಗಿಸಿರುವುದು ಉತ್ತಮ ಕೆಲಸ. ಎಲ್ಲರಲ್ಲೂ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ, ಹೊರಗೆ ತರುವ ಕೆಲಸ ದೊಡ್ಡದು ಎಂದು ಹೇಳಿದರು.

ವಿಪ್ರ ಸಂಗೀತ ಬಳಗದ ಅಧ್ಯಕ್ಷ ರಮೇಶ ಕುಲಕರ್ಣಿ ಅಧ್ಯಕ್ಷತೆ ವಹಿಸಿ, ಮನಸಲ್ಲೇ, ಮನೆಯಲ್ಲೇ ಹಾಡುವವರಿಗೆ ವೇದಿಕೆ ಕಲ್ಪಿಸಲಾಗಿದೆ. ಬರುವ ದಿನಗಳಲ್ಲಿ ಇನ್ನಷ್ಟು ಕಾರ್ಯಕ್ರಮಗಳು ನಡೆಸುವ ಯೋಜನೆಗಳಿವೆ ಎಂದರು.

ಪತ್ರಕರ್ತ ಸದಾನಂದ ಜೋಶಿ, ದೇವಿದಾಸ ಜೋಶಿ, ಸುಧಾ ಜಿ. ಉಪಸ್ಥಿತರಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಸರಸ್ವತಿ ಮಾತೆ, ಪರಶುರಾಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

## ರಂಜಿಸಿದ ಗಾನಲಹರಿ...

**ವಿಪ್ರ ಸಂಗೀತ ಬಳಗದ ಕಲಾವಿದರಾದ ಮಹೇಶ ಮೈಲೂರಕರ್, ಶಶಿಕಾಂತ ಜೋಶಿ, ರೇಖಾ ಮಕರಂದ ಕುಲಕರ್ಣಿ, ಗಿರೀಶ್ ಮೈಲೂರಕರ್, ರಮೇಶ ಕುಲಕರ್ಣಿ, ಸಂತೋಷಿ ಜೋಶಿ, ಕವಿತಾ ಉಪಾಧ್ಯೆ, ದೇವಿದಾಸ ಜೋಶಿ, ದಿಗಂಬರ ಜೋಶಿ, ವೀಣಾ ಜೋಶಿ, ಕಲ್ಯಾಣರಾವ್ ಕುಲಕರ್ಣಿ ಅವರು ಮೂರು ಗಂಟೆಗಳ ವರೆಗೆ ಕನ್ನಡ ಚಿತ್ರಗೀತೆಗಳ ಗಾನಲಹರಿ ಹರಿಸಿದರು.**

# ಅಡಕೆ ಹಾಳೆ ಬಳಸಿ ಎಥೆನಾಲ್ ಉತ್ಪಾದನೆ: ಮಂಗಳೂರು ವಿವಿ ವಿದ್ಯಾರ್ಥಿಗಳ ಪ್ರಯೋಗ ಯಶಸ್ವಿ

**ಮಂಗಳೂರು, ಸೆ.30:** ದೇಶದ ಇಂಧನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಹೊಸ ಪ್ರಯೋಗವನ್ನು ಮಂಗಳೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮಾಡಿದ್ದು, ಈ ಹಿನ್ನೆಲೆಯಲ್ಲಿ ಅಡಕೆ ಹಾಳೆಬಳಸಿ ಎಥೆನಾಲ್ ಉತ್ಪಾದಿಸುವ ಸಂಶೋಧನೆ, ಪ್ರಯೋಗ ಶಾಲೆಯಲ್ಲಿ ಯಶಸ್ಸು ಕಂಡಿದೆ.

ಚಾಮರಾಜನಗರ, ಮಂಡ್ಯ, ಬೆಳಗಾವಿ, ಬಾಗಲಕೋಟೆ, ಮೈಸೂರು ಸೇರಿದಂತೆ ವಿವಿಧ ಭಾಗಗಳಲ್ಲಿ ಕಬ್ಬಿನಿಂದ ಎಥೆನಾಲ್ ಉತ್ಪಾದನೆ ಮಾಡುತ್ತಿದ್ದು, ಇದೀಗ ಮಂಗಳೂರಿನ ವಿದ್ಯಾರ್ಥಿಗಳು ಅಡಕೆಹಾಳೆಯಲ್ಲಿ ಎಥೆನಾಲ್ ಉತ್ಪಾದನೆ ಮಾಡುವ ಪ್ರಯೋಗ ಯಶಸ್ವಿಯಾಗಿರುವುದರಿಂದ ಚಾಮರಾಜನಗರ ಸೇರಿ ಇನ್ನಿತರ ಜಿಲ್ಲೆಗಳಲ್ಲಿ ಈ ರೀತಿಯ ಪ್ರಯೋಗಕ್ಕೆ ಮುಂದಾಗಿದೆ.

ಮಂಗಳೂರು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ತಮ್ಮ ಪ್ರಾಜೆಕ್ಟ್‌ಗಾಗಿ ಅಡಕೆ ಹಾಳೆಗಳಿಂದ ಎಥೆನಾಲ್ ಸಂಶೋಧನೆ ಮಾಡಿದ್ದು, ಇದರ ವಿಸ್ತೃತ ರೂಪದ ಸಂಶೋಧನೆಗೆ ತಯಾರಿ ನಡೆಸಿದ್ದಾರೆ. ಆರಂಭಿಕ ಹಂತದ ಪ್ರಯೋಗಾಲಯದ ಸಂಶೋಧನೆಯಲ್ಲಿ ಅಡಕೆಹಾಳೆಯಿಂದ ಎಥೆನಾಲ್ ಉತ್ಪಾದನೆ ಸಾಧ್ಯತೆಯನ್ನು ಸಾಬೀತು ಪಡಿಸಿದೆ. ಇದು ಇನ್ನಷ್ಟು ಪ್ರಯೋಗಕ್ಕೆ ಮುನ್ನುಡಿ ಬರೆದಿದೆ.

ಈ ಹೊಸ ಪ್ರಯೋಗ ಯಶಸ್ಸು ಕಂಡರೆ ರಾಜ್ಯದ ಅಡಕೆ ಬೆಳೆಗಾರರ ಉಪ ಆದಾಯಕ್ಕೊಂದು ಮೂಲವಾಗ ಬಹುದು ಎಂದು ತಜ್ಞರು ಅಂದಾಜಿಸು ತ್ತಿದ್ದಾರೆ.




ಡಾ. ಗೋಪಾಲ ಮರಾತೆಯವರ ಸಂಶೋಧನಾ ಶಿಷ್ಯರಾಗಿರುವ ಡಾ. ಶಿವ ಎಸ್. ಮಾರ್ಗದರ್ಶನದಲ್ಲಿ ಈ ಪ್ರಾಯೋಗಿಕ ಸಂಶೋಧನೆ ನಡೆದಿದ್ದು, ಅಡಕೆಹಾಳೆಯನ್ನು ತಟ್ಟೆಗಳಿಗೆ ಉಪಯೋಗಿಸಿ ಉಳಿದ ತ್ಯಾಜ್ಯವನ್ನು ಬಳಸಿಕೊಂಡು ಈ ಸಂಶೋಧನೆ ನಡೆಸಲಾಗಿದೆ. ವಿದ್ಯಾರ್ಥಿ ಗಳ ಈ ಸಂಶೋಧನೆ ಚಾಮರಾಜನಗರ ಜಿಲ್ಲೆಯ ಅಡಕೆ ಬೆಳೆಗಾರರು, ರೈತರು, ಚಿಂತಕರಲ್ಲಿ ಸಂತಸ ಮೂಡಿಸಿದ್ದು, ಎಥೆನಾಲ್ ಉತ್ಪಾದಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿ ರೈತರು ಆದಾಯ ದ್ವಿಗುಣಗೊಳ್ಳುವ ನಿಟ್ಟಿನಲ್ಲಿ ಶ್ರಮಿಸ ಬೇಕೆಂದು ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಅಡಕೆಹಾಳೆಯಿಂದ ಎಥೆನಾಲ್ ಉತ್ಪಾದಿಸುವ ಮಂಗಳೂರು ವಿದ್ಯಾರ್ಥಿಗಳ ಸಂಶೋಧನೆ ಚಾಮರಾಜ ನಗರ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಆಸಕ್ತರಲ್ಲಿ ಇನ್ನಷ್ಟು ಪ್ರಯೋಗಕ್ಕೆ ಹೊಸ ಭಾಷ್ಯ ಬರೆದಿದೆ..

ಚಾಮರಾಜನಗರದ ರೈತ ಶಶಿಕುಮಾರ್ ಮಾತನಾಡಿ, ಅಡಕೆ ಬೆಳೆಯು ಸ್ಥಿರವಾಗಿರದೆ ಒಮ್ಮೊಮ್ಮೆ ಏರಿಳಿತಗಳು ಉಂಟಾಗುವುದರಿಂದ ಅಡಕೆಹಾಳೆಯಲ್ಲಿ ಎಥೆನಾಲ್ ಉತ್ಪಾದಿಸುವುದನ್ನು ವಿದ್ಯಾರ್ಥಿಗಳು ಸಾಬೀತುಪಡಿಸಿದ್ದಾರೆ. ಇದರಿಂದ ರೈತರಿಗೆ ಪರ್ಯಾಯ ಆದಾಯ ಸಿಗುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ.

ಮತ್ತೋರ್ವ ರೈತ ಶೈಲೇಂದ್ರ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಡಕೆಹಾಳೆಯಿಂದ ಎಥೆನಾಲ್ ಉತ್ಪಾದಿಸುವುದರಿಂದ ರೈತ ಹಾಗೂ ರಾಷ್ಟ್ರದ ಅಭಿವೃದ್ಧಿಗೂ ಪೂರಕ ಎಂದು ಹೇಳಿದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಈ ಹೊಸ ಸಂಶೋಧನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಹಳ ಗಂಭೀರವಾಗಿ ಪರಿಗಣಿಸಿ ಎಥೆನಾಲ್ ಉತ್ಪಾದನೆಗೆ ಹೆಚ್ಚು ಆಸಕ್ತಿ ವಹಿಸಬೇಕು ಎಂದು ಮನವಿ ಮಾಡಿದರು.

ಯಳಂದೂರಿನ ಖಾರಾಪುರದ ವಿರಕ್ತ ಮಠದ ಮಠಾಧೀಶ ಬಸವರಾಜ ಸ್ವಾಮಿ ಒಡೆಯರ್ ಮಾತನಾಡಿ, ವಿದ್ಯಾರ್ಥಿಗಳ ಈ ಹೊಸ ಸಂಶೋಧನೆ ಯಿಂದ ರೈತರಿಗೆ ಆದಾಯ ತಂದುಕೊಡುವಲ್ಲಿ ನೆರವಾಗುವುದರ ಜೊತೆಗೆ ದೇಶ ಆರ್ಥಿಕ ಸ್ವಾವಲಂಬಿ ಯಾಗಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

# ರಾಯಚೂರು ಸೌಹಾರ್ದ ಕ್ರಿಕೆಟ್ ಟೂರ್ನಿಗೆ ಜಿಲ್ಲಾಧಿಕಾರಿ ಎಸ್.ಪೂವಿತಾ ಚಾಲನೆ

**ರಾಯಚೂರು, ಸೆ. 30:** ಇಲ್ಲಿಯ ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಪತ್ರಕರ್ತರಿಗಾಗಿ ನಗರದ ಪೊಲೀಸ್ ಮೈದಾನದಲ್ಲಿ ಆಯೋಜಿಸಿರುವ ಸೌಹಾರ್ದ ಕ್ರಿಕೆಟ್ ಟೂರ್ನಿಗೆ ಚಾಲನೆ ನೀಡ 'ಲಾಯಿತು.



ಜಿಲ್ಲಾಧಿಕಾರಿ ಎಸ್. ಪೂವಿತಾ ಮಾತನಾಡಿ, ಅಧಿಕಾರಿಗಳು ಮತ್ತು ಪತ್ರಕರ್ತರ ನಡುವೆ ಇಂತಹ ಸೌಹಾರ್ದ ವಾತಾವರಣ ನಿರ್ಮಾಣವಾಗಬೇಕು. ಡಾಕೂಟಗಳ ಮೂಲಕ ಪರಸ್ಪರ ಮಾಹಿತಿ ಹಂಚಿಕೆ ಹಾಗೂ ಸ್ನೇಹಭಾವ ವೃದ್ಧಿಯಾಗುತ್ತದೆ. ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕ ಆರೋಗ್ಯ ಮತ್ತು ಫಿಟ್‌ನೆಸ್‌ಗೂ ಅನುಕೂಲವಾಗುತ್ತದೆ ಎಂದರು.

ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ಆಯುಕ್ತ ಬಿ. ವೆಂಕಟಸಿಂಗ್ ಮಾತನಾಡಿ, ರಿಪೋರ್ಟರ್ಸ್ ಗಿಲ್ಡ್ 25 ವರ್ಷಗಳಿಂದ ಪತ್ರಕರ್ತರಿಗಾಗಿ ವಿವಿಧ ಚಟುವಟಿಕೆಗಳನ್ನು ಆಯೋಜಿಸುತ್ತಿದೆ. ಬೆಳ್ಳಿ ಮಹೋತ್ಸವದ ಅಂಗವಾಗಿ ಕ್ರೀಡಾಕೂಟ ಹಮ್ಮಿಕೊಂಡಿ ರುವುದು ಉತ್ತಮ ಬೆಳವಣಿಗೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಮಾತನಾಡಿ, ಗಿಲ್ಡ್‌ನ 25ನೇ ವರ್ಷದ ಸಂಭ್ರಮದಲ್ಲಿ ಅಧಿಕಾರಿಗಳು, ಪತ್ರಕರ್ತರು ಸೇರಿದಂತೆ ಎಲ್ಲರನ್ನೂ ಒಗ್ಗೂಡಿಸಿರುವುದು ಶ್ಲಾಘನೀಯ ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಆರ್. ಗುರುನಾಥ್ ಮಾತನಾಡಿದರು.

## ಎಸಿಸಿ ಸಿಮೆಂಟ್ ಕಂಪನಿಯಿಂದ ಪರಿಸರ ಮಾಲಿನ್ಯ: ಕ್ರಮಕ್ಕೆ ಒತ್ತಾಯ




**ಕಲಬುರಗಿ, ಸೆ. 30:** ಜಿಲ್ಲೆಯ ವಾಡಿ ಜಂಕ್ಷನ್‌ನಲ್ಲಿರುವ ಎಸಿಸಿ ಸಿಮೆಂಟ್ ಕಾರ್ಖಾನೆಯ ಅವೈಜ್ಞಾನಿಕ ಕ್ರಮಗಳಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತಿದ್ದು, ಕೂಡಲೇ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀನಿವಾಸ ಗುಡಿ ವೃತ್ತದಲ್ಲಿ ಪ್ರತಿಭಟನಾ ಧರಣಿ ನಡೆಸಿದ ಸಂಘಟನೆ ಪದಾಧಿಕಾರಿಗಳು, ಎಫ್‌ಆರ್ ಘಟಕದಿಂದ ನಿರಂತರ ದುರ್ನಾತ ಬರುತ್ತಿರುವುದರಿಂದ ಸಾರ್ವಜನಿಕರ ಜೀವಕ್ಕೆ ಕಂಟಕ ಉಂಟಾಗುತ್ತಿದ್ದು ಜನರ ಆರೋಗ್ಯದ ಜತೆಗೆ ಚೆಲ್ಲಾಟ ವಾಡುತ್ತಿರುವ ಕಾರ್ಖಾನೆ ವಿರುದ್ಧ ಕ್ರಮ ಜರುಗಿಸಬೇಕು. ಕಾರ್ಖಾನೆಯಿಂದ ಹೊಗೆ ಮತ್ತು ರಾಸಾಯನಿಕ ಪದಾರ್ಥಗಳು ಹೊರಬರುತ್ತಿದ್ದು ಸ್ಥಳೀಯರು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಕಾರ್ಖಾನೆಯ ಗಣಿಗಾರಿಕೆಯಿಂದ ಅಂತರ್ಜಲ ಸಂಪೂರ್ಣ ಕಲುಷಿತಗೊಂಡು, ಜತೆಗೆ ಭೂಕುಸಿತ ಉಂಟಾಗಿ ಅಂತರ್ಜಲ ಬತ್ತಿ ಹೋಗುತ್ತಿದೆ. ತರಬೇತಿ ಪಡೆದ ಸ್ಥಳೀಯ ಯುವಕರಿಗೆ ಉದ್ಯೋಗ ನೀಡದೆ ವಂಚಿಸುತ್ತಿದೆ ಎಂದು ದೂರಿದರು.

### ಕಲಬುರಗಿಯಲ್ಲಿ ಈಡಿಗರ ಅಕ್ಕಮ್ಮ- ಶರಣ ಹೆಂಡದ ಮಾರಯ್ಯ ಸ್ಮರಣೋತ್ಸವಕ್ಕೆ ಸಿದ್ಧತೆ

# ನ.2ಕ್ಕೆ ಸ್ಮರಣೋತ್ಸವ, ಈಡಿಗ ಮಹಾಮಂಡಲ ಸಮಿತಿ ಪದಗ್ರಹಣ ಪ್ರಣವಾನಂದ ಶ್ರೀಗಳ ಹೇಳಿಕೆ

ಕಲಬುರಗಿ, ಸೆ.30: 12ನೇ ಶತಮಾನದಲ್ಲಿ ಶರಣ ಪರಂಪರೆಯಲ್ಲಿ ಬೆಳೆದ ಈಡಿಗರ ಅಕ್ಕಮ್ಮ ಹಾಗೂ ಶರಣ ಹೆಂಡದ ಮಾರಯ್ಯ ವಚನಗಳ ಪ್ರಚಾರಕ್ಕಾಗಿ ಹಾಗೂ ಈಡಿಗ ಮಹಾಮಂಡಳದ ಕಲಬುರಗಿ ಜಿಲ್ಲಾ ಮಟ್ಟದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನ. 2ರಂದು ಕಲಬುರಗಿಯಲ್ಲಿ ನಡೆಯಲಿದೆ ಎಂದು ಚಿತ್ತಾಪುರ ತಾಲೂಕು ಕರದಾಳು ಶಕ್ತಿಪೀಠದ ಶ್ರೀ ಡಾ.ಪ್ರಣವಾನಂದ ಶ್ರೀಗಳು ಹೇಳಿದರು.

ನವೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ನಾಗನಹಳ್ಳಿ ಸರ್ಕಲ್ ಬಳಿಯ ಹೋಟೆಲ್ ಬೃಂದಾವನ ಗ್ರಾಂಡ್‌ನ ಬಲದೇವ್ ಸಭಾಂಗಣದಲ್ಲಿ 12ನೇ ಶತಮಾನದಲ್ಲಿ 12 ಅನುಭವ ಮಂಟಪದಲ್ಲಿ ವಿಶ್ವಗುರು ಬಸವಣ್ಣನವರ ಜೊತೆಯಿದ್ದ ಶರಣ ಸಂಕುಲದ ಹೆಂಡದ ಮಾರಯ್ಯನ 12 ವಚನಗಳು ಹಾಗೂ ಯಾದಗಿರಿ ಜಿಲ್ಲೆಯ ಎಲೇರಿ ಗ್ರಾಮದ ಆಚಾರದ ಶರಣೆ ಈಡಿಗರ ಅಕ್ಕಮನ 154 ವಚನಗಳ ಕುರಿತಾಗಿ ಇಬ್ಬರು ವಿದ್ವಾಂಸರು



ಉಪನ್ಯಾಸ ನೀಡಲಿದ್ದು ಕಾರ್ಯಕ್ರಮದಲ್ಲಿ ಈಡಿಗ ಸಮಾಜದ ಮುಂದಾಳುಗಳಾದ ಕಾರ್ಕಳದ ಶಾಸಕ ಸುನಿಲ್ ಕುಮಾರ್ ಮತ್ತು ಸಾಗರದ ಶಾಸಕರಾದ ಬೇಳೂರು ಗೋಪಾಲಕೃಷ್ಣ ಸೇರಿದಂತೆ ಸ್ಥಳೀಯ ಮುಖಂಡರು ಭಾಗವಹಿಸಲಿದ್ದಾರೆ. ನಂತರ ಕಲಬುರಗಿ ಜಿಲ್ಲೆ ಈಡಿಗ ಮಹಾಮಂಡಲದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಕೂಡ ನಡೆಯಲಿದೆ ಎಂದು ಸ್ವಾಮೀಜಿ ಹೇಳಿದರು. ರಾಜ್ಯದಲ್ಲಿ ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳ ಆರ್ಥಿಕ, ಸಾಮಾಜಿಕ ಬಲಿಷ್ಠತೆಯನ್ನು ಕಂಡುಕೊಳ್ಳಲು ರಾಜ್ಯಮಟ್ಟದ ಈಡಿಗರ ಅಕ್ಕಮ್ಮ ಸಹಕಾರಿ ಬ್ಯಾಂಕ್ ಆರಂಭಗೊಳ್ಳಲು ಈಗಾಗಲೇ ನೋಂದಾವಣೆ ಮಾಫಿ ಅನುಮತಿ ಲಭ್ಯವಾಗಿದ್ದು ಶೇರು ಸಂಗ್ರಹ ಕೂಡ ಮಾಡಲಾಗುತ್ತಿದೆ. ಎಲ್ಲ ತಾಲೂಕುಗಳ ಈಡಿಗ ಸಮುದಾಯದ ಬಂಧುಗಳು ಸದಸ್ಯತ್ವವನ್ನು ನೋಂದಾಯಿಸಿಕೊಂಡು ಸದೃಢ ಬ್ಯಾಂಕ್ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ.

ಸಮುದಾಯದ ಜನರ ಆರ್ಥಿಕ ಅಭಿವೃದ್ಧಿಗಾಗಿ ಗೃಹ ಸಾಲ, ಶಿಕ್ಷಣ ಸಾಲ, ಉದ್ಯೋಗ ಸಾಲ ಆರಂಭಿಸಲಾಗುವುದು. ಸ್ವಸಹಾಯ ಗುಂಪುಗಳ ರಚನೆ ಮಾಡಲಾಗುವುದು. ಇದಕ್ಕಾಗಿ ರಾಜ್ಯಾದ್ಯಂತ ಶೇರು ಸಂಗ್ರಹ ಕಾರ್ಯ ಭರದಿಂದ ನಡೆಯುತ್ತಿದೆ. ಕಲಬುರಗಿ ಜಿಲ್ಲೆಯಲ್ಲೂ ಬ್ಯಾಂಕ್ ಬಗ್ಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಡಾ. ಪ್ರಣವಾನಂದ ಸ್ವಾಮೀಜಿ ಹೇಳಿದರು.

# ಜೆ.ಎಚ್.ಪಟೇಲ್ ಪ್ರತಿಷ್ಠಾನ (ರಿ.)



## ಧೀಮಂತ ನಾಯಕ, ಮಾಜಿ ಮುಖ್ಯಮಂತ್ರಿ
## ದಿವಂಗತ ಶ್ರೀ ಜೆ.ಎಚ್.ಪಟೇಲ್ ರವರ
## 96ನೇ ಜನ್ಮ ದಿನಾಚರಣೆ ಕಾರ್ಯಕ್ರಮ

### 'ಚುನಾವಣಾ ಸುಧಾರಣೆಯಿಂದ ಸಮಾಜದ ಸುಧಾರಣೆ'– ಚಿಂತನ ಮಂಥನ

**ದಿನಾಂಕ:** 01.10, 2026, ಗುರುವಾರ **ಸಮಯ:** ಬೆಳಗ್ಗೆ 11 ಗಂಟೆಗೆ **ಸ್ಥಳ:** ಕೊಂಡಜ್ಜಿ ಸಭಾಂಗಣ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಅರಮನೆ ರಸ್ತೆ, ಬೆಂಗಳೂರು

ಅಧ್ಯಕ್ಷತೆ



**ಶ್ರೀ ಸಿದ್ದರಾಮಯ್ಯ**
ಮಾಜಿ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಉದ್ಘಾಟನೆ



**ಶ್ರೀ.ಬಿ.ಎಸ್.ಯಡಿಯೂರಪ್ಪ**
ಮಾಜಿ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು



**ಬಸವರಾಜ ಹೊರಟ್ಟಿ**
ವಿಧಾನಸಭಾ ಪರಿಷತ್ ಸದಸ್ಯರು, ಮಾಜಿ ವಿಧಾನ ಪರಿಷತ್ ಸಭಾಪತಿಗಳು

ಮುಖ್ಯ ಅತಿಥಿಗಳು



**ಶ್ರೀ ಎಚ್.ಡಿ.ರೇವಣ್ಣ**
ವಿಧಾನಸಭಾ ಸದಸ್ಯರು

ಮುಖ್ಯ ಅತಿಥಿಗಳು



**ಶ್ರೀ ಬಿ.ಸೋಮಶೇಖರ್**
ಮಾಜಿ ಸಚಿವರು



**ಶ್ರೀಮತಿ ತೇಜಸ್ವಿನಿ ಅನಂತಕುಮಾರ್**
ಸಮಾಜ ಸೇವಕರು, ಶಿಕ್ಷಣ ತಜ್ಞರು, ಆದಮ್ಯ ಚೇತನ ಫೌಂಡೇಷನ್ ಸಂಸ್ಥಾಪಕರು

ಮುಖ್ಯ ಅತಿಥಿಗಳು



**ಶ್ರೀಮತಿ ಚುಕ್ಕಿ ನಂಜುಂಡಸ್ವಾಮಿ**
ಸಮಾಜ ಸೇಔಕರು ಹಾಗೂ ರೈತ ಮುಖಂಡರು

ಆತ್ಮೀಯರೇ, ದಿನಾಂಕ 01-10-2026 ರಂದು ರಾಜ್ಯ ಕಂಡ ವರ್ಚಸ್ವಿ ರಾಜಕಾರಣಿ ಹಾಗೂ ಮಾಜಿ ಮುಖ್ಯಮಂತ್ರಿ ಶ್ರೀ ಜೆ.ಹೆಚ್. ಪಟೇಲ್ ಅವರ 96ನೇ ಜನ್ಮದಿನಾಚರಣೆಯ ಅಂಗವಾಗಿ,'ಚುನಾವಣಾ ಸುಧಾರಣೆಯಿಂದ ಸಮಾಜದ ಸುಧಾರಣೆ" ಎಂಬ ಮಹತ್ವದ ಹಾಗೂ ಪ್ರಸಕ್ತ ವಿಷಯದ ಕುರಿತು ಆಯೋಜಿಸಿರುವ " ಚಿಂತನ-ಮಂಥನ " ಕಾರ್ಯಕ್ರಮದಲ್ಲಿ ತಾವೆಲ್ಲರೂ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕೋರುತ್ತೇನೆ.



**ಡಾ. ಪಿ.ಜಿ.ಆರ್. ಸಿಂಧ್ಯ**
ಮಾಜಿ ಸಚಿವರು

### ಸ್ವಾಗತ ಕೋರುವವರು

**ಮೋಹನ್ ಕೊಂಡಜ್ಜಿ, ಟಿ.ಜಿ.ಪಟೇಲ್, ಟಿ.ಪ್ರಭಾಕರ್, ಮಹಿಮ ಜೆ. ಪಾಟೀಲ್ ಮತ್ತು ಶ್ರೀ ಜಿ.ಹೆಚ್. ಪಟೇಲ್ ಅಭಿಮಾನಿಗಳು**